ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 45

29–7–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 45

### ಭದ್ರಾ ಜಲಾಶಯ ನೀರಿನ ಮಟ್ಟ



(ಅಡಿಗಳಲ್ಲಿ)

| | |
|---|---|
| ಇಂದಿನ ಮಟ್ಟ | -180.6 |
| ಗರಿಷ್ಠ ಮಟ್ಟ | -186 |
| ಒಳ ಹರಿವು | -37226 |
| ಹೊರ ಹರಿವು | -37226 |
| ರಿವರ್ ಬೆಡ್ | -2100 |

## ವೈಭವದಿಂದ ನಡೆದ ಶ್ರೀ ಸಿದ್ಧರಾಮೇಶ್ವರ ದೇವರ 63ನೇ ರಥೋತ್ಸವ

# ಮನಸ್ಸು ಶುದ್ಧಿಗೆ ವಚನಬೋಧೆ ಅಗತ್ಯ

**ದಾವಣಗೆರೆ:** ಪ್ರಸ್ತುತ ಕಲುಷಿತ ಮನಸ್ಸುಗಳ ಶುದ್ಧ ಮಾಡಲು ಬಸವಾದಿ ಶಿವಶರಣರ ವಚನಬೋಧೆ ಅಗತ್ಯವಾಗಿದೆ ಎಂದು ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ನಗರದ ವೆಂಕಭೋವಿ ಕಾಲೋನಿಯಲ್ಲಿ ಜರುಗಿದ ಶ್ರೀ ಸಿದ್ಧರಾಮೇಶ್ವರ ದೇವರ 63ನೇ ರಥೋತ್ಸವ ಹಾಗೂ ಲಿಂಗೈಕ್ಯ ಶ್ರೀ ಸಿದ್ಧರಾಮೇಶ್ವರ ಸ್ವಾಮೀಜಿಯವರ 23ನೇ ಸ್ಮರಣೋತ್ಸವದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ಬಸವಾದಿ ಶರಣರು ಕಾಯಕ ಸಂಸ್ಕೃತಿ ಜನರಿಗೆ ಜೀವನಾಡಿಯಾಗಿದ್ದವರು. ಆ ಕಾರಣದಿಂದಲೇ ಮದ್ದಳೆ ಕಾಯಕದ ಅಲ್ಲಮ ಪ್ರಭುವಿನ ಜ್ಞಾನಪ್ರಭೆಗೆ ಶೂನ್ಯಪೀಠದ ಪ್ರಥಮ ಅಧ್ಯಕ್ಷರಾಗಿ ಆಯ್ಕೆ ಮಾಡಿದರು. ವಯೋಬೇಧವಿಲ್ಲದೆ ಅರಿವಿಂಗೆ ಶರಣಾಗಿ ವಿಪ್ರ ಕುಲದ ಯುವಕ ಚನ್ನಬಸವವರನ್ನು ದ್ವೀತಿಯ ಪೀಠಾಧ್ಯಕ್ಷರಾನ್ನಾಗಿಸಿದರು. ಸರ್ವಸಿದ್ಧಿ ಯೋಗಿಗಳ ಯೋಗಿ ವಡ್ಡರ ಕುಲದ ಸಿದ್ಧರಾಮರ ತೃತೀಯ ಪೀಠಾಧ್ಯಕ್ಷರನ್ನಾಗಿಸಿದರು. ಶೂನ್ಯಪೀಠ ಜಾತ್ಯಾತೀತ ಪೀಠವಾಗಿದೆ ಎಂದು ತಿಳಿಸಿದರು.

ಇಂದು ಸ್ವಜಾತಿ ಮೀರಿ ತಮ್ಮ ಪೀಠಗಳಿಗೆ ವಿವಿಧ ಸಮಾಜದ ಯೋಗ್ಯರನ್ನು ಪೀಠಾಧಿಪತಿಗಳು ನೇಮಿಸಿದ ಮಠಗಳು ಮಾತ್ರ ಜಾತ್ಯಾತೀತ ಮಠಗಳು. ಉಳಿದವೆಲ್ಲ ಜಾತ್ಯಾತೀತ ಸೋಗಿನ ಜಾತಿ ಮಠಗಳೇ ಆಗಿವೆ ಎಂದು ಮಾರ್ಮಿಕವಾಗಿ ಹೇಳಿದರು.

ಶ್ರೀಗಳು ಸಿದ್ಧರಾಮೇಶ್ವರರು ಜಾತಿ, ಧರ್ಮ, ವರ್ಣಾಶ್ರಮದ ವಿರುದ್ಧ ಬಂಡೆದ್ದು ಮಾನವ ಜಾತಿ, ಧರ್ಮ ಒಂದೇ ಸಾರಿದವರು. ಸಿದ್ದರಾಮೇಶ್ವರರು ತನು, ಮನ, ಆತ್ಮ ಶುದ್ಧಿ ಮತ್ತು ಕಾಯಕದ ಮಹತ್ವವನ್ನು ಜಗತ್ತಿಗೇ ತಿಳಿ ಹೇಳಿದ್ದಲ್ಲದೇ ಕಾರ್ಯರೂಪಕ್ಕೂ ತಂದವರು ಎಂದು ಬಣ್ಣಿಸಿದರು.

ಕನಕ ಗುರುಪೀಠದ ಶ್ರೀ ನಿರಂಜನಾನಂದಪುರಿ ಸ್ವಾಮೀಜಿ ಮಾತನಾಡಿ, ಸಿದ್ದರಾಮೇಶ್ವರ ತತ್ವ, ಆದರ್ಶಗಳನ್ನು ಜನ ಮಾನಸದಲ್ಲಿ ಬಿತ್ತುವ ಕೆಲಸವನ್ನು ಲಿಂಗೈಕ್ಯ ಸಿದ್ದರಾಮೇಶ್ವರ ಮಹಾಸ್ವಾಮೀಗಳು ಆರಂಭಿಸಿದರು. ಅದನ್ನು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಅವರು ಮುಂದುವರೆಸಿಕೊಂಡು ಹೋಗುತ್ತಿದ್ದಾರೆ. ಎಲ್ಲಾ ಶೋಷಿತ, ಹಿಂದುಳಿದ ದಲಿತ, ತಳ ಸಮುದಾಯದ ಮಠಾಧೀಶರನ್ನು ಸೇರಿಸಿ ಜಾತ್ರೆಯ ವೈಭವದಂತೆ ಮೆರಗು ಹೆಚ್ಚಿಸಿದ್ದಾರೆ. ವರ್ಷದಿಂದ ವರ್ಷಕ್ಕೆ ರಥೋತ್ಸವದ ವೈಭವ ಇಮ್ಮಡಿಕೊಳ್ಳುತ್ತಿದೆ ರಥೋತ್ಸವ ಭೋವಿ ಜನಾಂಗದ ಸಂಘಟನೆ ಮತ್ತು ಸಂಸ್ಕಾರವನ್ನು ಮೂಡಿಸುವಂತಹ ಕಾರ್ಯ ಸಂತೋಷದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ವಾಲ್ಮೀಕಿ ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ವಾಲ್ಮೀಕಿ ಪ್ರಸನ್ನಾನಂದಪುರಿ ಮಹಾಸ್ವಾಮಿಗಳು ಮಾತನಾಡಿ, ಜಗತ್ತಿಗೆ ಸಮಾನತೆ ಸಂದೇಶವನ್ನು ಸಾರಿದವರು ಸಿದ್ದರಾಮೇಶ್ವರು, ಭಕ್ತಿಯೇ ಬಸವಲಿಂಗ, ಬಸವ ಎಂದರೆ ಜ್ಞಾನ ಹೀಗೆ ವಚನ ಸಾಹಿತ್ಯವನ್ನು ಇಡೀ ಜಗತ್ತಿಗೆ ಪರಿಚಯಿಸಿದವರು. ಅವರ ರಥೋತ್ಸವ ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿಯವರ ಸಾನಿಧ್ಯದಲ್ಲಿ ನಡೆಯುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಚಿತ್ರದುರ್ಗ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಜಗದ್ಗುರು ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ, ಹೊಸದುರ್ಗ ಶ್ರೀ ಚಿನ್ಮೂಲಾದ್ರಿ ಶಿಲಾಪುರಿ ಮಹಾಸಂಸ್ಥಾನ ಭಗೀರಥ (ಉಪ್ಪಾರ) ಗುರುಪೀಠದ ಜಗದ್ಗುರು ಶ್ರೀ ಪುರಷೋತ್ತಮಾನಂದಪುರಿ ಮಹಾ ಸ್ವಾಮಿಗಳು, ಚಿತ್ರದುರ್ಗದ ಶ್ರೀ ಯಾದವ ಮಹಾಸಂಸ್ಥಾನ (ಗೊಲ್ಲರ) ಗುರುಪೀಠ ಜಗದ್ಗುರು ಶ್ರೀ ಕೃಷ್ಣಯಾದವ ಮಹಾಸ್ವಾಮಿಗಳು, ತೀರ್ಥಹಳ್ಳಿ ಈಡಿಗರ ಶ್ರೀ ನಾರಾಯಣ ಗುರು ಮಹಾಸಂಸ್ಥಾನ ಜಗದ್ಗುರು ಶ್ರೀ ಆರ್ಯರೇಣುಕಾನಂದ ಮಹಾಸ್ವಾಮಿಗಳು, ಗುಬ್ಬಿ ಹೆಳವ ಗುರುಪೀಠದ ಶ್ರೀ ಬಸವ ಬೃಂಗೇಶ್ವರ ಮಹಾಸ್ವಾಮಿಗಳು, ಎರೇ ಹೊಸಹಳ್ಳಿ ಶ್ರೀ ವೇಮನ ಮಹಾಸಂಸ್ಥಾನ ಮಠ, ರೆಡ್ಡಿ ಗುರುಪೀಠದ ಜಗದ್ಗುರು ಶ್ರೀ ವೇಮನಾನಂದ ಮಹಾಸ್ವಾಮಿಗಳು, ತೆಲಸಂಗ ಅಥಣಿಯ ಶ್ರೀ ಕುಂಬಾರ ಗುಂಡಯ್ಯ ಗುರುಪೀಠದ ಜಗದ್ಗುರು ಶ್ರೀ ಬಸವ ಕುಂಬಾರಗುಂಡಯ್ಯಾ ಮಹಾಸ್ವಾಮಿಗಳು, ಮುದ್ದೇಬಿಹಾಳ ಶ್ರೀ ಹಡಪದಗುರುಪೀಠದ ಜಗದ್ಗುರು ಶ್ರೀ ಅನ್ನಧಾನಿ ಭಾರತೀಅಪ್ಪಣ್ಣ ಮಹಾಸ್ವಾಮಿಗಳು, ಕನಕ ಗುರುಪೀಠ ಶಾಖೆಯ ಪೂಜ್ಯ ಶ್ರೀ ಈಶ್ವರಾನಂದಪುರಿ ಸ್ವಾಮಿಗಳು, ಚಿತ್ರದುಗ–ರ್ ಮೇದಾರ ಗುರುಪೀಠದ ಶ್ರೀ ಇಮ್ಮಡಿ ಬಸವಪ್ರಭು ಕೇತೇಶ್ವರ ಸ್ವಾಮೀಜಿ ಹಾಗೂ ಇನ್ನಿತರ ಮಠಾಧೀಶರು ಸಾನಿಧ್ಯ ವಹಿಸಿದ್ದರು. ಸಮಾಜದ ಮುಖಂಡರಾದ ಎಚ್. ಜಯಣ್ಣ, .ಬಸವರಾಜ್, ಬಿ ಟಿ ಸಿದ್ದಪ್ಪ, ಎಚ್. ವೆಂಕಟೇಶ್, ವಿ. ಗೋಪಾಲ್, ಎನ್. ಆನಂದಪ್ಪ, ಶ್ಯಾಮ ಸಿದ್ದಪ್ಪ, ಚನ್ನಗಿರಿ ಗರಗ ರಾಜಪ್ಪ, ಜಗಳೂರು ಅರ್ಜುನಪ್ಪ, ಹೊನ್ನಳ್ಳಿ ಶಿವಮೂರ್ತ್ಯಪ್ಪ, ಮಾಯಕೊಂಡ ಶ್ರೀನಿವಾಸ, ಹರಿಹರ ಭದ್ರಿ ದೊರೆರಾಜ್, ಎಚ್. ಮಂಜುನಾಥ್, ಎಚ್. ಬಸವರಾಜ್, ಎಚ್. ಡಿ. ವಿಜಯ್, ಎ.ವಿ ನಾಗರಾಜ್, ಎಲ್. ನಾಗರಾಜ್, ಶ್ರೀನಿವಾಸ್, ಪಿ .ಎ ಪ್ರವೀಣ್, ಈಶ್ವರ್, ನಾರಾಯಣ, ಎಚ್. ಚಂದ್ರಪ್ಪ, ಆರ್. ಶ್ರೀನಿವಾಸ, ಮೂರ್ತಪ್ಪ ಭೋವಿಗುರುಪೀಠದ ಸಿಇಓ ಗೌನಹಳ್ಳಿ ಗೋವಿಂದಪ್ಪ, ಎಸ್‌ಜೆಎಸ್ ಜ್ಞಾನಪೀಠದ ಕಾಳಘಟ್ಟ ಹನುಮಂತಪ್ಪ, ಎಚ್. ಆಂಜನೇಯ ಭಾಗವಹಿಸಿದ್ದರು.

## ಬಿ. ದಯಾನಂದ ಸೇರಿ ನಾಲ್ವರು ಪೊಲೀಸ್ ಅಧಿಕಾರಿಗಳ ಅಮಾನತು ವಾಪಸ್

**ಬೆಂಗಳೂರು:** ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಅಮಾನತುಗೊಂಡಿದ್ದ ಆಗಿನ ಬೆಂಗಳೂರು ಪೊಲೀಸ್ ಆಯುಕ್ತ ಬಿ. ದಯಾನಂದ ಸೇರಿದಂತೆ ನಾಲ್ವರು ಪೊಲೀಸ್ ಅಧಿಕಾರಿಗಳ ಅಮಾನತು ಆದೇಶವನ್ನು ರಾಜ್ಯ ಸರ್ಕಾರ ಸೋಮವಾರ ಹಿಂಪಡೆದಿದೆ.

# ಹೊನ್ನಾಳಿ ಅವಳಿ ತಾಲೂಕಿನಲ್ಲಿ ಯುರಿಯಾ ರಸಗೊಬ್ಬರದ ಕೊರತೆ ಇಲ್ಲ: ಶಾಂತನಗೌಡ



**ಹೊನ್ನಾಳಿ :** ಹೊನ್ನಾಳಿ ಅವಳಿ ತಾಲೂಕಿನಲ್ಲಿ ಯುರಿಯಾ ರಸಗೊಬ್ಬರದ ಕೊರತೆ ಇಲ್ಲ, ರೈತರು ಈ ಬಗ್ಗೆ ಆತಂಕಪಡುವ ಅಗತ್ಯ ಇಲ್ಲ ಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.

ಸೋಮವಾರ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಅವಳಿ ತಾಲೂಕಿನ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಮಾದಲ್ಲಿ ಯುರಿಯಾ ರಸಗೊಬ್ಬರ ಸಿಗುತ್ತಿಲ್ಲ ಎಂಬ ಬಗ್ಗೆ ಕೂಗು ಕೇಳಿಬರುತ್ತಿರುವ ಹಿನ್ನಲೆಯಲ್ಲಿ ಸಂಬಂಧಪಟ್ಟ ಕೃಷಿ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿ, ಮುಂಗಾರು ಹಂಗಾಮಿನಲ್ಲಿ 35,800 ಹೆಕ್ಟರ್ ಕೃಷಿ ಭೂಮಿಯಲ್ಲಿ ಈಗಾಗಲೆ 29,500 ಹೆಕ್ಟರ್ ವಿವಿಧ ಬೆಳೆಗಳು ಬಿತ್ತನೆ ಮಾಡಿದ್ದು, ರೈತರು ಇದರಲ್ಲಿ ಬಹುಪಾಲು ಮೆಕ್ಕೆಜೋಳವನ್ನು ಬಿತ್ತನೆ ಮಾಡಿದ್ದಾರೆ.

ಈ ಬಾರಿ ಮುಂಗಾರು ಮಳೆ ಮೇ ಮೊದಲನೇ ವಾರದಿಂದಲ್ಲೇ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದರಿಂದ ರೈತರು ಬಿತ್ತನೆ ಕಾರ್ಯದಲ್ಲಿ ನೆಡಸಿದ್ದಾರೆ. ರೈತರು ಬೆಳೆಗಳಿಗೆ ಶೀತ ಆಗುತ್ತದೆ ಎಂಬ ತಪ್ಪು ಕಲ್ಪನೆಯಿಂದ ಹೆಚ್ಚು ಯುರಿಯಾ ಬಳಕೆಗೆ ಮುಂದಾಗಿರುವ ಕಾರಣ ಯುರಿಯಾ ರಸ ಗೊಬ್ಬರದ ಕೊರತೆ ಬಗ್ಗೆ ಹೆಚ್ಚು ಚರ್ಚೆಯಾಗುತ್ತಿದೆ, ಆದರೆ ಅವಳಿ ತಾಲೂಕಿನಲ್ಲಿ 7,400 ಮೆಟ್ರಿಕ್ ಟನ್ ಬೇಡಿಕೆ ಇದ್ದು, ಅದರಲ್ಲಿ 5,600 ಮೆಟ್ರಿಕ ಟನ್ ಬಳಕೆಯಾಗಿದ್ದು, ಬಾಕಿ ಇರುವ 1800 ಮೆಟ್ರಿಕ್ ಟನ್ ಬರಬೇಕಿದ್ದು, ಇದು ಕೂಡ ದಾಸ್ತಾನು ಮಾಡಲಾಗಿದೆ, ಇದರಿಂದ ಗೊಬ್ಬರ ಕೊರತೆಯ ಪ್ರಶ್ನೆಯೇ ಇಲ್ಲ ಎಂದು ಶಾಸಕರು ವಿವರಿಸಿದರು.

ಯುರಿಯಾ ಅತೀ ಬಳಿಕೆಯಿಂದ ಬೆಳೆಗಳಿಗೆ ಹಾನಿ : ಸಭೆಯಲ್ಲಿ ಹಾಜರಿದ್ದ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಜಿಯಾಉಲ್ಲಾ ಮಾತನಾಡಿ, ಯುರಿಯಾ ರಸಗೊಬ್ಬರವನ್ನು ಅತೀಯಾಗಿ ಬಳಕೆ ಮಾಡಿದರೆ ಬೆಳೆಗಳು ಮೃದು ಆಗಿ ಮುಂದಿನ ದಿನಗಳಲ್ಲಿ ಕೀಟಬಾದೆ ಉಂಟಾಗುವುದರಿಂದ ಯುರಿಯಾ ಗೊಬ್ಬರವನ್ನು ಅತ್ಯಂತ ಮಿತ ಪ್ರಮಾಣದಲ್ಲಿ ಬಳಸಬೇಕು ಎಂದು ಅವರು ಸಭೆಗೆ ತಿಳಿಸಿದರು.

ನ್ಯಾನೋ ಯುರಿಯಾ ಗೊಬ್ಬರ ಬೆಳೆಗಳಿಗೆ ಅತ್ಯಂತ ಸಹಕಾರಿಯಾಗಿದ್ದು, ಈ ಬಗ್ಗೆ ರೈತರಿಗೆ ಮಾಹಿತಿ ಕೊರತೆ ಇರುವ ಕಾರಣ ತಾಲೂಕಿನಾಧ್ಯಂತ ನ್ಯಾನೋ ಗೊಬ್ಬರದ ಬಳಕೆಯ ಬಗ್ಗೆ ಪ್ರಾತ್ಯೇಕ್ಷತೆ ಹಮ್ಮಿಕೊಂಡು ರೈತರಿಗೆ ತಿಳುವಳಿಕೆ ನೀಡಲಾಗುವುದು ಎಂದು ಹೇಳಿದರು.

ಉಪಕೃಷಿ ನಿರ್ದೇಶಕ ರೇವಣ್ಣಸಿದ್ದನಗೌಡ ಮಾತನಾಡಿ, ಸಾವಯುವ ಕೃಷಿ ಪದ್ಧತಿ ಅಳವಡಿಕೊಳ್ಳಲು ರೈತರಿಗೆ ಈಗ ಸಕಾಲವಾಗಿದ್ದು ರೈತರು ಸಾವಯುವ ಕೃಷಿ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳಿ ಎಂದು ರೈತರಲ್ಲಿ ಮನವಿ ಮಾಡಿದರು.

ಬಿಇಓ ನಿಂಗಪ್ಪ ಮಾಹಿತಿ ನೀಡಿ, ವಿದ್ಯಾರ್ಥಿಗಳ ಕೊರತೆಯಿಂದಾಗಿ ನ್ಯಾಮತಿ ತಾಲೂಕಿನ ಮೂರು ಸರಕಾರಿ ಪ್ರಾಥಮಿಕ ಶಾಲೆಗಳನ್ನು ಮುಚ್ಚಲಾಗಿದೆ ಕಡಿಮೆ ಸಂಖ್ಯೆಯಲ್ಲಿದ್ದ ಮಕ್ಕಳನ್ನು ಪಕ್ಕದ ಸರಕಾರಿ ಶಾಲೆಗೆ ದಾಖಲಾತಿ ಮಾಡಲಾಗಿದೆ ಎಂದು ತಿಳಿಸಿದರು.

ಮಳೆಗಾಲ ಆದ್ದರಿಂದ ಕೂಡಲೆ ಬಿಇಓ ಅವರು ಅವಳಿ ತಾಲೂಕಿನ ಎಲ್ಲಾ ಸರಕಾರಿ ಶಾಲೆಗಳಿಗೆ ಬೇಟಿ ನೀಡಿ ಅತ್ಯಂತ ಶಿಥೀಲಗೊಂಡ ಶಾಲಾ ಕಟ್ಟಡಗಳ ಬಗ್ಗೆ ಹಾಗೂ ಶಾಲಾ ಕಟ್ಟಡಗಳ ಮೇಲೆ ವಿದ್ಯುತ್ ತಂತಿ ಹಾದು ಹೋಗಿರುವ ಕುರಿತು ಸಮಗ್ರ ವಿವರಗಳನ್ನು ತಮಗೆ

## ರಾಜ್ಯದಲ್ಲಿ ಯೂರಿಯಾ ಅಭಾವ: ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಕಿಶಾನ್ ಮೋರ್ಚಾದಿಂದ ಪ್ರತಿಭಟನೆ!

**ಬೆಂಗಳೂರು:** ರಾಜ್ಯದಲ್ಲಿ 'ಯೂರಿಯಾ' ರಸಗೊಬ್ಬರ ಅಭಾವ ಉಂಟಾಗಿದೆ ಎಂದು ಆರೋಪಿಸಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಮೋರ್ಚಾ ಇಂದಿನಿಂದ ಒಂದು ವಾರದ ಪ್ರತಿಭಟನೆಯನ್ನು ಆರಂಭಿಸಿದೆ.

ದಾವಣಗೆರೆ, ಕೊಪ್ಪಳ, ಧಾರವಾಡದಲ್ಲಿ ಪ್ರತಿಭಟನೆ ನಡೆಸಿದ ಪಕ್ಷದ ರೈತರು, ರಾಜ್ಯ ಸರ್ಕಾರ ರೈತರಿಗೆ ಸಮರ್ಪಕವಾಗಿ ಯೂರಿಯಾವನ್ನು ಪೂರೈಸಬೇಕು ಎಂದು ಒತ್ತಾಯಿಸಿದರು.

ದಾವಣಗೆರೆಯಲ್ಲಿ ಮಾಜಿ ಸಚಿವ ಎಂ. ಪಿ. ರೇಣುಕಾಚಾರ್ಯ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಬಳಿಕ ಪೊಲೀಸರು ರೇಣುಕಾಚಾರ್ಯ ಮತ್ತಿತರನ್ನು ಬಂಧಿಸಿ ವಾಹನದಲ್ಲಿ ಕರೆದೊಯ್ದರು. ರಾಜ್ಯದ ವಿವಿಧೆಡೆ ಇದೇ ರೀತಿಯ ಪ್ರತಿಭಟನೆ ನಡೆಯಿತು ಎಂದು ಪಕ್ಷದ ಪದಾಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ಅಸಮರ್ಪಕ ನಿರ್ವಹಣೆಯೂ ರೈತರಲ್ಲಿ ಆತಂಕ ಮೂಡಿಸಿರುವುದರಿಂದ ರಾಜ್ಯದ ವಿವಿಧೆಡೆ ಯೂರಿಯಾದ ಕೃತಕ ಅಭಾವ ಸೃಷ್ಟಿಯಾಗಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಭಾನುವಾರ ಆರೋಪಿಸಿದ್ದರು.

ಯೂರಿಯಾ ಅಭಾವದ ವಿರುದ್ಧ ರೈತರ ಪ್ರತಿಭಟನೆ ವರದಿ ಉಲ್ಲೇಖಿಸಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ವಿಪಕ್ಷ ನಾಯಕ ಆರ್.ಅಶೋಕ್, ಈ ಬಾರಿ ಒಂದು ತಿಂಗಳಿಗೂ ಮುಂಚಿತವಾಗಿ ಮುಂಗಾರು ಆಗಮಿಸಿದ್ದು, ರೈತರಿಗೆ ಅಗತ್ಯ ಪ್ರಮಾಣದ ರಸಗೊಬ್ಬರ ವಿತರಿಸಲು ಸರ್ಕಾರ ಗಮನ ಹರಿಸಬೇಕು ಮತ್ತು ಸೂಕ್ತ ಸಮಯಕ್ಕೆ ಪೂರೈಸಬೇಕು ಎಂದು ಒತ್ತಾಯಿಸಿದ್ದಾರೆ.

## ಸಂತೆಬೆನ್ನೂರಿನಲ್ಲಿ ಚನ್ನಗಿರಿ ತಾಲೂಕು ಪತ್ರಕರ್ತ ಸಂಘದಿಂದ ಪತ್ರಿಕಾದಿನಾಚರಣೆ;

# ವಸ್ತುನಿಷ್ಠ ವರದಿ ಮಾಡುವುದು ಪತ್ರಕರ್ತನ ಕರ್ತವ್ಯ: ಶ್ರೀಡಾ.ಗುರುಬಸವ ಸ್ವಾಮೀಜಿ



**ಚನ್ನಗಿರಿ:** ಸಮಾಜದ ಜವಾಬ್ದಾರಿ ಸ್ಥಾನದಲ್ಲಿರುವಮ ಮೂದ್ರಣ ಮಾಧ್ಯಮ ವಸ್ತು ನಿಷ್ಠವಾದಂತಹ ವರದಿಗಳನ್ನು ಮಾಡುತ್ತಿದ್ದಾಗ ಪತ್ರಿಕೆಗಳ ಮಹತ್ವ ಹೆಚ್ಚಾಗಿರುತ್ತದೆ, ಹಾಗೂ ದಾಖಲಾತಿ ಯಾಗಿರುತ್ತವೆ ಎಂದು ಪಾಂಡೋಮಟ್ಟಿ ವಿರಕ್ತಮಠದ ಶ್ರೀಡಾ.ಗುರುಬವಸ ಸ್ವಾಮೀಜಿ ಹೇಳಿದರು.

ಸಂತೆಬೆನ್ನೂರು ಪಟ್ಟಣದ ಕೆಪಿಎಸ್ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಸೋಮವಾರ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಏರ್ಪಡಿಸಿದ್ದ ಪತ್ರಿಕಾದಿನಾಚರಣೆ ಮತ್ತು ಕೆಳದಿರಾಣಿ ಚನ್ನಮ್ಮಾಜಿ ಮಾಧ್ಯಮ ಪ್ರಶಸ್ತಿ ಸಮಾರಂಭದ ದಿವ್ಯ ಸಾನಿಧ್ಯವನ್ನು ವಹಿಸಿ ಮಾತನಾಡಿದರು.

ದಿನಪತ್ರಿಕೆಗಳಲ್ಲಿ ಬರುವಂತಹ ಸುದ್ದಿಗಳ ವಿಚಾರಗಳು ದಾಖಲೆಗಳಾಗಿದ್ದು ಯಾವುದೇ ಘಟನೆಗಳಿಗೆ ಸಂಬಂಧ ಪಟ್ಟಂತೆ ಸಾಕ್ಷಿಕರಿಸಲು ಪತ್ರಿಕೆಗಳ ವರದಿಗಳ ವರದಿಗಳು ಬಹುಮುಖ್ಯ ಪಾತ್ರ ವಹಿಸಲು ಸಹಕಾರಿಯಾಗಿವೆ. ಇದರಿಂದ ಮುದ್ರಣ ಮಾಧ್ಯಮಗಳು ಬಲವಾಗಿ ನೆಲೆಯಾಗಿರಲು ಸಾಧ್ಯವಾಗಿದೆ. ವಿದ್ಯಾರ್ಥಿಗಳು ಬುದ್ದಿವಂತ, ಜ್ಞಾನವಂತ ರಾಗಿರಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ. ಮೊಬೈಲ್, ಚಾಟಿಂಗ್, ಸಿನೀಮಾ ಹಾಗೂ ಕ್ರಿಕೆಟ್‌ಗಳ ಗೀಳಿನಿಂದ ವಿದ್ಯಾರ್ಥಿಗಳು ದೂರವಿದ್ದು ನೋಡುವುದಕ್ಕಿಂತ ಓದುವುದರಲ್ಲಿ ತಲ್ಲೀನರಾಗಿರಬೇಕು ಎಂದರು.

ಸಮಾರಂಭದ ಉದ್ಘಾಟನೆಯನ್ನು ನೆರವೇರಿಸಿ ಮಾರನಾಡಿದ ಶಾಸಕ ಬಸವರಾಜ ವಿ.ಶಿವಗಂಗಾ ರವರು ಮಾತನಾಡಿ ತಾಲೂಕಿನಲ್ಲಿರುವ ಪತ್ರಕರ್ತರು ಒಗ್ಗಟ್ಟಿನಿಂದ ಇರಬೇಕಾಗಿದ್ದು ಸತ್ಯ ನಿಷ್ಠವಾದ ವರದಿಗಳನ್ನು ಮಾಡುತ್ತಾ ಮಾಧ್ಯಮಗಳಿಗೆ ಶಕ್ತಿ ತುಂಬಬೇಕು. ತಾಲೂಕಿನ ಕ್ರೀಯಾಶೀಲ ಪತ್ರಕರ್ತರನ್ನು ಗುರುತಿಸಿ ಅವರಿಗೆ ಸರ್ಕಾರದಿಂದ ಮನೆಗಳನ್ನು ನಿರ್ಮಿಸಿ ಕೊಡುತ್ತೇನೆ. ಧತ್ತಿನಿಧಿ ನೀಡುವುದಾಗಿ ಭರವಸೆ ನೀಡಿದರು.

ನಾನು ಈ ಹಿಂದೆ ವಿಕ ಸಂದರ್ಶನದಲ್ಲಿ ತಿಳಿಸಿದಂತೆ ಕ್ಷೇತ್ರದಲ್ಲಿನ 42ಕೆರೆಗಳನ್ನು ತುಂಬಿಸುತ್ತೇನೆ ಎಂದು ತಿಳಿಸಿದ್ದೆ, ಆದರೆ 69ಕೆರೆಗಳನ್ನು ತುಂಬಿಸುವ ವ್ಯವಸ್ಥೆಯನ್ನು ಮಾಡಿದ್ದೇನೆ. ಕ್ಷೇತ್ರದಲ್ಲಿ ವಿದ್ಯುತ್ ಸಮಸ್ಯೆಗಳಾಗದಂತೆ 33 ಮೇಘಾವ್ಯಾಟ್ ವಿದ್ಯುತ್‌ನ್ನು ಉತ್ಪಾಧನೆ ಮಾಡಲು ಈಗಾಗಲೇ ಒತ್ತು ನೀಡಲಾಗಿದೆ. ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವವನ್ನು ನೀಡಲು 15ಕೋಟಿ ಹಣವನ್ನು ಶಿಕ್ಷಣ ಕ್ಷೇತ್ರಕ್ಕೆ ನೀಡುತ್ತೀರುವುದಾಗಿ ತಿಳಿಸಿದರು.

ಮಾಯಕೊಂಡ ಕ್ಷೇತ್ರದ ಶಾಸಕ ಕೆ.ಎಸ್.ಬಸವಂತಪ್ಪ ಮಾತನಾಡಿ ಮೊಬೈಲ್‌ಗಳು ಚಲಾವಣೆಗೆ ಬರುವ ಮೊದಲು ಪತ್ರಿಕೆಗಳು ಜನಪ್ರೀಯತೆಯನ್ನು ಪಡೆದಿದ್ದವು.

## ದರ್ಶನ್ ಫ್ಯಾನ್ಸ್ ವಿರುದ್ಧ ಪೊಲೀಸ್ ಆಯುಕ್ತರಿಗೆ ನಟಿ ರಮ್ಯಾ ದೂರು! ಅತ್ಯಾಚಾರ, ಜೀವ ಬೆದರಿಕೆ ಟ್ರೋಲ್ ವಿರುದ್ಧ ಕಿಡಿ

**ಬೆಂಗಳೂರು:** ಸಾಮಾಜಿಕ ಮಾಧ್ಯಮಗಳಲ್ಲಿ ಅವಹೇಳನಕಾರಿ ಸಂದೇಶ ಹಿನ್ನೆಲೆಯಲ್ಲಿ ದರ್ಶನ್ ಫ್ಯಾನ್ಸ್ ವಿರುದ್ಧ ಕಿಡಿಕಾರಿರುವ ನಟಿ ರಮ್ಯಾ, ಇದೀಗ ಬೆಂಗಳೂರು ಕಮಿಷನರ್ ಗೆ ದೂರು ಕೊಟ್ಟಿದ್ದಾರೆ.



ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರಮ್ಯಾ, ನಾನೊಂದು ಸುಪ್ರೀಂಕೋರ್ಟ್ ಆದೇಶವನ್ನು ಶೇರ್ ಮಾಡಿದ್ದೆ. ಅದಕ್ಕೆ ಪ್ರತಿಯಾಗಿ ತುಂಬಾ ಕೆಟ್ಟದಾಗಿ ಮೆಸೇಜ್ ಹಾಕಿ, ಕರೆ ಮಾಡಿ ಬೆದರಿಕೆ ಹಾಕುತ್ತಿದ್ದಾರೆ. ರೇಣುಕಾಸ್ವಾಮಿ ಬದಲು ನಿಮ್ಮನ್ನು ಕೊಲೆ ಮಾಡ್ಬೇಕಿತ್ತು. ನಿಮ್ಮನ್ನು ಅತ್ಯಾಚಾರ ಮಾಡ್ತೀವಿ ಎಂದೆಲ್ಲಾ ಸಂದೇಶ ಕಳುಹಿಸಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ದೂರು ದಾಖಲಿಸಿದ್ದೇನೆ. ಇಲ್ಲೇ ಸೈಬರ್? ಆಫೀಸ್? ಇದೆ. ಅಲ್ಲಿಗೆ ಫಾರ್ವರ್ಡ್ ಮಾಡುವುದಾಗಿ ಅವರು ಅವರು ಹೇಳಿದ್ದಾರೆ. 43 ಕಮೆಂಟ್?ಗಳನ್ನು ಮೆನ್ಷನ್ ಮಾಡಲಾಗಿದೆ.

# ಮಳೆಗಾಲ ಮುಗಿದ ನಂತರ 6.50 ಕೋಟಿ ರೂ. ವೆಚ್ಚದಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ಆರಂಭ

**ಹೊನ್ನಾಳಿ :** ಜನವಸತಿ ಪ್ರದೇಶಗಳಿಗೆ ನದಿ ನೀರು ನುಗ್ಗುವುದನ್ನು ತಡೆಯಲು ತಡೆಗೋಡೆ ನಿರ್ಮಾಣಕ್ಕೆ ಜಿಲ್ಲಾಡಳಿತದಿಂದ 6.50 ಕೋಟಿ ಅನುದಾನ ಮೀಸಲಿರಿಸಿದೆ ಮಳೆಗಾಲ ಮುಗಿಯುತ್ತಿದ್ದಂತೆ ತಡೆಗೋಡೆ ನಿರ್ಮಾಣ ಕಾಮಗಾರಿ ಪ್ರಾರಂಭಿಸಲಾಗುವುದು ಎಂದು ಶಾಸಕ ಡಿ.ಜಿ.ಶಾಂತನಗೌಡ ತಿಳಿಸಿದರು.

ಸೋಮವಾರ ಪಟ್ಟಣದ ತುಂಗಭದ್ರಾ ನದಿ ತೀರದಲ್ಲಿರುವ ಬಾಲ್‌ರಾಜ್‌ಘಾಟ್ ಪ್ರದೇಶದದಲ್ಲಿ ಮನೆಗಳಿಗೆ ನುಗ್ಗಿದ್ದು, ಸಂತ್ರಸ್ಥರು ತಂಗಿರುವ ಆರೈಕೆ ಕೇಂದ್ರಕ್ಕೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಅವರೊಂದಿಗೆ ಬೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಕೆಲವು ದಶಕಗಳಿಂದ ಈ ಪ್ರದೇಶದಲ್ಲಿ ನೆರೆಹಾವಳಿ ಸಾಮನ್ಯವಾಗಿದ್ದು, ಈ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಇನ್ನೆ ಕೆಲವೇ ತಿಂಗಳುಗಳಲ್ಲಿ ಜಿಲ್ಲಾಡಳಿತ ಸಹಕಾರದಿಂದ ಇಲ್ಲಿ ತಡೆಗೋಡೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಹೇಳಿದರು.

ಪಟ್ಟಣದ ಹೊರ ವಲಯದಲ್ಲಿರುವ ಮಲ್ಲದೇವರಕಟ್ಟೆಯಲ್ಲಿರುವ 29 ಎಕರೆ ಜಮೀನನ್ನು ಇನ್ನೊಂದು ವಾರದಲ್ಲಿ ಜಿಲ್ಲಾಧಿಕಾರಿಗಳು ಪುರಸಭೆಗೆ ಹಸ್ತಾಂತರಿಸಲಿದ್ದಾರೆ, ನಂತರ ಅಲ್ಲಿ ಗಿಡಗಂಟೆಗಳನ್ನು ತೆಗೆಸಿ, ಸ್ವಚ್ಚತೆ ಮಾಡಿ, ನಿವೇಶನಗಳನ್ನು ಗುರ್ತಿಸಲಾಗುವುದು. ನದಿ ತೀರ ಪ್ರದೇಶದಲ್ಲಿ ಯಾರಿಗೆ ನಿಜವಾಗಲೂ ಮನೆ ಇಲ್ಲದೆ ಇಲ್ಲಿ ವಾಸ ಮಾಡುತ್ತಿದ್ದಾರೋ ಅಂತಹ ಅರ್ಹ ಫಲಾನುಭವಿಗಳಿಗೆ ಮಲ್ಲದೇವರಕಟ್ಟೆಯಲ್ಲಿ ನಿವೇಶನ ನೀಡಲಾಗುವುದು ಎಂದು ತಿಳಿಸಿದರು.



ಶಾಸಕ ಡಿ.ಜಿ.ಶಾಂತನಗೌಡ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಹಾಗೂ ಇತರ ಅಧಿಕಾರಿಗಳು ಹೊನ್ನಾಳಿ ಪಟ್ಟಣದ ತುಂಗಭದ್ರಾ ನದಿ ಪ್ರದೇಶದಲ್ಲಿ ನದಿ ನೀರು ಏರಿಕೆಯಾಗಿರುವುದನ್ನು ಪರಿಶೀಲಿಸುತ್ತಿರುವುದು.

ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಮಾತನಾಡಿ, ತುಂಗಭದ್ರ ನದಿ ಅಚ್ಚುಕಟ್ಟು ಪ್ರದೇಶಗಳಲ್ಲಿ ಹೆಚ್ಚಿನ ಮಳೆಯಾಗುತ್ತಿದ್ದು. ತುಂಗಭದ್ರಾ ಜಲಾಶುದಿಂದ 1.10 ಲಕ್ಷ ಕ್ಯೂಸೆಕ್ ನೀರನ್ನು ನದಿಗೆ ಬಿಟ್ಟಿದ್ದಾರೆ, ಇಲ್ಲಿ ಮಳೆ ಕಡಿಮೆಯಾಗಿದ್ದರೂ ಜಲಾನಯನ ಪ್ರದೇಶಗಳಲ್ಲಿ ಇನ್ನು ಒಂದು ವಾರ ಮಳೆಯಾಗುತ್ತದೆ ಎಂದು ಹವಮಾನ ಇಲಾಖೆ ಇತಿಳಿಸಿದೆಆದ್ದರಿಂದ ನದಿ ಪಾತ್ರದಲ್ಲಿರುವ ಜನತೆ ಸುರಕ್ಷತೆ ಸ್ಥಳಕ್ಕೆ ಸ್ಥಳಾಂತೆಗೊಳ್ಳಬೇಕು ಹಾಗೂ ರೈತರು ನದಿಗೆ ಜಾನುವಾರಗುಗಳನ್ನು ಇಳಿಸಬಾರದು ಎಂದು ರೈತರಲ್ಲಿ ಮನವಿ ಮಾಡಿದರು.

ಈ ವೇಳೆ ನದಿಪಾತ್ರದ ನಗರವಾಸಿಗಳು ನಮಗೆ ಶಾಶ್ವತವಾಗಿ ಬೇರೆ ಕಡೆ ಮನೆ ಕಟ್ಟಿಸಿಕೊಡಿ ಎಂದು ಡಿಸಿ ಅವರಿಗೆ ಮನವಿ ಮಾಡಿದಾಗ ನದಿ ಪಕ್ಕದಲ್ಲೇ ಮನೆ ಕಟ್ಟಿಕೊಂಡಿರುವುದು ತಪ್ಪು ಎಂದು ಜಿಲ್ಲಾಧಿಕಾರಿಗಳು ತಿಳಿಸಿದಾಗ, ನಿರುತ್ತರಾದ ನಿವಾಸಿಗಳು ಸರಿ ಸ್ವಾಮಿ ನಮಗೆ ಒಂದು ನೆಲೆ ಕಲ್ಪಿಸಿಕೊಡಿ ನಾವು ಇಲ್ಲಿಂದ ತೆರಳುತ್ತೇವೆ ಎಂದು ಮನವಿ ಮಾಡಿಕೊಂಡರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಇಂದು ಹಣದ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ ಆದರೆ ನಿಮ್ಮ ಕೋಪದ ಸ್ವಭಾವದಿಂದ ಇಂದು ಹಣವನ್ನು ಗಳಿಸುವಲ್ಲಿ ಸಾಧ್ಯವಾಗದಿರಬಹುದು. ಸಾಮಾಜಿಕ ಚಟುವಟಿಕೆಗಳು ಆನಂದಮಯವಾಗಿದ್ದರೂ ನೀವು ಇತರೊಂದಿಗೆ ನಿಮ್ಮ ರಹಸ್ಯಗಳನ್ನು ಹಂಚಿಕೊಳ್ಳಬಾರದು. ಪ್ರೀತಿ ಯಾವಾಗಲೂ ಭಾವಪೂರ್ಣವಾಗಿದೆ, ಮತ್ತು ನೀವು ಇಂದು ಇದನ್ನು ಅನುಭವಿಸುತ್ತೀರಿ.

### ವೃಷಭ ರಾಶಿ

ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ ಮತ್ತು ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ. ಇಂದು ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು.

### ಮಿಥುನ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು. ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ – ನಿಮ್ಮ ಪ್ರೀತಿಪಾತ್ರರು ನಿಮಗೆ ಅಪಾರ ಸಂತೋಷ ತರುತ್ತಾರೆ.

### ಕರ್ಕ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಊಹೆಗಳು ಲಾಭ ತರುತ್ತವೆ. ನೀವು ಸ್ನೇಹಿತರ ಮೂಲಕ ಪ್ರಮುಖ ಸಂಪರ್ಕಗಳನ್ನು ಹೊಂದುತ್ತೀರಿ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು. ಬಿಡುವಿಲ್ಲದ ಬೀದಿಗಳಲ್ಲಿ, ನಿಮ್ಮ ಪ್ರಿಯತಮೆಯೇ ಅತ್ಯುತ್ತಮವಾಗಿರುವುದರಿಂದ ನೀವು ಅದೃಷ್ಟಶಾಲಿಗಳು ಎಂದು ನಿಮಗೆ ಅರಿವಾಗುತ್ತದೆ.

### ಸಿಂಹ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಇದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು. ಮನೆಯ ಕೆಲಸ ನಿಮ್ಮನ್ನು ಯಾವಾಗಲೂ ವ್ಯಸ್ತವಾಗಿರಿಸುತ್ತದೆ. ಇಂದು ಪ್ರಣಯದ ಭಾವನೆಗಳಿಗೆ ಪ್ರತಿಕ್ರಿಯೆ ದೊರಕುತ್ತದೆ. ಹೊಸ ಉದ್ಯಮಗಳು ಆಕರ್ಷಕವಾಗಿರುತ್ತವೆ ಮತ್ತು ಒಳ್ಳೆಯ ಆದಾಯದ ಭರವಸೆ ಕಾಣಿಸುತ್ತದೆ.

### ಕನ್ಯಾ ರಾಶಿ

ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ. ನೀವು ನಿಮ್ಮ ಆಲೋಚನೆಗಳನ್ನು ಚೆನ್ನಾಗಿ ಪ್ರಸ್ತುತಪಡಿಸಿದಲ್ಲಿ ಮತ್ತು ಕೆಲಸದಲ್ಲಿ ನಿಮ್ಮ ಬದ್ಧತೆಯನ್ನು ಪ್ರದರ್ಶಿಸಿದಲ್ಲಿ ನಿಮಗೆ ಲಾಭವಾಗುವ ಸಾಧ್ಯತೆಗಳಿವೆ.

### ತುಲಾ ರಾಶಿ

ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ ಮತ್ತು ಬುದ್ಧಿವಂತಿಕೆಯನ್ನಿರಿಸಿದೆ – ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ಅರ್ಹರಿಗೆ ವೈವಾಹಿಕ ಮೈತ್ರಿಗಳು. ಕನಸಿನ ಚಿಂತೆಗಳನ್ನು ಬಿಟ್ಟು ನಿಮ್ಮ ಪ್ರೀತಿಪಾತ್ರ ಸಂಗಾತಿಯ ಜೊತೆಯಿರಿ. ನಿಮ್ಮ ಪ್ರೇಮ ಸಂಗಾತಿ ನಿಜಕ್ಕೂ ಇಂದು ಅದ್ಭುತವಾದದ್ದನ್ನು ಏನೋ ತರುತ್ತಾರೆ.

### ವೃಶ್ಚಿಕ ರಾಶಿ

ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ ಮತ್ತು ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸಹ ಹದಗೆಡಿಸುತ್ತದೆ.

### ಧನು ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ.

### ಮಕರ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನ ಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

### ಕುಂಭ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು. ಭಾವನಾತ್ಮಕ ಅಪಾಯ ನಿಮ್ಮ ಪರವಾಗಿರುತ್ತದೆ. ಕೆಲವರಿಗೆ ಹೊಸ ಪ್ರಣಯ ನಿಮ್ಮ ಚೈತನ್ಯವನ್ನು ಪ್ರೇರೇಪಿಸಬಹುದು ಹಾಗೂ ನಿಮ್ಮನ್ನು ಹರ್ಷಚಿತ್ತರಾಗಿರಿಸಬಹುದು.

### ಮೀನ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಕಣ್ಣುಗಳು ಎಂದಿಗೂ ಸುಳ್ಳು ಹೇಳುವುದಿಲ್ಲ, ಮತ್ತು ನಿಮ್ಮ ಸಂಗಾತಿಯ ಕಣ್ಣುಗಳು ಇಂದು ನಿಮಗೆ ಏನೋ ವಿಶೇಷವಾದದ್ದನ್ನು ಹೇಳುತ್ತವೆ.

# ಸೈಬರ್ ಅಪರಾಧ ತಡೆಗೆ ತಾಂತ್ರಿಕ ತರಬೇತಿ ಕಡ್ಡಾಯ; ಗೃಹ ಸಚಿವರಾದ ಡಾ; ಜಿ.ಪರಮೇಶ್ವರ್




**ದಾವಣಗೆರೆ** : ಮನೆ-ಮನೆಗೆ ಪೊಲೀಸ್ ಪೊಲೀಸ್ ಅತ್ಯಂತ ಸರಳವಾಗಿ ಮನೆಗಳಿಗೆ ತಲುಪಿ ಜನಸ್ನೇಹಿಯಾಗಿ ಕೆಲಸ ಮಾಡುವ ನಿಟ್ಟಿನಲ್ಲಿ ರೂಪಿಸಿದ ಯೋಜನೆ ಇದಾಗಿದ್ದು ಯಶಸ್ವಿಗೊಳಿಸುವ ಜವಾಬ್ದಾರಿ ಇಲಾಖೆ ಮೇಲಿದೆ ಎಂದು ಗೃಹ ಸಚಿವರಾದ ಡಾ; ಜಿ.ಪರಮೇಶ್ವರ್ ತಿಳಿಸಿದರು.

ಅವರು ಭಾನುವಾರ ಪೊಲೀಸ್ ಇಲಾಖೆಯಿಂದ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಏರ್ಪಡಿಸಲಾದ ಮನೆ-ಮನೆಗೂ ಪೊಲೀಸ್ ಮಿತ್ರಪಡೆ, ಪೊಲೀಸ್ ನಡೆ ಸಮುದಾಯದ ಕಡೆ ಕಾರ್ಯಕ್ರಮ ಉದ್ಘಾಟಿಸಿ ಪೊಲೀಸ್ ಮಿತ್ರಪಡೆ, ಜಂಟಿ ಕೈಗಳಾಗಿ ಕೆಲಸ ಮಾಡುವ ಸಾರ್ವಜನಿಕರಿಗೆ ಪ್ರಶಂಸನೀಯ ಪತ್ರ ನೀಡಿ, ಮನೆ-ಮನೆಗೆ ಪೊಲೀಸ್ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದರು.

ರಾಜ್ಯದಲ್ಲಿ ಮೂರುಭಾರಿ ಗೃಹ ಸಚಿವನಾಗಿದ್ದು ಇಲಾಖೆಗೆ ಕಾಯಕಲ್ಪ ತರಬೇಕು ಮತ್ತು ಮಾನವ ಸಂಬಂಧಗಳನ್ನು ಹೊಂದಿರುವ ಇಲಾಖೆ ಬಗ್ಗೆ ಸಾರ್ವಜನಿಕರಿಗಿರುವ ತಪ್ಪು ಕಲ್ಪನೆಯನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಸುಧಾರಣೆ ಮಾಡಲಾಗುತ್ತಿದೆ. ಮನೆ-ಮನೆಗೆ ಪೊಲೀಸ್ ಎಂಬುದು ಇದರ ಭಾಗವಾಗಿದೆ. ಜರ್ಮನ್ ರೀತಿ ಜನಸ್ನೇಹಿ ವ್ಯವಸ್ಥೆಯನ್ನು ರಾಜ್ಯದಲ್ಲಿ ತರಬೇಕೆಂದು ಅಲ್ಲಿಗೆ ಹಿರಿಯ ಅಧಿಕಾರಿಗಳೊಂದಿಗೆ ಅಧ್ಯಯನ ಪ್ರವಾಸ ಕೈಗೊಳ್ಳಲಾಗಿತ್ತು. ಅಲ್ಲಿನ ಪೊಲೀಸ್ ಠಾಣೆ, ಆಡಳಿತ ಕಚೇರಿ, ತರಬೇತಿ ಕೇಂದ್ರಗಳಿಗೆ ಭೇಟಿ ನೀಡಿ ಅಧ್ಯಯನ ಮಾಡಲಾಯಿತು. ಅಲ್ಲಿನ ಪೊಲೀಸ್ ವ್ಯವಸ್ಥೆ ಬಗ್ಗೆ ಎರಡನೇ ಮಹಾಯುದ್ಧದಿಂದಾಗಿ ಜನರಿಗೆ ಅತ್ಯಂತ ಕೆಟ್ಟ ಮನೋಭಾವವಿತ್ತು. ಅದನ್ನು ಹೋಗಲಾಡಿಸಲು ಅಲ್ಲಿನ ಸರ್ಕಾರಕ್ಕೆ ನಲವತ್ತು ವರ್ಷಗಳೇ ಬೇಕಾಯಿತು ಎಂದು ಪೊಲೀಸ್ ಸುಧಾರಣಾ ವ್ಯವಸ್ಥೆಯ ಬಗ್ಗೆ ಮಾತನಾಡಿದರು.

ಪೊಲೀಸ್ ವ್ಯವಸ್ಥೆಯನ್ನು ಜನಸ್ನೇಹಿಯಾಗಿಸುವುದರಿಂದ ಅನೇಕ ಅರಪಾಧಗಳನ್ನು ತಡೆಯಬಹುದು ಮತ್ತು ಘಟನೆಗಳು ನಡೆಯದಂತೆ ತಡೆಗಟ್ಟಬಹುದಾಗಿದೆ. ಜನರ ಸಂಕಷ್ಟಗಳಿಗೆ ನೇರವಾಗಲು ಸಿಗುವವರು ಪೊಲೀಸ್ ಮಾತ್ರ, ಆದ್ದರಿಂದ ಜನರ ಸಹಭಾಗಿತ್ವವನ್ನು ಪಡೆಯುವ ಮೂಲಕ ರಕ್ಷಣೆ ಬಹಳ ಸುಲಭವಾಗಿದೆ.

ಸಬ್ ಬೀಟ್ ಪರಿಕಲ್ಪನೆ; ಪ್ರತಿ ಕಾನ್ಸ್ ಟೇಬಲ್‌ಗೆ ಗ್ರಾಮಗಳಲ್ಲಿನ 50-60 ಮನೆಗಳನ್ನು ಬೀಟ್ ಮಾಡುವುದನ್ನು ನೀಡುವ ಮೂಲಕ ಆ ಮನೆಗಳಲ್ಲಿನ ಎಲ್ಲರ ಬಗ್ಗೆ ವಿವರ, ಮಾಹಿತಿ ಸಂಗ್ರಹಿಸುವ ಮತ್ತು ದಿನನಿತ್ಯ ನಡೆಯುವ ಘಟನೆಗಳ ಮಾಹಿತಿ ಸಂಗ್ರಹಿಸುವ ಜವಾಬ್ದಾರಿಯನ್ನು ನೀಡುವುದಾಗಿದೆ. ಒಂದು ಗ್ರಾಮದಲ್ಲಿ ಯಾವುದೊ ಒಂದು ಮನೆಗೆ ಪೊಲೀಸ್ ಹೋದರೆ ಜನರು ಅನುಮಾನ ವ್ಯಕ್ತಪಡಿಸಿ ಮಾತನಾಡಿಕೊಳ್ಳುತ್ತಾರೆ. ಅದರ ಬದಲಾಗಿ ಎಲ್ಲರ ಮನೆಗೆ ಪೊಲೀಸ್ ಹೋಗಿ ಅವರಿಗಾಗುವ ಸಮಸ್ಯೆ, ತೊಂದರೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿದಲ್ಲಿ ಜನರು ಸಹ ಅಪರಾಧಿಕ ಪ್ರಕರಣಗಳ ಮಾಹಿತಿ ನೀಡುವರು. ಕೆಲವು ಒಂಟಿ ಮಹಿಳೆ, ಏಕ ಪೋಷಕರಿರುವ ಮಕ್ಕಳು ಇರುತ್ತಾರೆ. ಈ ಪೋಷಕರಿಗೆ ತಮ್ಮ ಮಕ್ಕಳ ಬಗ್ಗೆ ಗೊತ್ತಿರಲ್ಲ, ಅವರು ಮಾದಕ ವಸ್ತುಗಳಿಗೆ ಬಲಿಯಾಗಿರುತ್ತಾರೆ. ಅಂತಹ ಮಾಹಿತಿಯು ಬೀಟ್ ಪೊಲೀಸರಿಗೆ ಸಿಗಲಿದೆ. ಬೀಟ್ ಪೊಲೀಸರು ಎಲ್ಲರ ಮಾಹಿತಿ ಸಂಗ್ರಹಿಸುವುದರಿಂದ ಅಂಕಿ ಅಂಶಗಳ ಸಮೇತ ಮಾಹಿತಿ ಇಲಾಖೆಯಲ್ಲಿ ಲಭ್ಯವಾಗಲಿದೆ. ಈ ಮೂಲಕ ಅತ್ಯಂತ ಸರಳವಾಗಿ ಜನರ ಬಳಿಗೆ ತಲುಪಲು ಮನೆ-ಮನೆಗೆ ಪೊಲೀಸ್ ವ್ಯವಸ್ಥೆಯಿಂದ ಸಾಧ್ಯವಾಗಲಿದೆ ಎಂದರು.

ಕ್ಯಾಪ್ ಬದಲಾವಣೆ; ಪೊಲೀಸ್ ಕಾನ್ಸಟೇಬಲ್‌ಗಳು ಹಾಕುವ ಕ್ಯಾಪ್ ಮಳೆಗೆ ನೆನೆದಾಗ ಇದರಿಂದ ಭಾರ ಹೆಚ್ಚುವುದರಿಂದ ಬದಲಾಯಿಸಬೇಕೆಂಬ ಪ್ರಸ್ತಾವನೆ ಬಹಳ ದಿನಗಳಿಂದ ಇದ್ದು ಸ್ಲೋಗಳನ್ನು ಬದಲಿಸಲಾಗುತ್ತದೆ. ಅಧಿಕಾರಿಗಳಂತೆ ಪೊಲೀಸ್ ಟೇಬಲಗಳು ಅಧಿಕಾರಿಗಳಿದ್ದಂತೆ, ಅವರನ್ನು ಅಧಿಕಾರಿಗಳನ್ನಾಗಿ ಕಾಣುತ್ತೇನೆ. ಅವರ ಬಲವರ್ಧನೆಯು ಬಹಳ ಮುಖ್ಯವಾಗಿದೆ ಎಂದರು.

ಸೈಬರ್ ಅಪರಾಧ ತಡೆಗೆ ತರಬೇತಿ; ಸೈಬರ್ ಅಪರಾಧಗಳು ಹೆಚ್ಚಾಗುತ್ತಿದ್ದು ತರಬೇತಿ ಪಡೆದ ನುರಿತ ಸಿಬ್ಬಂದಿಗಳ ಸಂಖ್ಯೆ ಕಡಿಮೆ ಇದೆ. ಎಲ್ಲಾ ಜಿಲ್ಲಾ ಕೇಂದ್ರದಲ್ಲಿ ಸೈಬರ್ ಅಪರಾಧ ತಡೆಗೆ ಎಲ್ಲಾ ಸಿಬ್ಬಂದಿಗಳಿಗೆ ತರಬೇತಿ ಅತ್ಯವಶ್ಯಕವಾಗಿದೆ. ಹಂತ-ಹಂತವಾಗಿ ಎಲ್ಲರಿಗೂ ಸೈಬರ್ ಅಪರಾಧ ತಡೆ ಬಗ್ಗೆ ತರಬೇತಿ ಕಡ್ಡಾಯ ಮಾಡಲಾಗುತ್ತದೆ. ಸೈಬರ್ ಅಪರಾಧ ಮಾಡುವವರು ನಿಪುಣರಿರುತ್ತಾರೆ, ಅವರಿಗಿಂತಲೂ ಇಲಾಖೆ ಸಿಬ್ಬಂದಿಗಳು ನುರಿತವರಾಗಿರಬೇಕು. ದಿನಬೆಳಗಾಗುವಲ್ಲಿ ಹ್ಯಾಕ್ ಮೂಲಕ ಕೋಟಿಗಟ್ಟಲೆ ಹಣವನ್ನು ದೋಚುತ್ತಾರೆ, ಇದನ್ನು ತಡೆಯಬೇಕಾಗಿದೆ ಎಂದರು.

ಪೊಲೀಸ್ ಠಾಣೆಗಳ ಕಮಾಂಡ್ ಸೆಂಟರ್; ರಾಜ್ಯದಲ್ಲಿ 1000 ಕ್ಕಿಂತ ಹೆಚ್ಚು ಪೊಲೀಸ್ ಠಾಣೆಗಳಿದ್ದು ಜಿಲ್ಲಾ ಮಟ್ಟದಲ್ಲಿ ಎಲ್ಲಾ ಪೊಲೀಸ್ ಠಾಣೆಗಳನ್ನು ಒಳಗೊಂಡ ಕಮಾಂಡ್‌ಸೆಂಟರ್ ಸ್ಥಾಪಿಸಲಾಗುತ್ತದೆ. ಕಮಾಂಡ್ ಸೆಂಟರ್ ಮೂಲಕ ಲೈವ್ ಮೂಲಕ ಯಾವ ಠಾಣೆಯಲ್ಲಿ ಏನು ನಡೆಯುತ್ತಿದೆ ಎಂಬ ದೃಶ್ಯಗಳು ನೇರವಾಗಿ ಸಿಗಲಿವೆ ಎಂದರು.

ವಸತಿ ಶೇ 70 ಕ್ಕೆ ಹೆಚ್ಚಿಸುವ ಗುರಿ; ಗೃಹ ಸರ್ಕಾರದ ಪ್ರಮುಖ ಇಲಾಖೆಯಾಗಿದೆ. ಇಲ್ಲಿ ಕೆಲಸ ಮಾಡುವ ಕಾನ್ ಟೇಬಲ್‌ಗಳಿಂದ ಅಧಿಕಾರಿಗಳ ವರೆಗೆ ವಸತಿ ಸೌಕರ್ಯ ಇರಬೇಕು. ಪ್ರಸ್ತುತ ಶೇ 40 ರಷ್ಟು ಸಿಬ್ಬಂದಿಗಳಿಗೆ ಮನೆಗಳಿವೆ. ಮುಂದಿನ 3 ವರ್ಷಗಳಲ್ಲಿ ಶೇ 70 ರಷ್ಟು ಸಿಬ್ಬಂದಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಪ್ರತಿ ವರ್ಷ ಪೊಲೀಸ್ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗುತ್ತದೆ ಎಂದರು.

ಸ್ಪಷ್ಟನೆ; ಬೆಂಗಳೂರಿನಲ್ಲಿ ನಡೆದ ಐಪಿಎಲ್ ವಿಜಯೋತ್ಸವದ ಕಾಲ್ತುಳಿತ ಪ್ರಕರಣದಲ್ಲಿ 11 ಜನರು ಮೃತರಾಗಿದ್ದು ನ್ಯಾಯಾಂಗ ತನಿಖೆಗೆ ಸರ್ಕಾರ ಸೂಚಿಸಿತ್ತು. ವರದಿಯನ್ನು ನೀಡಲಾಗಿದ್ದು ವರದಿ ಸರ್ಕಾರಕ್ಕೆ ಕೈಸೇರದೆಯೇ ಪೊಲೀಸರ ತಪ್ಪಿದೆ ಎಂದು ವರದಿ ನೀಡಲಾಗಿದೆ ಎಂದು ಮಾಧ್ಯಮದಲ್ಲಿ ಸುದ್ದಿ ಮಾಹಿತಿ ಕೊರತೆಯಿಂದ ಪ್ರಸಾರವಾಯಿತು ಎಂಬ ಬಗ್ಗೆ ಸ್ಪಷ್ಟನೆ ನೀಡಿದರು.

ಕಾರ್ಯಕ್ರಮದಲ್ಲಿ ಹರಿಹರ ಶಾಸಕರಾದ ಬಿ.ಪಿ.ಹರೀಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ಮನೆ-ಮನೆಗೂ ಪೊಲೀಸ್ ಕಾರ್ಯಕ್ರಮ ಉತ್ತಮವಾಗಿದ್ದು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನವಾಗಲೆಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಉಪಸ್ಥಿತರಿದ್ದರು. ಪೂರ್ವ ವಲಯ ಪೊಲೀಸ್ ಮಹಾನಿರೀಕ್ಷಕರಾದ ಡಾ; ಆರ್.ರವಿಕಾಂತೇಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ಸ್ವಾಗತಿಸಿದರು.ವೇದಿಕೆಯಲ್ಲಿ ಹೆಚ್ಚುವರಿ ರಕ್ಷಣಾಧಿಕಾರಿ ಪರಮೇಶ್ವರ ಹೆಗಡೆ, ತುಮಕೂರು ಹೆಚ್ಚುವರಿ ರಕ್ಷಣಾಧಿಕಾರಿ ಗೋಪಾಲ್ ಉಪಸ್ಥಿತರಿದ್ದರು. ಹೆಚ್ಚುವರಿ ರಕ್ಷಣಾಧಿಕಾರಿ ಜಿ.ಮಂಜುನಾಥ್ ವಂದಿಸಿದರು.

### ಮೃತ ವ್ಯಕ್ತಿ ಪತ್ನಿಗೆ ಕೆಲಸ ಡಿ.ಸುಧಾಕರ್, ಆಂಜನೇಯ ಭರವಸೆ

## ಗಿಲಿಕೇನಹಳ್ಳಿಗೆ ಭೇಟಿ ಪೊಲೀಸರ ನಿರ್ಲಕ್ಷ್ಯದಿಂದ ಅಜ್ಜಯ್ಯ ಆತ್ಮಹತ್ಯೆ ಆರೋಪ

**ಹೊಳಲ್ಕೆರೆ:** ಅಪ್ರಾಪ್ತ ಮಗಳನ್ನು ಅಪಹರಿಸಲಾಗಿದ್ದು, ಯುವಕನ ವಿರುದ್ಧ ಪೋಕ್ಸೋ ಪ್ರಕರಣ ದಾಖಲಿಸಲು ಒತ್ತಾಯಿಸಿದ್ದು, ಪೊಲೀಸರು ನಿರಾಕರಿಸಿದ್ದರಿಂದ ಬೇಸತ್ತ ಪಟ್ಟಣದ ಪೋಲಿಸ್ ಠಾಣೆ ಎದುರೇ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದ ತಾಲ್ಲೂಕಿನ ಗಿಲಿಕೇನಹಳ್ಳಿಯ ಅಜ್ಜಯ್ಯ ನಿವಾಸಕ್ಕೆ ಜಿಲ್ಲಾ ಸಚಿವ ಡಿ. ಸುಧಾಕರ್, ಮಾಜಿ ಸಚಿವ ಎಚ್. ಆಂಜನೇಯ ಭೇಟಿ ನೀಡಿ, ಪತ್ನಿ ಪುಷ್ಪಾವತಿ ಅವರಿಗೆ ಧನಸಹಾಯ ನೀಡಿ ಸಾಂತ್ವನ ಹೇಳಿದರು.

ಮೃತ ಅಜ್ಜಯ್ಯ ಪತ್ನಿಗೆ ಹನುಮಂತ ದೇವರ ಕಣಿವೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ಕೊಡಿಸಲಾಗುವುದು. ಅಜ್ಜಯ್ಯ ರೈತನಾಗಿದ್ದು, ಕೃಷಿಗಾಗಿ ಸಾಲ ಮಾಡಿಕೊಂಡಿದ್ದಾರೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರಿಗೆ ವಿಷಯ ಮನದಟ್ಟು ಮಾಡಿ ಸೂಕ್ತ ಪರಿಹಾರ ಕೊಡಿಸಲು ಪ್ರಯತ್ನಿಸಲಾಗುವುದು.

ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಕೊಳವೆ ಬಾವಿ ಕೊರೆಯಿಸಿ ಕೊಡಲಾಗುವುದು. ದೂರು ದಾಖಲಿಸಲು ವಿಳಂಬ ಮಾಡಿದ ಹಾಗೂ ಪ್ರತಿಭಟನಕಾರರ ಮೇಲೆ ಲಾಠಿ ಪ್ರಹಾರ ನಡೆಸಿದ ಪೋಲೀಸರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಮಾಜಿ ಸಚಿವ ಆಂಜನೇಯ ಮಾತನಾಡಿ, ತಾಲ್ಲೂಕಿನಲ್ಲಿ ನಡೆಯಬಾರದ ಘಟನೆ ನಡೆದಿದ್ದು, ಜನ ಆಕ್ರೋಶಗೊಂಡು ಪ್ರತಿಭಟನೆ ನಡೆಸಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮುಷ್ಕರ ನಡೆಸುವುದು ಸಾರ್ವಜನಿಕರ ಹಕ್ಕು. ಪೋಲೀಸ್ ಠಾಣೆ ಬಳಿ ಶವ ಇಟ್ಟು ಪ್ರತಿಭಟನೆ ನಡೆಸುವಾಗ ಮನವೊಲಿಸುವುದನ್ನು ಬಿಟ್ಟು ಲಾಠಿ ಪ್ರಹಾರ ನಡೆಸಿರುವುದು ತಪ್ಪು ಎಂದರು.

ವಿಷಯ ತಿಳಿಯುತ್ತಿದ್ದಂತೆ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪೊಲೀಸ್ ವರಿಷ್ಠಾಧಿಕಾರಿ ಸಮ್ಮುಖದಲ್ಲಿ ಜನರ ಮನವೊಲಿಸಿದೆ.ತಪ್ಪಿತಸ್ಥರ ವಿರುದ್ಧ ತನಿಖೆ ನಡೆಸಿ ಕ್ರಮಕೈಗೊಳ್ಳುವುದಾಗಿ ಭರವಸೆ ನೀಡಿದ ಬಳಿಕ ಪ್ರತಿಭಟನೆ ಹಿಂಪಡೆದರು ಎಂದು ತಿಳಿಸಿದರು.



ಮೃತ ವ್ಯಕ್ತಿಯ ಪತ್ನಿಗೆ ಸಚಿವ ಡಿ.ಸುಧಾಕರ್, ಮಾಜಿ ಸಚಿವ ಹೆಚ್.ಆಂಜನೇಯ ನಗದು ಪರಿಹಾರ ವಿತರಿಸಿದರು.

ಈ ಘಟನೆ ನಿಭಾಯಿಸುವಲ್ಲಿ ಪೊಲೀಸರು ಅಸಡ್ಡೆ, ಅನಗತ್ಯ ಗೊಂದಲದ ಜೊತೆಗೆ ಒತ್ತಡಕ್ಕೆ ಮಣಿದಿರುವ ರೀತಿ ಕಾಣುತ್ತಿದೆ. ಈ ಸಂಬಂಧ ಗ್ರಾಮಸ್ಥರು, ಕುಟುಂಬಸ್ಥರು ದೂರಿದ್ದಾರೆ.

ಮಗಳನ್ನು ಇಂತಹವರೇ ಅಪಹರಣ ಮಾಡಿದ್ದಾರೆಂದು ತಂದೆ ದೂರು ಕೊಟ್ಟ ತಕ್ಷಣ ದಾಖಲಿಸಿಕೊಂಡು ಮಗಳನ್ನು ತಂದೆ ಎದುರು ವಿಚಾರಣೆ ನಡೆಸಿದ್ದರೆ ಸಮಸ್ಯೆ ಇರುತ್ತಿರಲಿಲ್ಲ. ಮುಗ್ಧ ಅಜ್ಜಯ್ಯ ಆತ್ಮಹತ್ಯೆ ಮಾಡಿಕೊಳ್ಳುತ್ತಿರಲಿಲ್ಲ. ಈ ವಿಷಯದಲ್ಲಿ ಪೊಲೀಸರು ವಿಫಲರಾಗಿದ್ದಾರೆ ಎಂದು ಬೇಸರಿಸಿದರು.

ಪೊಲೀಸರು ನಮ್ಮ ವಿರುದ್ಧ ಪ್ರಕರಣ ದಾಖಲಿಸುತ್ತಿದ್ದು, ಭಯದ ವಾತಾವರಣ ಸೃಷ್ಟಿಸುತ್ತಿದ್ದಾರೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದರು. ಯಾವುದೇ ಕಾರಣಕ್ಕೂ ಅಮಾಯಕರು ಹಾಗೂ ಪ್ರತಿಭಟನೆ ನಡೆಸಿದವರ ವಿರುದ್ಧ ದೂರು ದಾಖಲಿಸಲು ನಾವು ಬಿಡುವುದಿಲ್ಲ. ಅಂತಹ ನಿರ್ಧಾರ ಕೈಗೊಂಡರೇ ಪೊಲೀಸರ ವಿರುದ್ಧವೇ ಸರ್ಕಾರಕ್ಕೆ ದೂರು ನೀಡಲಾಗುವುದು.

ಈ ವಿಷಯದಲ್ಲಿ ಆತಂಕ ಬೇಡ ಎಂದು ಅಭಯ ನೀಡಿದರು.ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಟಿ.ಹನುಮಂತಪ್ಪ, ಪಿ.ಆರ್.ಶಿವಕುಮಾರ್, ಎಂ.ಜೆ. ಹನುಮಂತಪ್ಪ, ಸಿ.ರಾಮಪ್ಪ, ರೆಡ್ಡಿ ರಂಗಪ್ಪ, ಡಿ.ಸಿ.ನವೀನ್, ಎಂ.ಟಿ.ರಂಗಸ್ವಾಮಿ, ಕುಬೇಂದ್ರಪ್ಪ, ಪಾಡಿಗಟ್ಟೆ ಸುರೇಶ್, ಸಂಗನ ಗುಂಡಿ ಮಂಜುನಾಥ್, ಪಿ.ಹನುಮಂತಪ್ಪ, ಕರಿಯಪ್ಪ, ಎಂ.ಟಿ.ರಾಜಪ್ಪ ಇದ್ದರು.

## ಜ್ಯೋತಿ ನಗರ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ

**ಚಿಕ್ಕಮಗಳೂರು:** ನಗರದಜ್ಯೋತಿ ನಗರ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ನಡೆಸಲಾಗುವುದುಎಂದು ನಗರಸಭೆಅಧ್ಯಕ್ಷೆ ಶೀಲಾ ದಿನೇಶ್ ತಿಳಿಸಿದರು.

ಭಾನುವಾರ ನಗರದಜ್ಯೋತಿ ನಗರ ಬಡಾವಣೆಗೆ ಭೇಟಿ ನೀಡಿಇಲ್ಲಿನರಸ್ತೆ, ಚರಂಡಿ, ಉದ್ಯಾನವನ, ಖಾಲಿ ನಿವೇಶನಗಳ ಅವ್ಯವಸ್ಥೆಯನ್ನು ಪರಿಶೀಲಿಸಿ ನಂತರ ಬಡಾವ ಣೆಯಲ್ಲಿನಗಣಪತಿದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದರು.

ಜ್ಯೋತಿ ನಗರ ಬಡಾವಣೆಯ ರಸ್ತೆಗಳು ಹೊಂಡಗುಂಡಿಗಳಿಂದ ಕೂಡಿದೆ. ಚರಂಡಿ ಹಾಗೂ ಉದ್ಯಾನವನಗಳು ಅವ್ಯವಸ್ಥೆ ಯಿಂದಕೂಡಿದ್ದು, ಖುದ್ದು ಪರಿಶೀಲಿಸಿದ್ದೇನೆ. ರಸ್ತೆ, ಚರಂಡಿ ಹಾಗೂ ಉದ್ಯಾನವನಗಳ ಅಭಿವೃದ್ಧಿಗೆ ಶ್ರಮಿಸುವುದಾಗಿ ಬಡಾ ವಣೆ ನಿವಾಸಿಗಳಿಗೆ ಭರವಸೆ ನೀಡಿದರು.

ನಗರಸಭೆ ಪೌರಾಯುಕ್ತ ಬಿ.ಸಿ.ಬಸವರಾಜ್ ಮಾತನಾಡಿ, ಬಡಾವಣೆಯರಸ್ತೆ ಹಾಗೂ ಚರಂಡಿಯನ್ನು ನಗರಸಭೆಯಿಂದಅಭಿವೃದ್ಧಿಪ ಡಿಸಲಾಗುವುದು.

ರಸ್ತೆತಿರುವಿನಲ್ಲಿ ವಿದ್ಯುತ್ ಕಂಬವಿದ್ದು ವಾಹನ ಸವಾರರಿಗೆತೊಂದರೆಯಾಗುತ್ತಿದೆಎ ಂದುಇಲ್ಲಿನ ನಿವಾಸಿಗಳು ಗಮನಕ್ಕೆ ತಂದಿದ್ದು ವಿದ್ಯುತ್ ಕಂಬ ಸ್ಥಳಾಂತರ ಮಾಡಲುಕ್ರಮ ಕೈಗೊಳ್ಳಲಾಗುವುದು ಎಂದರು.




ಬಡಾವಣೆಯಲ್ಲಿ ಉದ್ಯಾನವನಗಳ ಜಾಗಒತ್ತುವರಿಯಾಗಿದೆಎಂಬದು ತಿಳಿದು ಬಂದಿದ್ದು, ಉದ್ಯಾನವನಗಳ ಒತ್ತುವರಿಯನ್ನು ತೆರವುಗೊಳಿಸಲಾಗುವುದು ಹಾಗೂ ವಿಶಾಲ್ ಮಾರ್ಟ್ ಪಕ್ಕದಲ್ಲಿನರಸ್ತೆಒತ್ತುವ ರಿಯಾಗಿದೆ.ಕಿರಿದಾದರಸ್ತೆಯಿಂದ ವಾಹನ ದಟ್ಟಣೆಉಂಟಾಗುತ್ತಿದ್ದು,ಪ್ರತಿನಿತ್ಯಅಪಘಾತಗಳು ಉಂಟಾಗುತ್ತಿವೆ. ಈ ಹಿನ್ನಲೆಯಲ್ಲಿರಸ್ತೆಒತ್ತುವರಿ ಯನ್ನು ತೆರವುಗೊಳಿಸಿ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದುಎಂದು ತಿಳಿಸಿದರು.

ಬಡಾವಣೆಯ ನಿವಾಸಿ ರೇಖಾ ಹುಲಿಯಪ್ಪಗೌಡ ಮಾತನಾಡಿ, ಬಡಾವಣೆಯ ಸಾರಥಿಕಾಫಿ ಕ್ಯೂರಿಂಗ್ ಎದುರಿನ ರಸ್ತೆ ಹೊಂಡಗುಂಡಿಗಳಿಂದ ಕೂಡಿದ್ದು ಸಂಚಾ ರಿಸುವುದುಕಷ್ಟವಾಗಿದೆ.ಲಕ್ಷ್ಮೀಶ (ಪಾಪಣ್ಣ) ಎಂಬುವರ ಮನೆಯ ಮುಂಭಾಗದಲಿ ಗಣಪತಿದೇವಸ್ಥಾನತಿರುಗುವರಸ್ತೆಯಲ್ಲಿ ವಿದ್ಯುತ್ ಕಂಬವಿದ್ದು ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದೆ.ಬಡಾವಣೆಯಲ್ಲಿಉದ ್ಯಾನವನಕ್ಕೆ ಮೀಸಲಿಟ್ಟಜಾಗವನ್ನು ಗುರುತಿಸಿ ಒತ್ತುವರಿಯಾಗದಂತೆ ಸಂರಕ್ಷಿಸುವಜತೆಗೆ ಬಡಾವಣೆಯಅಭಿವೃದ್ಧಿ ಹಾಗೂ ಮೂಲಭೂತ ಸೌಲಭ್ಯವನ್ನುಕಲ್ಪಿಸುವಂತೆ ಮನವಿ ಮಾಡಿದರು.ಈ ಸಂದರ್ಭದಲ್ಲಿ ನಗರಸಭೆ ಸದಸ್ಯಗುರು ಮಲ್ಲಪ್ಪ, ಸತೀಶ್ ಸೇರಿದಂತೆ ಬಡಾವಣೆಯ ನಿವಾಸಿಗಳು ಇದ್ದರು.

## ನಿಧನ ಸುದ್ದಿಗಳು

### ನಿವೃತ್ತ ಶಿಕ್ಷಕ ಕೆ.ಜಿ.ಕುಬೇರಪ್ಪ ಗೌಡ್ರು ನಿಧನ



**ದಾವಣಗೆರೆ:** ನಗರದ ಕುವೆಂಪು ನಗರದ ವಾಸಿ, ಬಡಾವಣೆ ಪೊಲೀಸ್ ಠಾಣೆ ಎದುರಿನ ಮಹಾತ್ಮ ವಿದ್ಯಾ ಶಾಲೆಯ ನಿವೃತ್ತ ಶಿಕ್ಷಕ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಹಿರಿಯ ಶಿಕ್ಷಕರಾಗಿ ದ್ದ ಕೆ.ಜಿ.ಕುಬೇರಪ್ಪ ಗೌಡ್ರು ಭಾನುವಾರ ಸಂಜೆ ನಿಧನರಾದರು. ಅವರಿಗೆ 84 ವರ್ಷ ವಯಸ್ಸಾಗಿತ್ತು.

ಮೃತರು ಪತ್ನಿ, ನಾಲ್ವರು ಪುತ್ರಿಯರು ಹಾಗೂ ಓರ್ವ ಪುತ್ರನಾದ ಜಿಲ್ಲಾ ಕ್ರೀಡಾಪಟುಗಳ ಸಂಘದ ಪ್ರಧಾನ ಕಾರ್ಯದರ್ಶಿ ಜಯಪ್ರಕಾಶ ಗೌಡ ಹಾಗೂ ಬಂಧು-ಬಳಗ ಹಾಗೂ ಅಪಾರ ಶಿಷ್ಯ ವೃಂದವನ್ನು ಅಗಲಿದ್ದಾರೆ. ಜು.28ರಂದು ಸೋಮವಾರ ಮಧ್ಯಾಹ್ನ ಕುಂಬಳೂರು ಗ್ರಾಮದಲ್ಲಿ ಮೃತರ ಅಂತ್ಯಕ್ರಿಯೆ ನಡೆದಿದೆ.

ಸಂತಾಪ-ನಿವೃತ್ತ ಶಿಕ್ಷಕ ಕೆ.ಜಿ.ಕುಬೇರಪ್ಪ ಗೌಡ್ರು ನಿಧನಕ್ಕೆ ಶಾಸಕ ಡಾ.ಶಾಮನೂರು ಶಿವಶಂಕರಪ್ಪ, ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ, ದೂಡಾ ಅಧ್ಯಕ್ಷ ದಿನೇಶ ಕೆ.ಶೆಟ್ಟಿ, ಯುವ ಮುಖಂಡ ಶ್ರೀನಿವಾಸ ವಿ.ಶಿವಗಂಗಾ, ಕುರುಡಿ ಗಿರೀಶ, ರೊಳ್ಳಿ ಮಂಜುನಾಥ ಸೇರಿದಂತೆ ಅನೇಕರು ತೀವ್ರ ಸಂತಾಪ ಸೂಚಿಸಿದ್ದಾರೆ.

### ಮಾನ್ಯ ಉಪವಿಭಾಗಾಧಿಕಾರಿಗಳು ಉಪವಿಭಾಗಾಧಿಕಾರಿಗಳ ಕಾರ್ಯಾಲಯ ಹೊನ್ನಾಳಿ

**ಕೇಸ್ ಐಡಿ ಸಂಖ್ಯೆ: ಆರ್.ಎ./021/2025**

**ಅರ್ಜಿದಾರರು:** ಯಶೋದರ ಬಿ ಡಿ ಬಿನ್ ಲೇಟ್ ಧರಿಯಪ್ಪ ಬಳ್ಳೇಶ್ವರ ಗ್ರಾಮ, ಗೋವಿನಕೋವಿ-2 ನೇ ಹೋಬಳಿ ಹೊನ್ನಾಳಿ ತಾಲ್ಲೂಕು ದಾವಣಗೆರೆ ಜಿಲ್ಲೆ,

**ವಿರುದ್ಧ**

**ಎದುರುದಾರರು:** : ಮಾನ್ಯ ತಹಶೀಲ್ದಾರರು ಹೊನ್ನಾಳಿ ತಾಲ್ಲೂಕು ಕಛೇರಿ ಹೊನ್ನಾಳಿ

2 ನೇ ಎದುರುದಾರರು : ಮಂಜಪ್ಪ ಬಿನ್ ಲೇಟ್ ಧರಿಯಪ್ಪ
3 ನೇ ಎದುರುದಾರರು : ಗುಣಪಾಲ ಬಿನ್ ಲೇಟ್ ಮಂಜಪ್ಪ
4 ನೇ ಎದುರುದಾರರು : ಅಜಿತ್ ಬಿನ್ ಲೇಟ್ ಮಂಜಪ್ಪ
5 ನೇ ಎದುರುದಾರರು : ಜಿನೇಂದ್ರ ಬಿನ್ ಲೇಟ್ ಮಂಜಪ್ಪ
6 ನೇ ಎದುರುದಾರರು : ಕುಸುಮಮ್ಮ ಕೋಂ ಲೇಟ್ ಪುಟ್ಟಣ್ಣ
7 ನೇ ಎದುರುದಾರರು : ಕುಸುಮಮ್ಮ ಬಿನ್ ಲೇಟ್ ಮಂಜಪ್ಪ
8 ನೇ ಎದುರುದಾರರು : ಸುಮಿತ್ರಾ ಬಿನ್ ಲೇಟ್ ಮಂಜಪ್ಪ
9 ನೇ ಎದುರುದಾರರು : ಸರಸ್ವತಮ್ಮ ಕೋಂ ನಾಗಪ್ಪ
10 ನೇ ಎದುರುದಾರರು : ಪದ್ಮರಾಜ ಬಿನ ನಾಗಪ್ಪ
11 ನೇ ಎದುರುದಾರರು : ಶ್ರೇಯಾಂಸ್ ಬಿನ್ ನಾಗಪ್ಪ

### ಪ್ರಕರಣೆ

ಈ ಮೇಲ್ಕಂಡ ಅಪೀಲುದಾರರು ಸನ್ನಿದಿ ನ್ಯಾಯಾಲಯದಲ್ಲಿ ಎದುರುದಾರರ ವಿರುದ್ದ ಸದರಿ ದಾವಾ ಷೆಡ್ಯೂಲ್ ಸ್ವತ್ತಿಗೆ ಸಂಬಂದಪಟ್ಟಂತೆ ಸಲ್ಲಿಸಿರುತ್ತಾರೆ. ಸದರಿ ಕೇಸಿನಲ್ಲಿ ಈ ಮೇಲೆ ಹೇಳಿದ ಎದುರುದಾರರ ನಂಬರ್ 02 ರಿಂದ 08 ನೇ ಸಂಖ್ಯೆ ವರೆಗೆ ನ್ಯಾಯಾಲಯದ ಮೂಲಕ ಜಾರಿ ಮಾಡುವ ಸಮೆನ್ಸ್ ಮತ್ತು ಅಂಚೆ ಮೂಲಕ ಕಳುಹಿಸಿದ ಆರ್.ಪಿ.ಎ.ಡಿ.ಯು ಕಾರಣಾಂತರದಿಂದ ಅವರು ತೆಗೆದುಕೊಂಡಿರುವುದಿಲ್ಲ. ಜಾರಿಯಾಗದೇ ವಾಪಾಸ್ಸು ಬಂದಿರುತ್ತವೆ. ಆದ್ದರಿಂದ ಮೇಲ್ಕಂಡ ಎದುರುದಾರರು ಸಂಖ್ಯೆ 01 ರಿಂದ 08 ರವೆರೆಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಮೇಲೆ ಹೇಳಿದ ಕೇಸು ದಿನಾಂಕ: 01-08-2025 ರಂದು ಇದ್ದು. ಆ ದಿನ ಬೆಳಗ್ಗೆ 11-00 ಗಂಟೆಗೆ ನೀವುಗಳು ಖುದ್ದಾಗಿ ಆಗಲೀ ಅಥವಾ ನಿಮ್ಮ ವಕೀಲರ ಮುಖಾಂತರ ಆಗಲೀ ಮೇಲೆ ತಿಳಿಸಿದ ನ್ಯಾಯಾಲಯದಲ್ಲಿ ಹಾಜರಾಗುವುದು. ತಪ್ಪಿದಲ್ಲಿ ನಿಮ್ಮ ಗೈರು ಹಾಜರಾತಿಯಲ್ಲಿ ಕೇಸು ತೀರ್ಮಾನಿಸಲ್ಪಡುವುದು ತಿಳಿಯಿರಿ,

ನ್ಯಾಯಾಲಯದ ಮುದ್ರೆ ಹಾಗೂ ನನ್ನ ಸಹಿಯೊಂದಿಗೆ ದಿನಾಂಕರಂದು ನೀಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

**ಸಹಿ/-**
**ಅರ್ಜಿದಾರರ ಪರ ವಕೀಲರು**
**ಯಶೋದರ ಬಿ.ಡಿ ಬಳ್ಳೇಶ್ವರ ಗ್ರಾಮ,**
**ಗೋವಿನಕೋವಿ-2ನೇ ಹೋಬಳಿ**
**ಹೊನ್ನಾಳಿ ತಾಲ್ಲೂಕು ದಾವಣಗೆರೆ ಜಿಲ್ಲೆ,**

**ಸಹಿ/-**
**ಮಾನ್ಯ ಉಪವಿಭಾಗಾಧಿಕಾರಿಗಳು**
**ನ್ಯಾಯಾಲಯ ಹೊನ್ನಾಳಿ**

# ಆಹಾರ ಸಂಸ್ಕರಣಾ ಉದ್ದಿಮೆಗಳ ಯೋಜನೆಯ ಮೂಲಕ ಉದ್ಯೋಗ ಸೃಷ್ಟಿಸಬಹುದು: ಎನ್. ಚೆಲುವರಾಯಸ್ವಾಮಿ

ಉದ್ಯೋಗ ಹುಡುಕುತ್ತಿರುವ ಯುವ ರೈತರು ಆಹಾರ ಸಂಸ್ಕರಣಾ ಉದ್ದಿಮೆ ಯೋಜನೆಯನ್ನು ಅಳವಡಿಸಿಕೊಂಡು ತಾವೇ ಖುದ್ದು ಉದ್ಯೋಗ ಸೃಷ್ಟಿಸಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕೃಷಿ ಸಚಿವರಾದ ಎನ್ ಚೆಲುವರಾಯಸ್ವಾಮಿ ಅವರು ಹೇಳಿದರು.

ಇಂದು (ಜು.23) ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಆಹಾರ ಸಂಸ್ಕರಣಾ ಸಚಿವಾಲಯ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಪ್ರಧಾನ ಮಂತ್ರಿಗಳು ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಾಕೆ ಯೋಜನೆ" ಅರಿವು ಮೂಡಿಸುವ ಕಾರ್ಯಾಗಾರವನ್ನು ಗಾಣದಿಂದ ಎಣ್ಣೆ ತೆಗೆಯುವ ಮೂಲಕ ವಿನೂತನವಾಗಿ ಚಾಲನೆ ನೀಡಿ ಮಾತನಾಡಿದರು.

ಜಿಲ್ಲೆಯಲ್ಲಿ ಅಲ್ಪ ಪ್ರಮಾಣದಲ್ಲಿ ಬಿಟ್ಟರೆ ಉಳಿದವರೆಲ್ಲರು ಜಮೀನು ಹೊಂದಿದ್ದಾರೆ. ನಿಮ್ಮ ಬಳಿ ಇರುವ ಜಮೀನಿನಲ್ಲಿ 1 ಎಕರೆ ಜಾಗದಲ್ಲಿ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಂಡು ಕಡಿಮೆ ವೆಚ್ಚದಲ್ಲಿ ಹೆಚ್ಚು ಇಳುವರಿಯನ್ನು ಪಡೆಯಬಹುದು ಎಂದರು.

ವಿದ್ಯಾಭ್ಯಾಸಕ್ಕೂ ವೃತ್ತಿಗೂ ಸಂಭಂದ ಇಲ್ಲ. ವಿದ್ಯಾಭ್ಯಾಸ ಲೋಕಜ್ಞಾನ. ಸಾಮಾನ್ಯಜ್ಞಾನ. ತಿಳುವಳಿಕೆ ಹಾಗೂ ಸಮಾಜದಲ್ಲಿ ಬದುಕುವ ರೀತಿ ಕಲಿಸುತ್ತದೆ. ಉನ್ನತ ವಿದ್ಯಾಭ್ಯಾಸ ಮಾಡಿರುವ ಕಾರಣಕ್ಕೆ ಉನ್ನತ ಕೆಲಸಗಳನ್ನೇ ಮಾಡಬೇಕು ಎಂಬ ಮಾನೋಭಾವನೆಯಿಂದ ಯುವಕರು ಹೊರ ಬರಬೇಕು. ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಯೋಜನೆಯಡಿ ನೀವೇನಾದರೂ ಉದ್ದಿಮೆ ಪ್ರಾರಂಭಿಸಿದರೆ ಲಾಭ ಗಳಿಸಬಹುದು ಎಂದರು.

ಸರ್ಕಾರ 6000 ಆಹಾರ ಸಂಸ್ಕರಣಾ ಉದ್ದಿಮೆಗಳನ್ನು



ಸ್ಥಾಪಿಸಬೇಕೆಂದು ತೀರ್ಮಾನಿಸಿದೆ. ಪಿ.ಎಮ್. ಎಫ್.ಎಮ್.ಇ. ಯೋಜನೆಯಡಿ ರೂ 15 ಲಕ್ಷದವರೆಗೂ ಸಹಾಯಧನ ಪಡೆಯಬಹುದು. ಕೇಂದ್ರ ಸರ್ಕಾರ ರೂ 6 ಲಕ್ಷ ಮತ್ತು ರಾಜ್ಯ ಸರ್ಕಾರ 9 ಲಕ್ಷ ರೂಪಾಯಿಗಳನ್ನ ಸಬ್ಸಿಡಿ ರೂಪದಲ್ಲಿ ನೀಡಲಾಗುತ್ತದೆ ಎಂದು ಹೇಳಿದರು.

ಆಹಾರ ಸಂಸ್ಕರಣಾ ಉದ್ದಿಮೆಗಳ ಯೋಜನೆಯಡಿ ಸಾಲ ಹಾಗೂ ಸಬ್ಸಿಡಿ ನೀಡುವಲ್ಲಿ ಜಿಲ್ಲೆ ರಾಜ್ಯದಲ್ಲಿ ಎರಡನೇ ಸ್ಥಾನದಲ್ಲಿದೆ. ವಂಶಪಾರಂಪರ್ಯವಾಗಿ ಮಾಡಿಕೊಂಡು ಬಂದಿರುವ ಕೃಷಿ ಪದ್ಧತಿಯ ಜೊತೆಗೆ ಕನಿಷ್ಠ ಒಂದು ಎಕರೆಯಲ್ಲಾದರು ಕೃಷಿ ವಿಜ್ಞಾನಿಗಳು ಹಾಗೂ ಕೃಷಿ ಅಧಿಕಾರಿ ಸಲಹೆ ಪಡೆದು ಸಮಗ್ರ ಕೃಷಿ ಬೆಳೆದು ನೋಡಿ ಕಡಿಮೆ ವೆಚ್ಚದಲ್ಲಿ ಅಧಿಕ ಇಳುವರಿ ತೆಗೆಯಬಹುದು ಎಂದರು.

ರಾಷ್ಟ್ರದ ಎಲ್ಲಾ ರಾಜ್ಯಗಳಿಗಿಂತಲ್ಲೂ ಕರ್ನಾಟಕ ರಾಜ್ಯ ಕೃಷಿ ಇಲಾಖೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಕೇಂದ್ರ ಕೃಷಿ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್ ನಮ್ಮ ಸರ್ಕಾರದ ಕೆಲಸವನ್ನು ಶ್ಲಾಘಿಸಿದ್ದಾರೆ. ಆಹಾರ ಸಂಸ್ಕರಣಾ ಉದ್ದಿಮೆಗಳ ಯೋಜನೆಯನ್ನು ಸಮರ್ಪಕವಾಗಿ ಬಳಸಿಕೊಂಡರೆ ಪ್ರತಿ ತಿಂಗಳಿಗೆ ಕನಿಷ್ಠ 50 ಸಾವಿರದಿಂದ 1 ಲಕ್ಷದ ವರೆಗೂ ಆದಾಯ ಗಳಿಸಬಹುದು ಎಂದು ತಿಳಿಸಿದರು.

ಸಮಗ್ರ ಕೃಷಿ ಪದ್ಧತಿಯಲ್ಲಿ ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ಕೃಷಿಯಿಂದ ಉತ್ತಮ ಲಾಭಗಳಿಸಬಹುದು. ಮುಂದಿನ ದಿನಗಳಲ್ಲಿ ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಮಹತ್ವದ ಕುರಿತು ನಿಮಗೆ ಅರ್ಥವಾಗುತ್ತದೆ. ಜಿಲ್ಲೆಯ ಯುವಕರು ಸ್ವಾವಲಂಬಿಗಳಾಗಬೇಕು ಹಾಗೂ ಜಿಲ್ಲೆಯ ಎಲ್ಲಾ ಕುಟುಂಬಗಳು ಆರ್ಥಿಕವಾಗಿ ಸಧೃಡರಾಗಬೇಕು ಎಂಬುದು ನನ್ನ ಅಭಿಲಾಷೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ನಂತರ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ರಮೇಶ್ ಬಂಡಿಸಿದ್ದೇಗೌಡ ಅವರು ಮಾತನಾಡಿ ನಮಗೆ ಆಹಾರ ಸಂಸ್ಕರಣಾ ಉದ್ದಿಮೆ ಹೊಸದಲ್ಲ ನಮ್ಮ ಪೂರ್ವಜರು ಇದನ್ನು ಮಾಡುತ್ತಿದ್ದರು ಆದರೆ ಕಾಲಾಂತರದಿಂದಾಗಿ ಆಹಾರ ಸಂಸ್ಕರಣೆಯ ಕುರಿತಾಗಿ ನಮ್ಮ ಪೀಳಿಗೆ ಆಸಕ್ತಿ ಕಳೆದುಕೊಂಡಿದೆ ಎಂದು ಹೇಳಿದರು.

ನಮ್ಮ ಪ್ರಾಂತ್ಯದಲ್ಲಿ ಬೆಳೆಯಬಹುದಾದ ವಿವಿಧ ಬಗೆಯ ಆಹಾರ ಪದಾರ್ಥಗಳನ್ನು ಬಳಸಿಕೊಂಡು ಸಂಸ್ಕರಣೆ ಮತ್ತು ಬ್ರಾಂಡಿಂಗ್ ಮಾಡುವುದರ ಮೂಲಕ ಮಾರಾಟ ಮಾಡಿದರೆ ಹೆಚ್ಚಿನ ಮಟ್ಟದಲ್ಲಿ ಲಾಭ ಕಾಣಬಹುದಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ ಆರ್ ನಂದಿನಿ ಅವರು ಮಾತನಾಡಿ ಮಂಡ್ಯ ಕೃಷಿ ಆಧಾರಿತ ಜಿಲ್ಲೆಯಾದರು ಕೃಷಿಯಿಂದ ಜಿಲ್ಲೆಯ ರೈತರು ಗಳಿಸುತ್ತಿರುವ ಆದಾಯ ತೃಪ್ತಿಕರವಾಗಿಲ್ಲ. ಭತ್ತ, ಕಬ್ಬು, ತೆಂಗು ಮೂರು ಜಿಲ್ಲೆಯ ಪ್ರಮುಖ ಬೆಳೆಯಾಗಿದೆ ಎಂದು ಹೇಳಿದರು.

ಕೃಷಿ ಪದ್ಧತಿಯಲ್ಲಿ ವೈವಿಧ್ಯತೆಯನ್ನು ಅಳವಡಿಸಿಕೊಂಡು ಬೆಳೆಗಳನ್ನು ಬೆಳೆದರೆ ಉತ್ತಮ ಆದಾಯ ಗಳಿಸಬಹುದು. ಜಿಲ್ಲೆಯ ಮಣ್ಣಿನ ಗುಣಮಟ್ಟ ಮತ್ತು ಹವಾಮಾನಕ್ಕೆ ಸರಿ ಹೊಂದುವ ಬೆಳೆಗಳನ್ನು ಬೆಳೆಯಿರಿ. ಉದಾಹರಣೆಗೆ ಬೆಣ್ಣೆ ಹಣ್ಣು ಬೆಳೆಯಲು ನಮ್ಮ ಜಿಲ್ಲೆಯ ಹವಾಮಾನ ಸೂಕ್ತವಾಗಿದೆ. ಬೆಣ್ಣೆ ಹಣ್ಣಿಗೆ ವಿದೇಶಗಳಲ್ಲಿ ಹೆಚ್ಚಿನ ಬೇಡಿಕೆ ಇದೆ ಇದನ್ನು ಅರ್ಥ ಮಾಡಿಕೊಂಡು ಬೆಳೆಗಳನ್ನು ಬೆಳೆಯಬೇಕು ಎಂದು ತಿಳಿಸಿದರು.

ನಮ್ಮ ಕೃಷಿ ಪದ್ಧತಿಯಲ್ಲಿ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು. ತೋಟಗಾರಿಕೆ ಇಲಾಖೆ, ಪಶುಸಂಗೋಪನೆ ಇಲಾಖೆ, ಕೃಷಿ ಇಲಾಖೆಯ ಸಹಾಯದ ಮೂಲಕ ಸಂಸ್ಕರಿಸಿದ ಅಹಾರ ಪದಾರ್ಥಗಳನ್ನು ಮಾರಾಟ ಮಾಡಿದರೆ ತಮ್ಮ ಬೆಳೆಗೆ ಉತ್ತಮ ಬೆಲೆ ಕಾಣಬಹುದು ಎಂದರು.

ನಮ್ಮ ಬೆಳೆಗಳನ್ನು ನಾವೇ ಸಂಸ್ಕರಿಸಿ ಕಚ್ಚಾ ವಸ್ತುವನ್ನು ಸಿದ್ಧವಸ್ತು ಮಾಡಿ ಮಾರಾಟ ಮಾಡಿದರೆ ಮೂರರಿಂದ ನಾಲ್ಕು ಪಟ್ಟು ಹೆಚ್ಚಿನ ಲಾಭಗಳಿಸಬಹುದು. ನಮ್ಮಲ್ಲಿರುವ ಮಾರುಕಟ್ಟೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ದೇಶ ವಿದೇಶಗಳಲ್ಲಿ ನಮ್ಮ ಉತ್ಪನ್ನಗಳನ್ನು ಮಾರಾಟ ಮಾಡಿ ಲಾಭ ಗಳಿಸಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ,ಶಾಸಕರಾದ ರಮೇಶ್ ಬಾಬು ಬಂಡಿಸಿದ್ದೇಗೌಡ,ಕೆಫೆಕ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್. ಶಿವಪ್ರಕಾಶ್. ಮೈ ಶುಗರ್ ಸಕ್ಕರೆ ಕಂಪನಿಯ ಅಧ್ಯಕ್ಷ ಸಿ.ಡಿ. ಗಂಗಾಧರ್. ಜಿಲ್ಲಾಧಿಕಾರಿ ಡಾ ಕುಮಾರ. ರಾಜ್ಯ ಕೃಷಿ ಸಮಾಜದ ಅಧ್ಯಕ್ಷ ಮಂಜುನಾಥ್ ಗೌಡ. ರಾಜ್ಯ ರೈತ ಉತ್ಪಾದಕ ಸಂಸ್ಥೆಗಳು ಸಹಕಾರ ನಿಯಮಿತದ ಆಡಳಿತ ಮಂಡಳಿ ನಿರ್ದೇಶಕ ರಾಜೇಶ್. ಬೆಲ್ಲದ ನಾಡು ರೈತ ಉತ್ಪಾದಕ ಕಂಪನಿಗಳು ಒಕ್ಕೂಟದ ಅಧ್ಯಕ್ಷ ಕಾಸರವಾಡಿ ಮಹಾದೇವ್ ಸೇರಿದಂತೆ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

## ಗುಂಪು ವಿಮೆ ಪಾಲಿಸಿ ಸೇವಾ ನ್ಯೂನ್ಯತೆ : ಸೂಕ್ತ ಪರಿಹಾರ ನೀಡಲು ಆದೇಶ

**ಶಿವಮೊಗ್ಗ:** ವೀಣಾ ಕೋಂ ಸುಂದರೇಶ ಮತ್ತು ಸುಂದರೇಶ್ ಬಿನ್ ಬಿ.ಆರ್. ಮಂಜಯ್ಯ, ಬೇಡನ ಹಿತ್ತಲು, ತೀರ್ಥಹಳ್ಳಿ, ಶಿವಮೊಗ್ಗ ಜಿಲ್ಲೆ ಇವರು ದಿ ನ್ಯೂ ಇಂಡಿಯಾ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್, ಶಿವಮೊಗ್ಗ, ಮೆಡಿ ಅಸಿಸ್ಟ್ ಟಿಪಿಎ ಪ್ರೈವೇಟ್ ಲಿಮಿಟೆಡ್., ಬೆಂಗಳೂರು ಮತ್ತು ಮಲ್ನಾಡ್ ಅರೆಕಾ ಮಾರ್ಕೆಟಿಂಗ್ ಸೊಸೈಟಿ ಪ್ರೈ. ಲಿ.., ಶಿವಮೊಗ್ಗ ಇವರ ವಿರುದ್ಧ ಸೇವಾ ನ್ಯೂನ್ಯತೆ ಕುರಿತು ಸಲ್ಲಿಸಿದ ದೂರನ್ನು ಆಲಿಸಿದ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗವು ದೂರುದಾರರಿಗೆ ಸೂಕ್ತ ಪರಿಹಾರ ನೀಡುವಂತೆ ಆದೇಶಿಸಿದೆ.

ದೂರುದಾರರು 10 ವರ್ಷಗಳಿಂದ 3ನೇ ಎದುರುದಾರರಲ್ಲಿ ಶೇರುದಾರರಾಗಿದ್ದು, 1 ಮತ್ತು 2ನೇ ಎದುರುದಾರರು 2020-2021 ನೇ ಸಾಲಿಗೆ ರೂ.7500/-ಗಳನ್ನು ಮತ್ತು 2021-22ನೇ ಸಾಲಿಗೆ ರೂ.15,000/-ಗಳ ಪಾಲಿಸಿ ಪ್ರಿಮಿಯಂ ಹಣವನ್ನು 3ನೇ ಎದುರುದಾರರಿಂದ ಪಡೆದು ಗುಂಪು ವಿಮೆ ಪಾಲಿಸಿಗಳನ್ನು ನೀಡಿರುತ್ತಾರೆ.

ದೂರುದಾರರು ದಿ:01.02.2023 ರಂದು ವೈದ್ಯಕೀಯ ಚಿಕಿತ್ಸೆಗಾಗಿ ಶಿವಮೊಗ್ಗ ಆಸ್ಪತ್ರೆಯಲ್ಲಿ ದಾಖಲಾಗಿ ಚಿಕಿತ್ಸೆ ಪಡೆದು ದಿ:03.02.203ರಂದು ಆಸ್ಪತ್ರೆಯಿಂದ ಬಿಡುಗಡೆ ಹೊಂದಿರುತ್ತಾರೆ. ತದನಂತರ ದೂರುದಾರರು 3ನೇ ಎದುರುದಾರರ ಬಳಿ ವೈದ್ಯಕೀಯ ಚಿಕಿತ್ಸೆಗೆ ಖರ್ಚಾದ ಮೊತ್ತ ರೂ.3,50,000/-ಗಳನ್ನು ಮರುಪಾವತಿಸಿಲು ಕೋರಿ ಎಲ್ಲಾ ದಾಖಲಾತಿಗಳನ್ನು ನೀಡಿರುತ್ತಾರೆ. ಆಗ 3ನೇ ಎದುರುದಾರರು ಆದಷ್ಟು ಬೇಗ ವೈದ್ಯಕೀಯ ವೆಚ್ಚವನ್ನು ಮರುಪಾವತಿಸಲು ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿರುತ್ತಾರೆ. ಕೆಲವು ದಿನಗಳ ನಂತರ ದೂರುದಾರರು 3ನೇ ಎದುರುದಾರರ ಬಳಿ ವಿಚಾರಿಸಿ, ಇನ್ನೂ ವೈದ್ಯಕೀಯ ವೆಚ್ಚ ಪಾವತಿಸಲು ಕ್ರಮ ಕೈಗೊಳ್ಳದಿರುವುದರಿಂದ 1 ರಿಂದ 3ನೇ ಎದುರುದಾರರಿಗೆ ನೋಟಿಸ್ ನೀಡಿರುತ್ತಾರೆ. 2ನೇ ಎದುರುದಾರರು ನೋಟಿಸಿಗೆ ಉತ್ತರಿಸಿ ವೈದ್ಯಕೀಯ ಚಿಕಿತ್ಸೆ ವಿವರವನ್ನು ಮತ್ತು ಮೂಲ ದಾಖಲಾತಿಗಳನ್ನು ಸಲ್ಲಿಸಲು ತಿಳಿಸಿರುತ್ತಾರೆ. ಆಗ ದೂರುದಾರರು ಮತ್ತೆ 3ನೇ ಎದುರುದಾರರ ಬಳಿ ಹೋಗಿ ವಿಚಾರಿಸಿದಾಗ, ದಾಖಲಾತಿಗಳನ್ನು ಈಗಾಗಲೇ ಕಳುಹಿಸಲಾಗಿದೆ ಎಂದು ತಿಳಿಸಿರುತ್ತಾರೆ.

# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯ: ಕೆ.ವಿ.ಪ್ರಭಾಕರ್

**ಮೊಳಕಾಲ್ಮೂರು:** ರಾಜ್ಯದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸಲಾಗಿದೆ ಎಂದು ಮುಖ್ಯಮಂತ್ರಿಯ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ತಿಳಿಸಿದ್ದಾರೆ.

ತಾಲೂಕಿನ ಹಾನಗಲ್ ಪ್ರವಾಸಿ ಮಂದಿರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯದ ಗೊಂದಲವನ್ನು ನಿವಾರಿಸಿ ರಾಜ್ಯ ಮಟ್ಟದ ಪತ್ರಕರ್ತರ ಜೊತೆಗೆ ಜಿಲ್ಲೆ ಮತ್ತು ಪ್ರಾದೇಶಿಕ ಪತ್ರಿಕೆಗಳ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯ ಕಲ್ಪಿಸಲು ಅವಕಾಶ ಕಲ್ಪಿಸಲಾಗಿದೆ. ಮುಂದಿನ ದಿನಗಳಲ್ಲಿ ಮಾಧ್ಯಮದವರ ಅಗತ್ಯ ಸೌಕರ್ಯಗಳನ್ನು ಕಲ್ಪಿಸಲಾಗುವುದು. ಗ್ರಾಮೀಣ ಪ್ರದೇಶದ ಪತ್ರಕರ್ತರಿಗೆ ಬಸ್ ಪಾಸ್ ಗಾಗಿ ತೊಡಕಿರುವ ನಿಯಮವನ್ನು ಸಡಿಲಮಾಡಿ ಗ್ರಾಮೀಣರಿಗೆ ಹಾಗೂ ಪ್ರದೇಶಿಕ ಪತ್ರಕರ್ತರಿಗೆ ಸೌಲಭ್ಯ ಕಲ್ಪಿಸಲಾಗಿದೆ



ಎಂದು ತಿಳಿಸಿದರು.

ರಾಜ್ಯ ಕಾರ್ಯನಿರತ ಪರ್ತಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ ರಾಜ್ಯದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯವು ಪತ್ರಕರ್ತರಿಗೆ ಗಗನ ಕುಸುಮವಾಗಿದ್ದು, ಈ ಬಗ್ಗೆ ಹಿಂದಿನ ಸರ್ಕಾರಗಳ ಮುಖ್ಯಮಂತ್ರಿಗಳು ಕೇವಲ ಭರವಸೆ ನೀಡುತ್ತಾ ಮೂಗಿಗೆ ತುಪ್ಪ ಹಚ್ಚುವ ಕೆಲಸ ಮಾಡುತ್ತಿದ್ದರೇ ವಿನಾಃ ಯಾರೂ ಈಡೇರಿಸಿರಲಿಲ್ಲ. ಅದನ್ನು ಪ್ರಪ್ರಥಮವಾಗಿ ಬಜೆಟ್ ನಲ್ಲಿ ಘೋಷಣೆ ಮಾಡಿ ಈಡೇರಿಸುವ ಕೆಲಸ ಮಾಡಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರವಾಗಿದ್ದು, ಅದರ ಹಿಂದೆ ಶಕ್ತಿಯಾಗಿ ಇದ್ದಂತಹವರು ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರ ಶ್ರಮವು ಅನನ್ಯವಾಗಿದೆ. ಈ ಯೋಜನೆ ಜಾರಿಗೆ ತರಲು ಕಷ್ಟಕರವಾಗಿದ್ದು, ನೂರೆಂಟು ತನಿಖೆ ಎದುರಿಸಿ ಈ ಯೋಜನೆಯನ್ನು ಬಜೆಟ್ ನಲ್ಲಿ ಘೋಷಣೆ ಮಾಡಿ ಜಾರಿಗೊಳಿಸಬೇಕಾದಲ್ಲಿ ಪೂರ್ಣಾವಧಿ ನೇಮಕವಾಗಬೇಕೆಂದು ವಾರ್ತಾ ಇಲಾಖೆಯಿಂದ ತಡೆ ಹಿಡಿಯಲಾಗಿತ್ತು. ಈ ಹಿನ್ನೆಲೆಯಲ್ಲಿ ಹೋರಾಟ ಮಾಡಿ ಮುಖ್ಯಮಂತ್ರಿಗಳ ಗಮನ ಸೆಳೆದು ಪೂರ್ಣಾವಧಿಯ ನೇಮಕವೆಂಬುದನ್ನು ರದ್ದುಗೊಳಿಸಿರುವುದರಿಂದ ತಾಲೂಕು ಮಟ್ಟದ ಎಲ್ಲಾ ಪತ್ರಕರ್ತರು ಈ ಸೌಲಭ್ಯವನ್ನು ಪಡೆಯಬಹುದಾಗಿದೆ.ಆದರೆ ಪತ್ರಕರ್ತರಿಗೆ ಲೈನೇಜ್ ಹಣಕಾಸು ಇಲಾಖೆಯವರು ಕೇಳಿದ್ದರಿಂದ ಕನಿಷ್ಠ ಮೊತ್ತವನ್ನು ಲೈನೇಜ್ ಆಗಿ ನೀಡಿದ್ದಲ್ಲಿ ಈ ಸೌಲಭ್ಯ ಪಡೆಯಲು ಸಹಕಾರಿಯಾಗಿದೆ. ಮುಂದಿನ ದಿನಗಳಲ್ಲಿ ಹಲವಾರು ಸೌಕರ್ಯಗಳನ್ನು ಪಡೆದು-ಕೊಂಡು ಸಮಸ್ಯೆಗಳನ್ನು ಇತ್ಯರ್ಥಗೊಳಿಸಿಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ದಿನೇಶ್ ಗೌಡಿಗೆರೆ ಮಾತನಾಡಿ ಮುಖ್ಯಮಂತ್ರಿಯ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಪತ್ರಕರ್ತರಿಗೆ 2 ಮುಖ್ಯವಾಗಿ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಹಾಗೂ ಮಾಧ್ಯಮ ಸಂಜೀವಿನಿ ಯೋಜನೆಯನ್ನು ಕೊಡುಗೆಗಳನ್ನು ನೀಡಿ-ದ್ದಾರೆ. ಎಲ್ಲಾ ಕಾನೂನು ತೊಡಕುಗಳನ್ನು ಹಂತ ಹಂತವಾಗಿ ನಿವಾರಿಸುತ್ತಿದ್ದಾರೆ. ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ನೀಡಲು ಹಲವು ಕಾನೂನು ತೊಡಕುಗಳನ್ನು ನಿವಾರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಲವು ಬೇಡಿಕೆಗಳನ್ನು ಈಡೇರಿಸಬೇಕೆಂದು ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ರಾಜ್ಯ ವಸತಿ ಸಚಿವ ಜಮೀರ್ ಅಹಮದ್ ಅವರ ಮಾಧ್ಯಮ ಸಲಹೆಗಾರ ಉದಯವಾಣಿ ಪತ್ರಿಕೆಯ ಲಕ್ಷ್ಮಿನಾರಾಯಣ, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಲೋಕೇಶ್, ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಷ್ಟ್ರೀಯ ಮಂಡಳಿ ಸದಸ್ಯ ಹೆಂಜಾರಪ್ಪ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಜಡೇಕುಂಟೆ ಮಂಜುನಾಥ, ಈರಣ್ಣ ಯಾದವ್, ಜಿಲ್ಲಾ ಸಮಿತಿಯ ನಾಗೇಶ್, ವಿನಾಯಕ ಭಾಗವಹಿಸಿದ್ದರು.

## ಕೃಷ್ಣ ನದಿ ಕುರಿತ ನ್ಯಾಯ ಮಂಡಳಿ ತೀರ್ಪು ಪ್ರಕಟಿಸುವಂತೆ ಕೇಂದ್ರಕ್ಕೆ ರಾಜ್ಯದ ಒತ್ತಾಯ

**ನವದೆಹಲಿ,ಜು.8:** ಕೃಷ್ಣ ನದಿ ನೀರು ಹಂಚಿಕೆ ಕುರಿತಾಗಿ ನ್ಯಾಯ ಮಂಡಳಿ ನೀಡಿರುವ ಅಂತಿಮ ತೀರ್ಪನ್ನು ಆದಿ ಸೂಚನೆಯ ಮೂಲಕ ಪ್ರಕಟಿಸುವಂತೆ ರಾಜ್ಯ ಸರ್ಕಾರ ಕೇಂದ್ರವನ್ನು ಒತ್ತಾಯಿಸಿದೆ.

ದೆಹಲಿ ಪ್ರವಾಸದಲ್ಲಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಕೇಂದ್ರ ಸಚಿವ ವಿ.ಸೋಮಣ್ಣ ಅವರೊಂದಿಗೆ ಕೇಂದ್ರ ಜಲ ಶಕ್ತಿ ಸಚಿವ ಸಿ ಆರ್ ಪಾಟೀಲ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ನ್ಯಾಯ ಮಂಡಳಿಯ ತೀರ್ಪನ್ನು ಆದಿ ಸೂಚನೆಯ ಮೂಲಕ ಪ್ರಕಟಿಸದಿರುವ ಹಿನ್ನೆಲೆಯಲ್ಲಿ ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳ ಸೇರಿದಂತೆ ಕೃಷ್ಣ ಜಲಾನಯನ ಪ್ರದೇಶದಲ್ಲಿ ಬಾಕಿ ಉಳಿದಿರುವ ರಾಜ್ಯ ಸರ್ಕಾರದ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದರು

ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳ ಕುರಿತು ಸರ್ವ ಸಮ್ಮತ ತೀರ್ಮಾನ ಕೈಗೊಳ್ಳಲು ತಾವು ಕರೆದಿದ್ದ ಸಭೆ ಹಲವಾರು ಕಾರಣಗಳಿಂದ ಮುಂದೂಡಿಕೆಯಾಗಿದೆ ಎಂದು ಹೇಳಿದ ಅವರು ಐತೀರ್ಪಿನಂತೆ ಬಾಕಿ ಉಳಿದಿರುವ ಕಾಮಗಾರಿ ಕೈಗೊಳ್ಳಲು ಅವಕಾಶ ನೀಡಬೇಕು ಹಾಗೆ ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಳಕ್ಕೂ ಅನುಮತಿ ನೀಡುವಂತೆ ಕೋರಿದರು.

ಇದೆ ವೇಳೆ ಮಹದಾಯಿ ಯೋಜನೆ ಕುರಿತಾಗಿಯೂ ಚರ್ಚೆ ನಡೆಸಿದ ಅವರು ರಾಜ್ಯದಲ್ಲಿ ಯೋಜನೆಯಿಂದ ಮುಳುಗಡೆಯಾಗುವ ಅರಣ್ಯ ಪ್ರದೇಶದ ಬಗ್ಗೆ ಗೋವಾ ಸರ್ಕಾರ ತಕರಾರು ತೆಗೆದಿರುವುದು ಸರಿಯಲ್ಲ ಆ ಸರ್ಕಾರ-ಕ್ಕೆ ಸೂಕ್ತ ತಿಳುವಳಿಕೆ ಮಾಡಿಕೊಡುವಂತೆ ಮನವಿ ಮಾಡಿದರು.

ಇದಾದ ನಂತರ ಎರಡು ಯೋಜನೆಗಳ ಕುರಿತಾಗಿ ಕಾನೂನು ಹೋರಾಟ ನಡೆಸುವ ಕುರಿತಂತೆ ಕಾನೂನು ತಜ್ಞರು ಹಿರಿಯ ಅಧಿಕಾರಿಗಳೊಂದಿಗೆ ಕೇಂದ್ರ ಮಂತ್ರಿ ಪ್ರಹ್ಲಾದ ಜೋಶಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

# ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣದೊಂದಿಗೆ ಇತರೆ ಕೌಶಲ್ಯಗಳನ್ನು ಕಲಿಯಬೇಕಾಗಿದೆ: ಎಸ್.ವೈ.ಅರುಣಾದೇವಿ

**ಶಿವಮೊಗ್ಗ:** ಮನಸ್ಪೂರ್ತಿ ಕಲಿಕಾ ತರಬೇತಿ ಕೇಂದ್ರ, ಮಾನಸಾಧಾರ ಟ್ರಸ್ಟ್ (ರಿ) ಮತ್ತು ಜನಶಿಕ್ಷಣ ಸಂಸ್ಥೆಯ ಸಹಯೋಗದಲ್ಲಿ ಕೈ ಕಸೂತಿ ಮತ್ತು ಹೊಲಿಗೆ ತರಬೇತಿ ಶಿಬಿರವನ್ನು ಉದ್ಘಾಟಿಸಲಾಯಿತು. ಈ ತರಬೇತಿ ಶಿಬಿರದ ಕಾರ್ಯಕ್ರಮವನ್ನು ಜನಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಶ್ರೀಮತಿ ಎಸ್.ವೈ. ಅರುಣಾದೇವಿಯವರು ಉದ್ಘಾಟಿಸಿ "ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣದೊಂದಿಗೆ ಇತ-ರೆ ಕೌಶಲ್ಯಗಳನ್ನು ಕಲಿಯಬೇಕಾಗಿದೆ" ಎಂದು ಹೇಳುತ್ತಾ ಜನಶಿಕ್ಷಣ ಸಂಸ್ಥೆ ಮತ್ತು ಮಾನಸಾಧಾರ ಟ್ರಸ್ಟ್ (ರಿ) ವತಿಯಿಂದ ಕೌಶಲ್ಯಗಳನ್ನು ಪಡೆದಂತಹ ಕೆಲವು ಸಾಧಕರ ಹೆಸರುಗಳನ್ನು ಹೇಳುವುದರ ಮೂಲಕ ತರಬೇತುದಾರಿಗೆ ಸ್ಪೂರ್ತಿಯನ್ನು ತುಂಬಿದರು. ಈ ಕಾರ್ಯಕ್ರಮದ




ಅಧ್ಯಕ್ಷತೆಯನ್ನು ವಹಿಸಿದ್ದ ಮಾನಸ ಸಮೂಹ ಸಂಸ್ಥೆಗಳ ನಿರ್ದೇಶಕರಾದ ಡಾ.ರಜನಿ.ಎ.ಪೈರವರು "ಹೊಲಿಗೆ ಮತ್ತು ಕೈ ಕಸೂತಿ ತರಬೇತಿಯನ್ನು ಸಂಪೂರ್ಣವಾಗಿ ಸದುಪಯೋಗ ಪಡಿಸಿಕೊಂಡು ಸಣ್ಣ ಸಣ್ಣ ಕೈ ಚೀಲಗಳನ್ನು ಹೊಲೆದು ಸಹ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಕೊಳ್ಳಬಹುದು" ಎಂದು ಅಧ್ಯಕ್ಷೀಯ ನುಡಿಗಳನ್ನಾಡಿದರು.

ಈ ತರಬೇತಿಯನ್ನು ಪಡೆಯಲು ಇನ್ನೂ 20 ಜನರಿಗೆ ಅವಕಾಶವಿದ್ದು, ತರಬೇತಿ ತೆಗೆದುಕೊಳ್ಳಲು ಬಯಸುವವರು ತಮ್ಮ ಆಧಾರ್ ಕಾರ್ಡ್ ಹಾಗೂ ಫೋಟೋದೊಂದಿಗೆ ಮನಸ್ಪೂರ್ತಿ ಕಲಿಕಾ ತರಬೇತಿ ಕೇಂದ್ರದಲ್ಲಿ ಜುಲೈ 10 ರ ಒಳಗಾಗಿ ನೋಂದಣಿ ಮಾಡಿಸಬಹುದು. ಮನಸ್ಪೂರ್ತಿ ಕಲಿಕಾ ತರಬೇತಿ ಕೇಂದ್ರದಲ್ಲಿ ಕಲಿಕಾ ಮಟ್ಟ ಕಡಿಮೆ ಇರುವಂತಹ ಮಕ್ಕಳಿಗೂ ವಿಶೇಷ ಶಿಕ್ಷಣ ನೀಡುವುದರ ಜೊತೆಗೆ ಕೌಶಲ್ಯ ತರಬೇತಿಗಳನ್ನು ನೀಡಲಾಗುತ್ತಿದೆ.

ಕಾರ್ಯಕ್ರಮದ ನಿರೂಪಣೆಯನ್ನು ಕು.ಶಿಲ್ಪಾರವರು ನಿರ್ವಹಿಸಿದರು. ಸ್ವಾಗತವನ್ನು ಮನಸ್ಪೂರ್ತಿ ವಿಶೇಷ ಶಾಲೆಯ ಸಂಯೋಜಕರಾದ ಶ್ರೀಮತಿ ಜ್ಯೋತಿ ಅರುಣ್ ಕುಮಾರ್ ರವರು ನೆರವೇರಿಸಿದರು. ಪ್ರಾರ್ಥನೆಯನ್ನು ಶ್ರೀಮತಿ ಪದ್ಮಿನಿ ಹಾಗೂ ವಂದನಾರ್ಪಣೆಯನ್ನು ಶ್ರೀಮತಿ ಸುಜಾತ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಜನಶಿಕ್ಷಣ ಸಂಸ್ಥೆಯ ಕಾರ್ಯಕ್ರಮಾಧಿಕಾರಿಗಳಾದ ಶ್ರೀಮತಿ ಸುಮಾ, ಮನಃಸ್ಪೂರ್ತಿಯ ಸಂಯೋಜಕರಾದ ಶ್ರೀಮತಿ ರಂಗನಾಯಕಿ ಸೇರಿದಂತೆ ಸಂಸ್ಥೆಯ ಎಲ್ಲಾ ಬೋಧಕ - ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದು ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಿದರು.

## ಮಂತ್ರಿಗಳ ವಿರುದ್ಧ ಶಾಸಕರ ಮುನಿಸು ಮತ್ತೆ ಸ್ಫೋಟ

**ಬೆಂಗಳೂರು,ಜು.8-** ಅಧಿಕಾರ ಹಂಚಿಕೆ ಕುರಿತಂತೆ ರಾಜ್ಯ ಕಾಂಗ್ರೆಸ್ಸಿನಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ ಹಲವು ಮಂದಿ ಶಾಸಕರು ಮಂತ್ರಗಳ ಕಾರ್ಯ ವೈಖರಿ ಕುರಿತಂತೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ

ಅನುದಾನ ಹಂಚಿಕೆ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಅಸಮಾಧಾನಗೊಂಡಿರುವ ಶಾಸಕರ ಅಹಬಾಲು ಕೇಳಲು ಆಗಮಿಸಿರುವ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಎಐಸಿಸಿ ನಾಯಕ ಸುರ್ಜೇವಾಲ ಅವರನ್ನು ಭೇಟಿ ಮಾಡಿದ ಹಳೆ ಮೈಸೂರು ಪ್ರದೇಶದ 40ಕ್ಕೂ ಹೆಚ್ಚು ಮಂದಿ ಶಾಸಕರು ಅನೇಕ ಸಚಿವರ ಕಾರ್ಯವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೆಲವು ಮಂತ್ರಿಗಳು ಆಕಾಶದಿಂದ ಇಳಿದು ಬಂದವರಂತೆ ವರ್ತಿಸುತ್ತಿದ್ದಾರೆ ಶಾಸಕರ ಪತ್ರಗಳು ಮತ್ತು ಅಭಿಪ್ರಾಯಗಳಿಗೆ ಮನ್ನಣೆಯೇ ಇಲ್ಲದಂತಾಗಿದೆ ಇವರ ವರ್ತನೆಯಿಂದಾಗಿ ತಮಗೆ ಕ್ಷೇತ್ರದಲ್ಲಿ ಜನರ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.

ಶಾಸಕರ ಅಹವಾಲು ಆಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸುರ್ಜೇವಾಲ ಅವರು ಯಾವ ಸಚಿವರ ನಡೆ ಸರಿ ಇಲ್ಲ. ಯಾವ ಸಚಿವರು ಸರಿಯಾದ ಕೆಲಸ ಕಾರ್ಯಗಳನ್ನು ಮಾಡುತ್ತಿಲ್ಲ ಎಂಬ ಬಗ್ಗೆ ಕೇವಲ ಬಾಯಿ ಮಾತಿನ ಆರೋಪಗಳು ಬೇಡ. ಬದಲಾಗಿ, ಏನೇ ದೂರು ದುಮ್ಮಾನಗಳು ಇದ್ದರೆ ಅದನ್ನು ಲಿಖಿತ ರೂಪದಲ್ಲಿ ನೀಡುವಂತೆ ಸೂಚನೆ ನೀಡಿದ್ದೇನೆ ಎಂದು ಹೇಳಿದರು

ತಮ್ಮನ್ನು ಭೇಟಿ ಮಾಡಿದ ಶಾಸಕರೊಂದಿಗೆ, ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸ ಹೇಗಿದೆ? ಗ್ಯಾರಂಟಿ ಯೋಜನೆ ಜನರಿಗೆ ತಲುಪಿದ್ಯಾ? ಎರಡು ವರ್ಷ ಆಡಳಿತ ವೈಖರಿ ಹೇಗಿತ್ತು? ಆಡಳಿತ ಸುಧಾರಣೆ ಬಗ್ಗೆ ಚರ್ಚೆ ಮಾಡಿದ್ದೇನೆ ಎಂದರು.

### ಉದ್ಯೋಗ ಆಧಾರಿತ ಪ್ರೋತ್ಸಾಹಧನ ಯೋಜನೆಗೆ ಅನುಮೋದನೆ

# ಹೊಸ ಉದ್ಯೋಗಿಗಳು ಹಾಗೂ ಉದ್ಯೋದಾತರು ಯೋಜನೆಯ ಪ್ರಯೋಜನ ಪಡೆದುಕೊಳ್ಳಿ: ಕೆ.ವಿ.ಪ್ರವೀಣ್

**ಬಳ್ಳಾರಿ:** ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯವು ಉದ್ಯೋಗ ಆಧಾರಿತ ಪ್ರೋತ್ಸಾಹಧನ (ಇಎಲ್‌ಐ) ಯೋಜನೆಗೆ ಅನುಮೋದನೆ ನೀಡಿದ್ದು, ಉದ್ಯೋಗ ಸೃಷ್ಠಿ ಮತ್ತು ಎಲ್ಲಾ ಉತ್ಪಾದನಾ ವಲಯಗಳಲ್ಲಿ ಉದ್ಯೋಗಾವಕಾಶ ಮತ್ತು ಸಾಮಾಜಿಕ ಭದ್ರತೆ ಹೆಚ್ಚಿಸುವುದು ಈ ಯೋಜನೆಯ ಉದ್ದೇಶವಾಗಿದೆ ಎಂದು ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್‌ಓ) ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ.ಪ್ರವೀಣ್ ಅವರು ಹೇಳಿದರು.

ಮಂಗಳವಾರ ನಗರದ ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್‌ಓ) ಬಳ್ಳಾರಿ ಪ್ರಾದೇಶಿಕ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್‌ಓ) ಬಳ್ಳಾರಿ ಪ್ರಾದೇಶಿಕ ಕಚೇರಿ ವ್ಯಾಪ್ತಿಯಲ್ಲಿ ಬಳ್ಳಾರಿ, ವಿಜಯನಗರ, ಚಿತ್ರದುರ್ಗ ಮತ್ತು ಕೊಪ್ಪಳ ಸೇರಿ ನಾಲ್ಕು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುವ ಕೈಗಾರಿಕಾ ವಲಯ ಮತ್ತು ಇತರೆ ವಲಯಗಳ ಹೊಸ ಉದ್ಯೋಗಿಗಳು ಹಾಗೂ ಉದ್ಯೋಗಿಗಳಿಗೆ ಕೆಲಸ ನೀಡಿದ ಉದ್ಯೋಗದಾತರು ಇಬ್ಬರಿಗೂ ಈ ಯೋಜನೆಯ ಪ್ರಯೋಜನ ಪಡೆಯಬಹುದಾಗಿದೆ ಎಂದರು.

ಉದ್ಯೋಗ ಆಧಾರಿತ ಪ್ರೋತ್ಸಾಹಧನ ಯೋಜನೆಯ ಭಾಗವಾಗಿ ಹೊಸದಾಗಿ ಉದ್ಯೋಗದಲ್ಲಿರುವ ವ್ಯಕ್ತಿಗಳು ಹಾಗೂ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ಉದ್ಯೋಗದಾತರು ಕೇಂದ್ರ ಸರ್ಕಾರದ ಪ್ರೋತ್ಸಾಹಕಗಳಿಂದ ಪ್ರಯೋಜನ ಪಡೆಯುತ್ತಾರೆ ಎಂದು ತಿಳಿಸಿದರು.

ಈ ಯೋಜನೆಯನ್ನು 2024-25ರ ಕೇಂದ್ರ ಬಜೆಟ್‌ನಲ್ಲಿ ಪರಿಚಯಿಸಲಾಯಿತು. ಯುವಕರಿಗೆ ಉದ್ಯೋಗ, ಕೌಶಲ್ಯ



ಅಭಿವೃದ್ಧಿ ಮತ್ತು ಉದ್ಯಮಶೀಲತೆಯನ್ನು ಬೆಂಬಲಿಸುವ ಸಲುವಾಗಿ ಜಾರಿಗೊಳಿಸಲಾಯಿತು. ಈ ಯೋಜನೆಯ ಪ್ರಯೋಜನವು 2025 ರ ಆಗಸ್ಟ್ 01 ರಿಂದ 2027 ರ ಜುಲೈ 31 ರ ನಡುವೆ ಸೃಷ್ಟಿಯಾದ ಉದ್ಯೋಗಗಳಿಗೆ ಮಾತ್ರ ಅನ್ವಯವಾಗುತ್ತದೆ ಎಂದರು.

ಇಪಿಎಫ್‌ಓ ಕಚೇರಿ ವತಿಯಿಂದ ಈಗಾಗಲೇ ಪ್ರತಿ ತಿಂಗಳು ಆಯೋಜಿಸುತ್ತಿರುವ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮದಲ್ಲಿ ಯೋಜನೆಯ ಕುರಿತು ಅರಿವು ಮೂಡಿಸಲಾಗುವುದು ಹಾಗೂ ತಾಲ್ಲೂಕು ಮಟ್ಟದಲ್ಲಿ ಜಾಗೃತಿ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆ (ಇಪಿಎಫ್‌ಓ) ಬಳ್ಳಾರಿ ಪ್ರಾದೇಶಿಕ ಕಚೇರಿಯ ಆರ್ಥಿಕ ನಿರ್ವಹಣಾಧಿಕಾರಿ ಕೆ.ಎಸ್.ವೇಣುಗೋಪಾಲ್ ಅವರು ಮಾತನಾಡಿ, ಈ ಯೋಜನೆಯಡಿ ಮೊದಲ ಬಾರಿಗೆ ಉದ್ಯೋಗಕ್ಕೆ ಸೇರುವವರಿಗೆ 2 ಕಂತುಗಳಲ್ಲಿ ರೂ.15,000 ವರೆಗಿನ 1 ತಿಂಗಳ ವೇತನ ನೀಡಲಾಗುವುದು. ಹೊಸ ಉದ್ಯೋಗಿಯ ಸೇರ್ಪಡೆಗಾಗಿ ಉದ್ಯೋಗದಾತರಿಗೆ 2 ವರ್ಷಗಳವರೆಗೆ ತಿಂಗಳಿಗೆ ಗರಿಷ್ಟ 3,000 ರೂ.ಗಳ ಪ್ರೋತ್ಸಾಹ ಧನ ನೀಡಲಾಗುವುದು ಎಂದು ತಿಳಿಸಿದರು.

ಈ ಯೋಜನೆಯು ಎರಡು ಭಾಗಗಳನ್ನು ಒಳಗೊಂಡಿದ್ದು, -ಭಾಗ-ಎ-ಮೊದಲ ಬಾರಿಗೆ ಕೆಲಸ ಮಾಡುವವರ ಮೇಲೆ ಗಮನ ಕೇಂದ್ರೀಕರಿಸಿದರೆ -ಭಾಗ-ಬಿ-ಉದ್ಯೋಗದಾತರ ಮೇಲೆ ಗಮನ ಕೇಂದ್ರೀಕರಿಸಿದೆ ಎಂದರು.

***ಭಾಗ ಎ: ಮೊದಲ ಬಾರಿಯ ಉದ್ಯೋಗಿಗಳಿಗೆ ಪ್ರೋತ್ಸಾಹ:** ಈ ಭಾಗವು -ಇಪಿಎಫ್‌ಓ'ನಲ್ಲಿ ನೋಂದಾಯಿತರಾದ ಮೊದಲ ಬಾರಿಯ ಉದ್ಯೋಗಿಗಳನ್ನು ಗುರಿಯಾಗಿಸಿಕೊಂಡಿದ್ದು, ಈ ಯೋಜನೆಯ ಸಾಮಾಜಿಕ ಭದ್ರತೆಯ ಮೂಲಕ ಸುರಕ್ಷತಾ ಜಾಲವನ್ನು ಒದಗಿಸುತ್ತದೆ ಮತ್ತು ಔಪಚಾರಿಕ ಆರ್ಥಿಕತೆಗೆ ಸಂಯೋಜಿಸಲು ಅವರಿಗೆ ಸಹಾಯ ಮಾಡುತ್ತದೆ. 1 ಲಕ್ಷ ರೂ.ವರೆಗೆ ಮಾಸಿಕ ವೇತನ ಪಡೆಯುವ ಉದ್ಯೋಗಿಗಳು ಅರ್ಹರಾಗಿರುತ್ತಾರೆ.

ಪ್ರತಿಯೊಬ್ಬ ಅರ್ಹ ಉದ್ಯೋಗಿಗೆ ಒಂದು ತಿಂಗಳ ಇಪಿಎಫ್ ವೇತನ (ರೂ. 15,000 ವರೆಗೆ) ಎರಡು ಕಂತುಗಳಲ್ಲಿ ಲಭಿಸಲಿದೆ. ಆರು ತಿಂಗಳ ನಿರಂತರ ಸೇವೆಯ ನಂತರ ಮೊದಲ ಕಂತನ್ನು ವಿತರಿಸಲಾಗುತ್ತದೆ. 12 ತಿಂಗಳ ನಂತರ ಮತ್ತು ಕಡ್ಡಾಯ ಆರ್ಥಿಕ ಸಾಕ್ಷರತಾ ಕಾರ್ಯಕ್ರಮ ಪೂರ್ಣಗೊಂಡ ನಂತರ ಎರಡನೇ ಕಂತನ್ನು ಬಿಡುಗಡೆ ಮಾಡಲಾಗುತ್ತದೆ. ದೀರ್ಘಕಾಲೀನ ಹಣಕಾಸು ಯೋಜನೆಯನ್ನು ಉತ್ತೇಜಿಸಲು ಪ್ರೋತ್ಸಾಹದ ಒಂದು ಭಾಗವನ್ನು ಉಳಿತಾಯ ಸಾಧನ ಅಥವಾ ಠೇವಣಿ ಖಾತೆಯಲ್ಲಿ ಇಡಲಾಗುತ್ತದೆ.

# ನೂತನ ಸಂಶೋಧನೆಗಳಿಗೆ ಐಯುಎಸಿ ಕೇಂದ್ರ: ಪ್ರೊ.ಎಂ.ಟಿ.ಲಗಾರೆ

**ಬಳ್ಳಾರಿ :** ಸುರಕ್ಷತೆ ಭದ್ರತೆ ಮತ್ತು ಪರಿಸರಕ್ಕೆ ಧಕ್ಕೆಯಾಗದಂತೆ ಅತ್ಯುನ್ನತ ಮಾನದಂಡಗಳನ್ನು ಕಾಯ್ದುಕೊಂಡು ಕೌಶಲ್ಯಗಳನ್ನು ಹೆಚ್ಚಿಸಲು ಐಯುಎಸಿ (ಅಂತರ್ ವಿಶ್ವವಿದ್ಯಾಲಯ ವೇಗವರ್ಧಕ ಕೇಂದ್ರ) ಯು ನಿರಂತರವಾಗಿ ವಿನೂತನ ಸಂಶೋಧನಾ ಮಾರ್ಗಗಳಿಗೆ ಶ್ರಮಿಸುತ್ತಿದೆ ಎಂದು ಗುಲ್ಬರ್ಗ ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಪ್ರೊ. ಎಂ.ಟಿ ಲಗಾರೆ ಅವರು ಹೇಳಿದರು.

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಭೌತಶಾಸ್ತ್ರ ಅಧ್ಯಯನ ವಿಭಾಗ ಹಾಗೂ ಅಂತರ್ ವಿಶ್ವವಿದ್ಯಾಲಯ ವೇಗವರ್ಧಕ ಕೇಂದ್ರ ನವದೆಹಲಿ ಇವರ ಸಂಯುಕ್ತಾಶ್ರಯದಲ್ಲಿ ವಿವಿಯ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ "ಐಯುಎಸಿ ಪರಿಚಯ ಕಾರ್ಯಕ್ರಮ"ದಲ್ಲಿ ಭಾಗವಹಿಸಿ ಮಾತನಾಡಿದರು.

ಐಯುಎಸಿ ನಲ್ಲಿರುವ ಪೆಲ್ಲೆಟ್ರಾನ್ ವೇಗವರ್ಧಕ ಪ್ರಯೋಗಾಲಯವು 1991 ರಿಂದ ಕಾರ್ಯನಿರ್ವಹಿಸುತ್ತಿದೆ. ನಂತರದ ವರ್ಷಗಳಲ್ಲಿ ಇದು ಭಾರತ ಮತ್ತು ವಿದೇಶಗಳಿಂದ 400 ಕ್ಕೂ ಹೆಚ್ಚು ಬಳಕೆದಾರರಿಗೆ ಅಯಾನು ಕಿರಣಗಳನ್ನು ಒದಗಿಸುತ್ತಿದೆ.



ವೇಗವರ್ಧಕ ಭೌತಶಾಸ್ತ್ರವು ಕಣ ವೇಗವರ್ಧಕಗಳ ವಿನ್ಯಾಸ, ನಿರ್ಮಾಣ ಮತ್ತು ಕಾರ್ಯಾಚರಣೆಯ ಮೇಲೆ ಕೇಂದ್ರೀಕರಿಸಿದ ಭೌತಶಾಸ್ತ್ರದ ವಿಶೇಷ ಕ್ಷೇತ್ರವಾಗಿದ್ದು, ಇದರ ಜೊತೆಯಲ್ಲೆ ಪರಮಾಣು ಭೌತಶಾಸ್ತ್ರವು ಪರಮಾಣು ನ್ಯೂಕ್ಲಿಯರ್ಸ್‌ಗಳ ಒಟ್ಟಿಗೆ ಹಿಡಿದಿಟ್ಟುಕೊಳ್ಳುವ ಮೂಲಭೂತ ಶಕ್ತಿಗಳು ಮತ್ತು ಅವುಗಳಿಗೆ ಒಳಗಾಗುವ ಪ್ರತಿಕ್ರಿಯೆಗಳು, ವಿಕಿರಣಶೀಲ ಕೊಳೆತ, ವಿದಳನ ಮತ್ತು ಸಮ್ಮಿಳನಗಳನ್ನು ನೀಡುತ್ತವೆ. ಇವುಗಳ ಹೆಚ್ಚಿನ ಅಧ್ಯಯನಕ್ಕೆ ಹಾಗೂ ಸಂಶೋಧನೆಗೆ ಐಯುಎಸಿ ಕೇಂದ್ರವು ವೇದಿಕೆಯಾಗಿದೆ ಎಂದು ತಿಳಿಸಿದರು.

ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯ ಕುಲಪತಿಗಳಾದ ಪ್ರೊ.ಎಂ.ಮುನಿರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿಜ್ಞಾನದ ಎಲ್ಲ ಕ್ಷೇತ್ರವು ಭೌತಶಾಸ್ತ್ರದ ಮೇಲೆ ಅವಲಂಬನೆಯಾಗಿದೆ. ಕಲ್ಯಾಣ-ಕರ್ನಾಟಕ ಭಾಗದಲ್ಲಿ ಸುಮಾರು 15 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಸಂಶೋಧನಾ ಕೇಂದ್ರವನ್ನು ವಿವಿಯಲ್ಲಿ ನಿರ್ಮಿಸಲಾಗುವುದಾಗಿ ಹೇಳಿದರು. ಯುವ ಸಂಶೋಧಕರು ಐಯುಎಸಿ ಕೇಂದ್ರದ ಪ್ರಯೋಜನ ಪಡೆಯಬೇಕೆಂದು ಹೇಳಿದರು.

ನವದೆಹಲಿಯ ಐಯುಎಸಿ ವಿಜ್ಞಾನಿ ಹಾಗೂ ಪ್ರೋಗ್ರಾಂ ಲೀಡರ್ ಡಾ. ಫೌರನ ಸಿಂಗ್ ಮಾತನಾಡಿ, ವೇಗವರ್ಧಕ ಮಾಸ್ ಸ್ಪೆಕ್ಟ್ರೋಮೆಟ್ರ ಮತ್ತು ಭೂಕಾಲಗಣನ ಅತ್ಯಾಧುನಿಕ ಸೌಲಭ್ಯ ಹೊಂದಿರುವ ಮೊದಲನೆ ಕೇಂದ್ರವಾಗಿ ಐಯುಎಸಿ ಕಾರ್ಯನಿರ್ವಹಿಸುತ್ತಿದೆ. ಈ ಕೇಂದ್ರದ ಪ್ರಯೋಜನ ಪಡೆಯಲು ಯುವ ಸಂಶೋಧಕರು ಹೊಸ ಸಂಶೋಧನೆಗಳೊಂದಿಗೆ ಬರಬೇಕು ಎಂದು ಕರೆ ನೀಡಿದರು.ಮತ್ತೋರ್ವ ಐಯುಎಸಿ ಕೇಂದ್ರದ ವಿಜ್ಞಾನಿ ಹಾಗೂ ಕೇಂದ್ರದ ಸಂಚಾಲಕರಾದ ರಾಜೀವ್ ಮೆಹ್ತಾ ಮಾತನಾಡಿ, ಅಂತರ್-ವಿಶ್ವವಿದ್ಯಾಲಯ ವೇಗವರ್ಧಕ ಕೇಂದ್ರವು ಅತ್ಯಾಧುನಿಕ ಸಂಶೋಧನೆ ನಡೆಸಲು ಅಗತ್ಯವಿರುವ ಆಧುನಿಕ ಉಪಕರಣಗಳೊಂದಿಗೆ ವಿಜ್ಞಾನ ಸಮುದಾಯಕ್ಕೆ ಅನುಕೂಲವಾಗುವಂತೆ ನಿರ್ಮಿತವಾಗಿದೆ. ಅಲ್ಲದೇ, ಕೇಂದ್ರವು 400 ಅಂಗ ಸಂಸ್ಥೆಗಳನ್ನು, 1200 ಸಂಶೋಧನಾ ವಿದ್ಯಾರ್ಥಿಗಳನ್ನು ಹೊಂದಿದೆ ಎಂದರು.

ಮೈಸೂರು ವಿಶ್ವವಿದ್ಯಾಲಯದ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಎ ಪಿ ಜ್ಞಾನಪ್ರಕಾಶ ಮಾತನಾಡಿ, ಉನ್ನತ ಮಟ್ಟದ ಸೌಲಭ್ಯಗಳನ್ನು ಒಂದೇ ಸೂರಿನಡಿ ಒದಗಿಸುವ ಗುರಿಯನ್ನು ಐಯುಎಸಿ ಹೊಂದಿದೆ. ವಿಶ್ರೀಕೃವಿವಿಯಲ್ಲಿನ ಭೌತಶಾಸ್ತ್ರ ವಿಭಾಗವು ಹಲವು ವೈವಿಧ್ಯತೆಗಳೊಂದಿಗೆ ಕೂಡಿದ್ದು, ರಾಜ್ಯದಲ್ಲಿನ ಉಳಿದ ವಿವಿಗಳಿಗಿಂತ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ವಿವಿಧ ರಾಜ್ಯಗಳ 100ಕ್ಕೂ ಹೆಚ್ಚು ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಇದಕ್ಕೂ ಮುನ್ನ ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ವಿವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ ಎನ್.ಎಂ.ಸಾಲಿ, ವಿವಿಯ ಭೌತಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ.ತಿಪ್ಪೆರುದ್ರಪ್ಪ ಜೆ, ಡಾ.ಕೊಟ್ರೇಶ್ ಎಂ.ಜಿ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 'ಅರಸನ ಅರಮನೆಗೆ ಕಾರ್ಮೋಡ ಕವಿದೀತು, ಜಗತ್ತೇ ತಿರುಗಿನೋಡುವಂತಹ ಆಘಾತ ಭಾರತಕ್ಕೆ'

**ಮೈಸೂರು:** "ಅರಸನ ಅರಮನೆಗೆ ಕಾರ್ಮೋಡ ಕವಿದೀತು" ಎಂಬ ಸ್ಫೋಟಕ ಭವಿಷ್ಯ ಹೇಳಿದ್ದಾರೆ ಕೋಡಿ ಮಠದ ಶ್ರೀಗಳು. ಇದು ರಾಜ್ಯ ಹಾಗೂ ಕೇಂದ್ರ ಸರ್ಕಾರವೂ ಆಗಬಹುದು ಎರಡನ್ನೂ ಸೇರಿಸಿ ಹೇಳಿದ್ದು ಎನ್ನುವ ಮೂಲಕ ದೇಶ ನಾಯಕ ಸ್ಥಾನದಲ್ಲಿರುವವರಿಗೆ ಆಪತ್ತು ಕಾದಿದೆ ಎಂಬರ್ಥದಲ್ಲಿ ಹೇಳಿರುವ ಭವಿಷ್ಯ ಈಗ ಭಾರೀ ಸಂಚಲನ ಮೂಡಿಸಿದೆ.

ಮೈಸೂರಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಭವಿಷ್ಯವಾಣಿಗಳಿಗೆ ಹೆಸರುವಾಸಿಯಾದ ಕೋಡಿಮಠದ ಡಾ.ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ, "ಅರಸನ ಅರಮನೆಗೆ ಕಾರ್ಮೋಡ ಕವಿದೀತು, ಆದರೆ ಅದಕ್ಕೆ ಪರಹಾರ ಮಾಡಿಕೊಂಡರೆ ಸರಿಯಾದೀತು" ಎಂಬ ಪರಿಹಾರದ ಮಾರ್ಗೋಪಾಯದ ಸಾಧ್ಯತೆಯನ್ನೂ ತಿಳಿಸಿದ್ದಾರೆ.

**ಭಾರತದ ಭವಿಷ್ಯಕ್ಕೆ ಆಘಾತ :** ಭಾರತದಲ್ಲಿ ದೊಡ್ಡ ಆಘಾತ ಆಗುವ ಲಕ್ಷಣ ಇದೆ. ವಿಶ್ವವೇ ತಿರುಗಿ ನೋಡುವಂತಹ ಆಘಾತ ಆಗಲಿದೆ ಎಂದಿದ್ದಾರೆ.

ಸಂಕ್ರಾಂತಿ ಮೇಲೆ ಒಂದು ಭವಿಷ್ಯ, ಯುಗಾದಿಯ ಮೇಲೆ ಒಂದು ಭವಿಷ್ಯ ನಿರ್ಧಾರ ಆಗಲಿದೆ. ಯುಗಾದಿ ನಂತರ ಮಳೆ, ಬೆಳೆ ಬಗ್ಗೆ ನಿರ್ಧಾರ ಆಗುತ್ತದೆ. ಸಂಕ್ರಾಂತಿಯಲ್ಲಿ ರಾಜ್ಯಕ್ಕೆ ಮತ್ತು ದೊಡ್ಡ ದೊಡ್ಡ ವ್ಯಾಪಾರಸ್ಥರಿಗೆ ಇಂಥಹ ವ್ಯಾವಹಾರಿಕ ವಿಷಯಗಳು ಬರುತ್ತವೆ. ಹೀಗಾಗಿ ಸಂಕ್ರಾಂತಿವರೆಗೆ ಏನೂ ತೊಂದರೆ ಇಲ್ಲ, ಸಂಕ್ರಾಂತಿ ಫಲವನ್ನು ನೋಡಿ

**ಕೋಡಿಶ್ರೀ ಸ್ಫೋಟಕ ಭವಿಷ್ಯ**



ಹೇಳಬೇಕಾಗುತ್ತದೆ ಎಂದಿದ್ದಾರೆ. ಅಲ್ಲಿಯವರೆಗೆ ಏನೂ ತೊಂದರೆ ಇಲ್ಲ ಎಂದೂ ಕೋಡಿಮಠದ ಶಿವಾನಂದ ಶಿವಯೋಗಿ ಸ್ವಾಮೀಜಿ ಭವಿಷ್ಯ ಹೇಳಿದ್ದಾರೆ.

**ಜಾಗತಿಕ ಯುದ್ಧಗಳು ಮುಂದುವರಿಯುತ್ತೆ:** ಇನ್ನು ಯುದ್ಧದ ಪರಿಸ್ಥಿತಿಗಳು ಜಾಗತಿಕವಾಗಿ ಇನ್ನೂ ಮುಂದುವರಿಯುವ ಸಾಧ್ಯತೆ ಇದೆ. ಕದನ ವಿರಾಮಗಳು ಆಗಿದ್ದರೂ, ಮನಸ್ಸು ನಿಲ್ಲಬೇಕಲ್ವಾ ಮನಸ್ಸು ಕಟ್ಟುವ ಕೆಲಸ ಆದ್ರೆ ಯುದ್ಧ ನಿಲ್ಲುತ್ತದೆ ಎಂದಿದ್ದಾರೆ.ಅತೃಪ್ತ ಮನಸ್ಸುಗಳು ನಿಲ್ಲುವುದಿಲ್ಲ. ಅಮೆರಿಕದವರು ಗಾಳಿ, ನೀರಿಂದ ಏನೂ ಆಗಬಾರದೆಂದು ಪೆಂಟಗನ್ ನಗರವನ್ನು ಕಟ್ಟಿದರು, ಆದರೆ ಬಿನ್ ಲಾಡೆನ್‌ನ ಮನಸ್ಸು ತಡೆಯುವುದಕ್ಕಾಯಿತಾ? ಮನಸ್ಸು ಕಟ್ಟುವ ಕೆಲಸ ಆದ್ರೆ ಯುದ್ಧ ನಿಲ್ಲುತ್ತದೆ ಎಂದರು.

**ನನ್ನ ಭವಿಷ್ಯ ನಿಜಯವಾಗಿದೆ- ಸೋಮಣ್ಣ:** ಜೂನ್ 21 ರಂದು ಹಾಸನದ ಅರಸೀಕೆರೆಯ ಮಠದಲ್ಲಿ ವಿ.ಸೋಮಣ್ಣ ಕೋಡಿಶ್ರೀ ಸ್ವಾಮೀಜಿಯನ್ನು ಭೇಟಿಯಾಗಿದ್ದರು. ಬಳಿಕ ಮಾಧ್ಯಮಗಳಿಗೆ ಮಾತನಾಡಿದ ಕೇಂದ್ರ ಸಚಿವರು, 2023 ರಲ್ಲಿ ಎರಡೂ ಕಡೆ ವೊಧಾನಸಭಾ ಕ್ಷೇತ್ರಗಳಲ್ಲಿ ಸೋತು ಕಂಗಾಲಾಗಿದ್ದೆ, ಆದರೆ ಶ್ರೀಗಳು 3 ತಿಂಗಳು ಕಾಯಿ, ದಕ್ಷಿಣದಿಂದ ಉತ್ತರಕ್ಕೆ ಹೋಗುತ್ತೀಯ ಎಂದು ಹೇಳಿದ್ದರು, ಅವರ ಮಾತನ್ನು ಈಗಲೂ ನೆನೆಸಿಕೊಳ್ತೇನೆ ಎಂದಿದ್ದರು.

**'ಸೂಳೆಯ ಮಗನುಟ್ಟಿ ಆಳುವನು ಮುನಿಪುರವ' :** ಅದೇ ದಿನ ಮತ್ತೊಂದು ಭಯಾನಕ ಭವಿಷ್ಯ ಹೇಳಿದ ಕೋಡಿಶ್ರೀ, ಸೂಳೆಯಾ ಮಗನುಟ್ಟಿ ಆಳುವನು ಮುನಿಪುರವ, ಯುದ್ಧವಿಲ್ಲದೆ ಮಡಿಯೆ ಪುರವೆಲ್ಲ ಕೂಳಾದೀತು. ಇದರ ಅರ್ಥ ಮುಂದೆ ಹೇಳುತ್ತೇನೆ ಎಂದು ಕುತೂಹಲ ಮೂಡಿಸಿದ್ದರು. ಇದೇ ವೇಳೆ ಕೊರೊನಾ ಇನ್ನೊಂದು ರೂಪ ತಾಳಲಿದೆ. ಕೆಲವು ದೇಶಗಳು ಮುಳುಗಲಿವೆ. ಕರ್ನಾಟಕ ಸಿಎಂ ಸಿದ್ದರಾಮಯ್ಯ ಸ್ಥಾನಕ್ಕೆ ಏನೂ ತೊಂದರೆ ಇಲ್ಲ . ಸಂಕ್ರಾಂತಿಯೊಳಗೆ ಮೇಘ ಸ್ಫೋಟ ಆಗುತ್ತದೆ ಎಂದಿದ್ದರು.

# ಮುಂಬರುವ ಚುನಾವಣೆಯಲ್ಲಿ ಗ್ಯಾರಂಟಿ ಯೋಜನೆಯ ಲಾಭ ಪಡೆಯಲು "ಕೈ" ಪ್ರಯತ್ನ

**ಬೆಂಗಳೂರು,ಜು.15-** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳನ್ನು ಕಾಂಗ್ರೆಸ್ ಪಕ್ಷದ ಪರ ಮತಗಳಾಗಿ ಪರಿವರ್ತಿಸಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.

ರಾಜ್ಯದ ಪ್ರತಿ ವಾರ್ಡ್, ಪಂಚಾಯ್ತಿಯಲ್ಲಿ ಗ್ಯಾರಂಟಿ ಸಮಾವೇಶ ಮಾಡುವುದರ ಬಗ್ಗೆ ಚರ್ಚಿಸುತ್ತಿದ್ದೇವೆ. ಆಮೂಲಕ ಕಾರ್ಯಕರ್ತರಿಗೆ ಶಕ್ತಿ ತುಂಬುವ ಕೆಲಸ ಮಾಡಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ.

ಬೆಂಗಳೂರು ನಗರದ ಗ್ಯಾರಂಟಿ ಸಮಿತಿ ಸದಸ್ಯರ ಸಭೆಯಲ್ಲಿ ಮಾತನಾಡಿದ ಅವರು ಇಂದಿನ ಕಾರ್ಯಕ್ರಮಕ್ಕೆ ಪರಾಜಿತ ಅಭ್ಯರ್ಥಿಗಳು, ಬ್ಲಾಕ್ ಅಧ್ಯಕ್ಷರು, ಮಾಜಿ ಕೌನ್ಸಲರ್ ಗಳನ್ನು ಕರೆಸಿದ್ದು, ನೀವು ಈ ವಿಚಾರವಾಗಿ ಯಾವ ರೀತಿ ಕೆಲಸ ಮಾಡುತ್ತೀರಿ ಅದರ ಮೇಲೆ ನಿಮ್ಮ ಹಣೆಬರಹ ನಿರ್ಧಾರವಾಗಲಿದೆ ಎಂದು ಹೇಳಿದರು

ಈ ಗ್ಯಾರಂಟಿ ಸಮಿತಿಗಳು ಕೇವಲ ಪಂಚ ಗ್ಯಾರಂಟಿ ಯೋಜನೆಗೆ ಮಾತ್ರ ಸೀಮಿತವಲ್ಲ. ಸರ್ಕಾರದ ಎಲ್ಲಾ ಜನಪರ ಯೋಜನೆಗಳ ಬಗ್ಗೆ ಸರ್ಕಾರದ ಧ್ವನಿಯಾಗಬೇಕು. ಗ್ಯಾರಂಟಿ ಯೋಜನೆ, ಖಾತಾ ದಾಖಲೆ ಹಂಚಿಕೆ ಹೆಸರಿನಲ್ಲಿ ನೀವು ಜನರ ಮನೆ ಬಾಗಿಲಿಗೆ ಹೋಗಬಹುದು. ನೀವು ಮನೆ ಬಾಗಿಲಿಗೆ ಹೋಗಿ, ಜನರ ಮನ ಗೆಲ್ಲಬೇಕು. ಮುಂದೆ ಬರುವ ಪಾಲಿಕೆ ಚುನಾವಣೆಯಲ್ಲಿ ಐದು ಪಾಲಿಕೆಗಳಲ್ಲಿ ಪಕ್ಷವನ್ನು ಗೆಲ್ಲಿಸಬೇಕು" ಎಂದರು.

ಡಿ.ಕೆ. ಶಿವಕುಮಾರ್, ಹೆಚ್.ಎಂ ರೇವಣ್ಣ ಹಿಂದೆ ಗಿರಕಿ ಹೊಡೆದರೆ ಪಾಲಿಕೆ ಚುನಾವಣೆ ಟಿಕೆಟ್ ಸಿಗುತ್ತದೆ ಎಂದು ನೀವು ಭಾವಿಸಿದ್ದರೆ, ಅದನ್ನು ತಲೆಯಿಂದ ತೆಗೆದುಹಾಕಿ. ನೀವು ಸ್ಥಳೀಯ ಮಟ್ಟದಲ್ಲಿದ್ದು ಕೆಲಸ ಮಾಡಬೇಕು" ಎಂದರು.

ಮಂಗಳೂರು ಭಾಗದಲ್ಲಿ ನಮಗೆ ಹೆಚ್ಚು ಸೋಲಾಗಿದೆ. ಆದರೆ ಗ್ಯಾರಂಟಿ ಯೋಜನೆಗಳಲ್ಲಿ ಹೆಚ್ಚು ಫಲಾನುಭವಿಗಳು ಇದೇ ಭಾಗದವರಿದ್ದಾರೆ. ಹೀಗಾಗಿ ಗ್ಯಾರಂಟಿ ಟೀಕಿಸುವ ವಿರೋಧ ಪಕ್ಷದವರಿಗೆ ನಾನು ಸವಾಲು ಹಾಕಿದೆ. ಗ್ಯಾರಂಟಿ ಯೋಜನೆ ಬೇಡವಾದರೆ ಅದನ್ನು ನಿಮ್ಮವರಿಂದ ಬರೆದು ಕಳಿಸಿ ಎಂದು ಹೇಳಿದೆ. ಗ್ಯಾರಂಟಿ ಯೋಜನೆ ಫಲ ಅನುಭವಿಸಿ ಅದನ್ನೇ ಟೀಕೆ ಮಾಡಿದರೆ ಹೇಗೆ? ನನಗೆ ಯುವಕರು ಹಾಗೂ ಮಹಿಳೆಯರ ಮೇಲೆ ಹೆಚ್ಚು ನಂಬಿಕೆ. ಹೀಗಾಗಿ ನಮ್ಮ ಗ್ಯಾರಂಟಿ ಯೋಜನೆಗಳು ಈ ವರ್ಗದವರ ಮೇಲೆ ಹೆಚ್ಚು ಕೇಂದ್ರೀಕೃತವಾಗಿದೆ. ಗ್ಯಾರಂಟಿ ಸಮಿತಿಯಲ್ಲಿ ಮಹಿಳೆಯರಿಗೆ ಜವಾಬ್ದಾರಿ ನೀಡಲಾಗಿದೆ. ನಮ್ಮ ಸರ್ಕಾರದ ಕೆಲಸಗಳನ್ನು ವಿರೋಧ ಪಕ್ಷಗಳು ಟೀಕೆ ಮಾಡುತ್ತಾರೆ. ಅವರು ಏ ನ ಬೇಕಾದರೂ ಟೀಕೆ ಮಾಡಲಿ. ಅವರ ಟೀಕೆಗಳು ಸಾಯುತ್ತವೆ, ನಮ್ಮ ಕೆಲಸಗಳು ಉಳಿಯುತ್ತವೆ" ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯವರಿಗೆ ನಿಮ್ಮ ಬೆಲೆ ಏನು ಎಂಬುದು ಅರ್ಥವಾಗಿಲ್ಲ. ನೀವು ಸರ್ಕಾರದ ಪ್ರತಿನಿಧಿಗಳು. ಕರ್ನಾಟಕದ, ಸರ್ಕಾರದ ದನಿ. ನಿಮಗೆ ಸರ್ಕಾರದ ಚಿಹ್ನೆ ನೀಡಲಾಗಿದೆ, ಅಧ್ಯಕ್ಷರುಗಳಿಗೆ ಕಚೇರಿ ನೀಡಲಾಗಿದೆ. ವಿಪಕ್ಷಗಳು ಸದನದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಗಳ ವಿರುದ್ಧ ಕೋಲಾಹಲ ಎಬ್ಬಿಸಿದರು. ಶಾಸಕರ ಕಾರ್ಯಪ್ರಗತಿ ಮಾಡಲು ನೀವುಗಳು ಯಾರು ಎಂದು ಪ್ರಶ್ನೆ ಮಾಡಿದರು. ಇವರುಗಳನ್ನು ನಮ್ಮ ಕೆಳಗೆ ಉಪಾಧ್ಯಕ್ಷರನ್ನಾಗಿ ಮಾಡಿ ಎಂದರು. ಶಾಸಕರ ಸ್ಥಾನಕ್ಕೆ ಕುತ್ತು ತಂದಿದ್ದೀರಿ ಎಂದರು. ನಮ್ಮ ಪಕ್ಕ ಕುರ್ಚಿ ಹಾಕಿದ್ದೀರಿ ಎಂದೆಲ್ಲ ಹೇಳಿದರು ಅವರ ಮಾತುಗಳಿಗೆ ನಾವು ಬಗ್ಗಲಿಲ್ಲ" ಎಂದರು.

ನಮ್ಮ ಕಾರ್ಯಕರ್ತರಿಗೆ ನಾವು ಶಕ್ತಿ ತುಂಬುವುದು ನಮ್ಮ ಕರ್ತವ್ಯ. ನಮ್ಮನ್ನು ಅಧಿಕಾರಕ್ಕೆ ತಂದ ನಿಮಗೆ ಅಧಿಕಾರ ನೀಡಿದ್ದೇವೆ.

## ಪೋಕ್ಸೋ ಕಾಯ್ದೆ: ಜಾಗೃತಿ ಕಾರ್ಯಕ್ರಮ

**ಚಿತ್ರದುರ್ಗ :** ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ನಗರದ ಸ್ವಾಮಿ ವಿವೇಕಾನಂದ ನಗರ ಸರ್ಕಾರಿ ಶಾಲೆಯಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ ಮತ್ತು ಪೋಕ್ಸೋ ಕಾಯ್ದೆ ಕುರಿತು ಮಂಗಳವಾರ ಜಾಗೃತಿ ಕಾರ್ಯಕ್ರಮ ನಡೆಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಮಂಜುನಾಥ್ ಮಾತನಾಡಿ, ಹೆಣ್ಣು ಮಕ್ಕಳಿಗೆ 18 ವರ್ಷ ತುಂಬುವವರೆಗೆ ಮದುವೆ ಮಾಡಬಾರದು. ಶಿಕ್ಷಣ ಕೊಡಿಸಬೇಕು. ಮೊರಾರ್ಜಿ ವಸತಿ ಶಾಲೆ, ನವೋದಯ ಇತ್ಯಾದಿ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರ ಉಚಿತ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ಇದರ ಸದುಪಯೋಗಪಡಿಸಿಕೊಳ್ಳಬೇಕು. ಬಾಲ್ಯ ವಿವಾಹ ಪ್ರಕರಣಗಳು ಕಂಡು ಬಂದಲ್ಲಿ ಬೇಜವಾಬ್ದಾರಿ ಮಾಡದೆ ಸಂಬಂಧಪಟ್ಟ ಬಾಲ್ಯ ವಿವಾಹ ನಿಷೇಧಾಧಿಕಾರಿಗಳಿಗೆ, ಮಕ್ಕಳ ಸಹಾಯವಾಣಿ 1098 ಗೆ ಮಾಹಿತಿ ನೀಡಬೇಕು.

ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ ಮಾತನಾಡಿ, ಬಾಲ್ಯ ವಿವಾಹ ಕಡಿಮೆ ಮಾಡಲು ತಾಯಂದಿರು ಮತ್ತು ಕಿಶೋರಿಯರಿಬ್ಬರೂ ಜಾಗೃತರಾಗಬೇಕು. ಮೊಬೈಲ್ ತಂತ್ರಜ್ಞಾನವನ್ನು ಧನಾತ್ಮಕವಾಗಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು. ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನೆ ಮೇಲ್ವಿಚಾರಕಿ ನಿರ್ಮಲ, ಜೆಂಡರ್ಸ್ ಸ್ಪೆಷಲಿಸ್ಟ್ ಗೀತಾ, ಮಕ್ಕಳ ರಕ್ಷಣಾ ಘಟಕ ರೇಣುಕಾ, ಶಾಲಾ ಮುಖ್ಯೋಪಾಧ್ಯಾಯ ಷಣ್ಮುಖಪ್ಪ, ಅಂಗನವಾಡಿ ಕಾರ್ಯಕರ್ತೆಯರಾದ ಸಾವಿತ್ರಮ್ಮ, ರಾಜಮ್ಮ, ವಿದ್ಯಾ ಇದ್ದರು.

## ಹಾಸನ: ಚಿಕ್ಕ ತಿರುಪತಿ ಜಾತ್ರಾ ಮಹೋತ್ಸವದ ವೇಳೆ ಪ್ರಸಾದ ಸೇವಿಸಿ 50ಕ್ಕೂ ಹೆಚ್ಚು ಮಂದಿ ಅಸ್ವಸ್ಥ..!



**ಹಾಸನ:** ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಮಾಲೆಕಲ್ ತಿರುಪತಿ ಗ್ರಾಮದಲ್ಲಿ ಚಿಕ್ಕತಿರುಪತಿ ಎಂದೇ ಖ್ಯಾತವಾಗಿರುವ ಶ್ರೀ ವೆಂಕಟೇಶ್ವರ ಸ್ವಾಮಿ ದೇವಾಲಯದ ಜಾತ್ರಾ ಮಹೋತ್ಸವದ ವೇಳೆ ಪ್ರಸಾದ ಸೇವಿಸಿ 50ಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿರುವ ಘಟನೆ ಭಾನುವಾರ ನಡೆದಿದೆ.

ಮಾಲೆಕಲ್ ತಿರುಪತಿ ದೇವಾಲಯವು ಹಾಸನ ಜಿಲ್ಲೆಯ ಪ್ರಮುಖ ಯಾತ್ರಾ ಸ್ಥಳವಾಗಿದ್ದು, ಇದನ್ನು ಚಿಕ್ಕತಿರುಪತಿ ಎಂದು ಕರೆಯಲಾಗುತ್ತದೆ. ಪ್ರತಿವರ್ಷ ಜಾತ್ರಾ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಭಾಗವಹಿಸುತ್ತಾರೆ. ಈ ಬಾರಿಯ ಜಾತ್ರೆಯ ಸಂದರ್ಭದಲ್ಲಿ, ದೇವಾಲಯದ ಹೊರಗೆ ಖಾಸಗಿ ಸಂಸ್ಥೆಯೊಂದರಿಂದ ಮೊಸರು ಮತ್ತು ಬಿಸಿಬೇಳೆ ಬಾತ್ ರೂಪದಲ್ಲಿ ಪ್ರಸಾದ ವಿತರಿಸಲಾಗಿತ್ತು.

ಭಾನುವಾರ ರಾತ್ರಿ 7:30ರ ಸುಮಾರಿಗೆ ಸುಮಾರು 1,500 ಭಕ್ತರಿಗೆ ಈ ಪ್ರಸಾದ ವಿತರಣೆಯಾಗಿದೆ. ಇದನ್ನು ಸೇವಿಸಿದ ಕೆಲ ಭಕ್ತರು ಅಸ್ವಸ್ಥರಾಗಿದ್ದಾರೆ.

ಪ್ರಸಾದ ಸೇವಿಸಿದ ಕೆಲವೇ ಗಂಟೆಗಳಲ್ಲಿ, ರಾತ್ರಿಯಿಂದ ಸೋಮವಾರ ಮುಂಜಾನೆಯವರೆಗೆ ಹಲವು ಭಕ್ತರಿಗೆ ಹೊಟ್ಟೆನೋವು ಕಾಣಿಸಿಕೊಂಡಿದೆ. ಒಟ್ಟು 50ಕ್ಕೂ ಅಧಿಕ ಮಂದಿಯಲ್ಲಿ ಸಮಸ್ಯೆ ಕಾಣಿಸಿಕೊಂಡಿದೆ.

ಕೂಡಲೇ ಸ್ಥಳೀಯ ಆಡಳಿತವು ಕ್ರಮ ಕೈಗೊಂಡು, ಅಸ್ವಸ್ಥರನ್ನು ಅರಸೀಕೆರೆ ತಾಲ್ಲೂಕು ಆಸ್ಪತ್ರೆಗೆ ದಾಖಲಿಸಿತು. ಸದ್ಯ, 30ಕ್ಕೂ ಹೆಚ್ಚು ಜನರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದ್ದು, ಎಲ್ಲರೂ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಈ ನಡುವೆ ಘಟನೆಯನ್ನು ತಾಲ್ಲೂಕು ಆಡಳಿತವು ಗಂಭೀರವಾಗಿ ಪರಿಗಣಿಸಿದ್ದು, ಭಕ್ತರು ಸೇವಿಸಿದ ಪ್ರಸಾದದ ಮಾದರಿಗಳನ್ನು ಸಂಗ್ರಹಿಸಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಗೆ ಪರೀಕ್ಷೆಗೆ ರವಾನಿಸಿದೆ.

# ಬಾಲ ಗರ್ಭಿಣಿಯರ ಪ್ರಮಾಣ ಕಡಿಮೆ ಮಾಡಲು ಸಾಮಾಜಿಕ ಅರಿವು ಕಾರ್ಯಯೋಜನೆ ರೂಪಿಸಿ : ಡಾ.ಜಿ.ಪಿ.ರೇಣುಪ್ರಸಾದ್

**ಚಿತ್ರದುರ್ಗ :** ಜಿಲ್ಲೆಯಲ್ಲಿ ಬಾಲ ಗರ್ಭಿಣಿಯರ ಪ್ರಮಾಣ ಕಡಿಮೆ ಮಾಡಲು ಸಾಮಾಜಿಕ ಅರಿವು ಕಾರ್ಯಯೋಜನೆ ರೂಪಿಸಿ, ಸಾಮಾಜಿಕ ಅನಿಷ್ಟ ತಪ್ಪಿಸಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ನಗರದ ಭಾರತೀಯ ವೈದ್ಯಕೀಯ ಸಂಘದ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ಸಹಯೋಗದೊಂದಿಗೆ ಸ್ವಾಸ್ಥ್ಯ ಸರ್ಕಲ್ ಫೌಂಡೇಷನ್‌ನ 5ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಸಾರ್ವಜನಿಕ ಆರೋಗ್ಯ ಸೇವೆ ಒದಗಿಸುವಲ್ಲಿ ಸ್ವಾಸ್ಥ್ಯ ಸರ್ಕಲ್ ಫೌಂಡೇಷನ್ ಕಳೆದ 5 ವರ್ಷದಲ್ಲಿ ಒಂದಲ್ಲ ಒಂದು ಸೇವಾ ಯೋಜನೆ ರೂಪಿಸಿ ಕಾರ್ಯನಿರ್ವಹಿಸುತ್ತಿದೆ. ಕರೋನ ಸಂದರ್ಭದಲ್ಲಿ ಮಾಸ್ಕ್, ರಕ್ಷಾ ಕವಚ ಸರಬರಾಜು ಕೊರತೆಯಿದ್ದಾಗ ಆರೋಗ್ಯ ಸೇವೆ ಒದಗಿಸುವ ಕಾರ್ಯಕರ್ತರಿಗೆ ಪರಿಕರಗಳನ್ನು ಒದಗಿಸಿದರು. ಕ್ಯಾನ್ಸರ್ ಪತ್ತೆ ಹಚ್ಚುವಲ್ಲಿ ಆಯ್ದ ವೈದ್ಯಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ ನಡೆಸಿ, ಕೌಶಲ್ಯಾಭಿವೃದ್ಧಿ ಮತ್ತು ರೋಗಪತ್ತೆ ಹಚ್ಚುವಲ್ಲಿ ಕಾರ್ಯ ನಿರ್ವಹಿಸಿದ್ದಾರೆ ಎಂದು ತಿಳಿಸಿದರು.

ಫೌಂಡೇಷನ್ ಅಧ್ಯಕ್ಷೆ ಡಾ.ತೋಯಿಜಾಕ್ಷಿ ಬಾಯಿ ಮಾತನಾಡಿ, ಕಳೆದ 5 ವರ್ಷಗಳಿಂದ ಸ್ವಾಸ್ಥ್ಯ ಸರ್ಕಲ್ ಫೌಂಡೇಷನ್ ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕ ಆರೋಗ್ಯ ಬಲಪಡಿಸುವಲ್ಲಿ ಪರಿಸರ ಸಂರಕ್ಷಣೆ ನಿರ್ವಹಣೆಯಲ್ಲಿ ಮತ್ತು ಸಾಮಾಜಿಕ ಪಿಡುಗುಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದರೊಂದಿಗೆ ಸಕ್ರಿಯವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದರು.

ಬೆಂಗಳೂರು ಮೆಡಿಕಲ್ ಕಾಲೇಜು ಪ್ರಾಧ್ಯಾಪಕಿ ಡಾ.ಸರಸ್ವತಿ ಮಾತನಾಡಿ ಆರೋಗ್ಯ , ಸಾಮಾಜಿಕ, ಆರ್ಥಿಕ, ಪರಿಸರ ಮಾನದಂಡಗಳನ್ನು ಆಧರಿಸಿ ಜೀಯೋ ಬೇಸಡ್ ಮೊಬೈಲ್ ಆಧಾರಿತ ಅಪ್ಲಿಕೇಶನ್ ಸಿದ್ದಪಡಿಸಿ ಚಿತ್ರದುರ್ಗ, ಹೊಳಲ್ಕೆರೆ ಮತ್ತು ಹಿರಿಯೂರು ತಾಲ್ಲೂಕುಗಳಲ್ಲಿ ಆರೋಗ್ಯ ಇಲಾಖೆಯ ಸಹಕಾರದಿಂದ ಆರೋಗ್ಯ ಸೇವಾ ವಂಚಿತ ದುಸ್ತರ ಪ್ರದೇಶದ ಗ್ರಾಮಗಳನ್ನು ಆಯ್ದು ದತ್ತಾಂಶ ಸಂಗ್ರಹ ಕಾರ್ಯ ಈಗಾಗಲೇ ಚಾಲ್ತಿಯಲ್ಲಿದೆ. ಯೋಜನೆ ಆಡಳಿತ ಮತ್ತು ಉತ್ತಮ ಸೇವೆ ಒದಗಿಸುವಲ್ಲಿ ಇದು ಇಲಾಖೆಗೆ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಈಗಾಗಲೇ 2 ಸಾವಿರ ಮನೆ ಮನೆ ಭೇಟಿ, 10 ಸಾವಿರಕ್ಕೂ ಅಧಿಕ ಸಾರ್ವಜನಿಕರ ಆರೋಗ್ಯ ಮತ್ತು ಇತರ ಕುಟುಂಬ ಮಾಹಿತಿ ತಂತ್ರಜ್ಞಾನದ ಮೂಲಕ ದತ್ತಾಂಶ ಸಂಗ್ರಹಿಸಲಾಗಿದೆ. ಮುಂದಿನ ದಿನಗಳಲ್ಲಿ ಸುಸ್ಥಿರ ಅಭಿವೃದ್ಧಿ ಮಾನದಂಡ ಆಧಾರಿಸಿ ಕ್ರಿಯಾಯೋಜನೆ ತಯಾರಿಸಿ ಸರ್ಕಾರದ ಮಾರ್ಗದರ್ಶನದಂತೆ ಆರೋಗ್ಯ ಸೇವೆ ಒದಗಿಸಲಾಗುತ್ತದೆ ಎಂದರು. ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ಸಿ.ಓ.ಸುಧಾ ಮಾತನಾಡಿ, ಪ್ರಧಾನಮಂತ್ರಿ ನಿಕ್ಷಯ ಮಿತ್ರಯೋಜನೆ ಅನುಷ್ಠಾನ ಸಮಯದಲ್ಲಿ ಆಯ್ದ 10 ಕ್ಷಯರೋಗಿಗಳನ್ನು ದತ್ತು ಪಡೆದು ಪ್ರತಿ ತಿಂಗಳು ಅವರಿಗೆ ಪೌಷ್ಠಿಕಾಹಾರ ಪಟ್ಟಣ ನೀಡಿ ಅವರ ಯೋಗಕ್ಷೇಮ ಮೌಲ್ಯಮಾಪನ ಮಾಡಿ ಸಂಪೂರ್ಣ ಗುಣಮುಖರಾಗುವಂತೆ ಕಾರ್ಯ ನಿರ್ವಹಿಸಿದ ಕೀರ್ತಿ ಸ್ವಾಸ್ಥ್ಯ ಸರ್ಕಲ್ ಫೌಂಡೇಷನ್ ಅವರಿಗೆ ಸಲ್ಲುತ್ತದೆ ಎಂದರು. ಇದೇ ಸಂದರ್ಭದಲ್ಲಿ ಪ್ರತಿಭಾನ್ವಿತ ಕಾಲೇಜು ಮತ್ತು ಪ್ರೌಢಶಾಲೆಯ 5 ಜನ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ನಿವೃತ್ತ ಆರೋಗ್ಯ ಶಿಕ್ಷಣಾಧಿಕಾರಿ ಮೂರ್ತಪ್ಪ ಅವರಿಗೆ ಗೌರವ ಅಭಿನಂದನೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಆರೋಗ್ಯ ಶಿಕ್ಷಣಾಧಿಕಾರಿ ಎಂ.ಹೆಚ್.ಚಂದ್ರಶೇಖರ್ ನಾಯ್ಕ್, ನಿವೃತ್ತ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಸ್ವಾಸ್ಥ್ಯ ಸರ್ಕಲ್ ಫೌಂಡೇಷನ್ ಸರ್ವ ಸದಸ್ಯರು, ಡಾ.ಕವಿತ, ಡಾ.ಲೀಲಾವತಿ, ಡಾ. ಜಮುನಾ, ಡಾ.ಅನಿತಾ ಇದ್ದರು.

### ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ ಪ್ರಗತಿ ಪರಿಶೀಲನೆ

# ಮಕ್ಕಳು ದೇಶದ ಆಸ್ತಿ, ಆನ್‌ಲೈನ್, ಮಾದಕ ವಸ್ತುಗಳಿಂದ ರಕ್ಷಣೆ ಮಾಡುವುದು ಇಂದಿನ ಅಗತ್ಯ : ಕೆ.ನಾಗಣ್ಣಗೌಡ

**ದಾವಣಗೆರೆ:** ಮಕ್ಕಳು ದೇಶದ ಆಸ್ತಿ, ಸುಸ್ಥಿರ ಮಾನವ ಸಂಪನ್ಮೂಲ ಅಭಿವೃದ್ದಿಯಲ್ಲಿ ಗುಣಮಟ್ಟದ ಶಿಕ್ಷಣ ಮತ್ತು ಆನ್‌ಲೈನ್ ವ್ಯಸನ ಹಾಗೂ ಮಾದಕ ವಸ್ತುಗಳಿಂದ ಮಕ್ಕಳನ್ನು ಕಾಪಾಡಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ.ನಾಗಣ್ಣಗೌಡ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ಮಕ್ಕಳ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ಭಾಗೀದಾರರೊಂದಿಗೆ ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕೇವಲ ಆಯೋಗ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಕೆಲಸ ಮಾಡಿದರೆ ಸಾಲದು, ಶಿಕ್ಷಣ ಇಲಾಖೆ ಸೇರಿದಂತೆ ಇತರೆ ಎಲ್ಲಾ ಇಲಾಖೆಗಳು ಕೆಲಸ ಮಾಡಿದಾಗ ಮಕ್ಕಳ ಅಭಿವೃದ್ದಿಯಾಗಿ ದೇಶದ ಮಾನವ ಸಂಪನ್ಮೂಲ ಅಭಿವೃದ್ದಿಯಾಗಲಿದೆ ಎಂದರು.



ಮಕ್ಕಳಿಗೆ 18 ವರ್ಷದವರೆಗೆ ಶಿಕ್ಷಣ ಸಿಗಬೇಕು, ಯಾವುದೇ ಕಾರಣಕ್ಕೂ ಬಾಲ ಕಾರ್ಮಿಕ, ಬಲ್ಯವಿವಾಹ, ಲೈಂಗಿಕ ದೌರ್ಜನ್ಯವೆಸಗುವುದನ್ನು ತಡೆಗಟ್ಟಿ ಶಿಕ್ಷಣ ಸಿಗುವಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ. ಮಕ್ಕಳ ಕಲ್ಯಾಣಕ್ಕಾಗಿ ನಗರ, ಪಟ್ಟಣ ಮಟ್ಟದಿಂದ ಗ್ರಾಮ ಮಟ್ಟದವರೆಗೆ ಹಲವಾರು ಯೋಜನೆಗಳನ್ನು ಸರ್ಕಾರ ಇದಕ್ಕಾಗಿ ರೂಪಿಸಿದೆ. ಆದರೆ ಅನುಷ್ಠಾನದ ಹಂತದಲ್ಲಿ ಚಕ್ಕಲಿಯಿಂದ ಕೋಡುಬಳೆಯಂತಾಗಿದೆ ಎಂದರು.

ಬಾಲ್ಯ ವಿವಾಹ ತಡೆಗಟ್ಟಲು ಕಠಿಣ ಕ್ರಮದ ಅವಶ್ಯಕತೆ ಇದೆ. ಬಳ್ಳಾರಿಯ ಪ್ರಕರಣದಲ್ಲಿ ಅಲ್ಲಿನ ಪೊಲೀಸ್ ಅಧಿಕಾರಿಗಳು ಬಾಲ್ಯವಿವಾಹ ಮಾಡಿದ ಪೋಷಕರು ಸೇರಿದಂತೆ ಮದುವೆಯಲ್ಲಿ ಕಂಕಣ ಕಟ್ಟಿಸಿದವರಿಂದ ಭಾಗಿಯಾದ ಸಂಬಂಧಿಕರು, ಗಿಫ್ಟ್ ನೀಡಿದವರು ಸೇರಿ 194 ಜನರ ಮೇಲೆ ಎಫ್‌ಐಆರ್ ದಾಖಲಿಸಲಾಗಿತ್ತು.

ದಾವಣಗೆರೆ ಜಿಲ್ಲೆಯಲ್ಲಿ 2024-25 ರಲ್ಲಿ 75 ವರದಿಯಾದ ಪ್ರಕರಣಗಳಲ್ಲಿ 68 ತಡೆಯಲಾಗಿದ್ದು 2 ರಲ್ಲಿ ತಡೆಯಾಜ್ಞೆತರಲಾಗಿ ವಿವಾಹ ನಡೆದ 7 ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. 2025-26 ರ ಏಪ್ರಿಲ್ ನಿಂದ 31 ಪ್ರಕರಣಗಳು ವರದಿಯಾಗಿದ್ದು 29 ರಲ್ಲಿ ತಡೆಯಲಾಗಿದ್ದು ಬಾಲ್ಯ ವಿವಾಹ ಮಾಡಿದ 2 ಪ್ರಕರಣಗಳಲ್ಲಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಪೋಕ್ಸೋ ಪ್ರಕರಣ; 2024-25 ರಲ್ಲಿ 99 ಪೋಕ್ಸೋ ವರದಿಯಾಗಿದ್ದು ಇದರಲ್ಲಿ 16 ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ. 69 ರಲ್ಲಿ ಖುಲಾಸೆಯಾಗಿದ್ದು 6 ವರ್ಗಾವಣೆಯಾಗಿವೆ. 3 ಸುಳ್ಳು ಪ್ರಕರಣಗಳೆಂದು ಕೈಬಿಡಲಾಗಿದೆ. 2025 ರ ಮಾರ್ಚ್ ಅಂತ್ಯದವರೆಗೆ 224 ಪ್ರಕರಣಗಳು ವಿಚಾರಣಾ ಹಂತದಲ್ಲಿದ್ದರೆ, 20 ತನಿಖಾ ಹಂತದಲ್ಲಿವೆ. 2025-26 ರಲ್ಲಿ ಏಪ್ರಿಲ್‌ನಿಂದ ಜೂನ್ ವರೆಗೆ 31 ಪ್ರಕರಣಗಳು ವರದಿಯಾಗಿದ್ದು ಇದರಲ್ಲಿ 10 ಪ್ರೇಮ ಪ್ರಕರಣ, 10 ಬಾಲ್ಯವಿವಾಹ, 11 ಇತರೆ ಪೋಕ್ಸೊ ಮತ್ತು 5 ಬಾಲ ಗರ್ಭಿಣಿಯರ ಪ್ರಕರಣಗಳಿವೆ.

ಇಲಾಖೆ ಪೋರ್ಟಲ್ ಅನ್ವಯ ಕಳೆದ 5 ವರ್ಷಗಳಲ್ಲಿ ದಾವಣಗೆರೆಯಲ್ಲಿ 5513 ಬಾಲ ಗರ್ಭಿಣಿಯರು ಪತ್ತೆಯಾಗಿದೆ. ಆದರೆ ಆರೋಗ್ಯ ಇಲಾಖೆಯವರು ನೀಡುವ ಅಂಕಿ ಅಂಶಗಳಿಗೂ ಮತ್ತು ಪೋರ್ಟಲ್ ಮಾಹಿತಿಗೂ ವ್ಯತ್ಯಾಸ ಕಂಡು ಬರುತ್ತಿದೆ. 19 ವರ್ಷಕ್ಕೆ ಗರ್ಭಿಣಿಯಾಗಿದ್ದಲ್ಲಿಯೂ ಸಹ ಅದು ಬಾಲ್ಯ ವಿವಾಹದ ವ್ಯಾಪ್ತಿಗೆ ಬರುವುದನ್ನು ಗಮನಿಸಬೇಕು.

# 22 ಕೆರೆಗಳಿಗೆ ನೀರು ತುಂಬಿಸಲು ಬದ್ಧ: ಸಂಸದೆ ಪ್ರಭಾ ಮಲ್ಲಿಕಾರ್ಜುನ



**ಮಾಯಕೊಂಡ;** ಚುನಾವಣೆ ವೇಳೆ ನೀಡಿದ ಭರವಸೆಯಂತೆ 22 ಕೆರೆ ಏತ ನೀರಾವರಿ ಯೋಜನೆ ಪುನರ್ ನಿರ್ಮಾಣ ಮಾಡಿ ಕೆರೆಗಳನ್ನು ತುಂಬಿಸಲು ಕಟಿಬದ್ದವಾಗಿದ್ದೇನೆ ಎಂದು ಸಂಸದೆ ಪ್ರಭಾ ಮಲ್ಲಿಕಾರ್ಜುನ ಭರವಸೆ ನೀಡಿದರು.

ಸಮೀಪದ ದಿಂಡದಹಳ್ಳಿ ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಪ್ರಾಥಮಿಕ ಶಾಲೆಯ ನೂತನ ಕೊಠಡಿ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ, ಅವರು ಮಾತನಾಡಿದರು.

22ಕೆರೆ ಏತ ನೀರಾವರಿ ಯೋಜನೆ ಕಳಪೆಯಾಗಿದ್ದು, ಕೆರೆಗಳಿಗೆ ನೀರು ಹರಿಸಲಾಗಿರಲಿಲ್ಲ. ನಾನು ಚುನಾವಣಾ ಪ್ರಚಾರದಲ್ಲಿ ಭರವಸೆ ನೀಡಿದಂತೆ ಕೆರೆಗ ಸೀರು ಹರಿಸಲು ಕೆಲಸ ಮಾಡುವೆ.

ಈಗಾಗಲೇ ರಾಜನಹಳ್ಳಿ ಜಾಕ್ ವೆಲ್ ನಿಂದ ಹನಗವಾಡಿವರೆಗೆ 3.8 ಕಿ. ಮೀ ಹೊಸ ಪೈಪ್ ಲೈನ್ ನಿರ್ಮಾಣಕ್ಕೆ ರೂ 18 ಕೋಟಿ ಬಿಡುಗಡೆಯಾಗಿದ್ದು , ಟೆಂಡರ್ ಕರೆಯಲಾಗಿದೆ. ಹನಗವಾಡಿಯಿಂದ 18ಕಿ.ಮೀ. ಪೈಪ್ ಲೈನ್ ನಿರ್ಮಾಣಕ್ಕೆ ರೂ. 75 ಕೋಟಿ ಬಿಡುಗಡೆಗೆ ತಾಂತ್ರಿಕ ಅನುಮೋದನೆ ದೊರೆತಿದೆ. ಶೀಘ್ರ ಟೆಂಡರ್ ಕರೆದು ತುರ್ತಾಗಿ ಕೆಲಸ ಮಾಡಿ, ಶೀಘ್ರ ಕೆರೆಗಳಿಗೆ ನೀರು ಹರಿಸಲಾಗುತ್ತದೆ,ಎಂದು ಅವರು ಭರವಸೆ ನೀಡಿದರು

ಸಂಸತ್ ಸದಸ್ಯೆಯಾಗಿ ಅನೇಕ ಬಾರಿ ಹಳ್ಳಿಗಳಿಗೆ ಭೇಟಿ ನೀಡಿ ಸಮಸ್ಯೆ ಆಲಿಸಿದ್ದೇನೆ. ಎಲ್ಲರೂ ಶಿಕ್ಷಣ ಪ್ರೋತ್ಸಾಹಿಸಿ, ಬಾಬಾ ಸಾಹೇಬ್ ಅಂಬೇಡ್ಕರ್ ಮಾತನ್ನು ಅಕ್ಷರಶಃ ಜಾರಿಗೆ ತರಬೇಕು. ಲೋಕಸಭಾ ಸದಸ್ಯರ ಅನುದಾನದಲ್ಲಿ □ 85ಕ್ಷ ಅನುದಾನ ಮಾಯಕೊಂಡ ಕ್ಷೇತ್ರಕ್ಕೆ ಕೊಡಲಾಗಿದೆ. ಆನಗೋಡಿನ ಬಸ್ ನಿಲ್ದಾಣ ಅನುಕೂಲಕರ ಸ್ಥಳದಲ್ಲಿ ನಿರ್ಮಾಣದ ಮಾಡಬೇಕು. ಪ್ರತೀ ಶಾಲೆಗೂ ಒಂದು ರಂಗಮಂದಿರ ನಿರ್ಮಾಣವಾಗಬೇಕು ಎಂದರು.

ಪಿ. ಎಂ. ರಿಲೀಪ್ ಫಂಡ್ ನಿಂದ ಮೆಡಿಕಲ್ ಟ್ರೀಟ್ಮೆಂಟ್ ಪಡೆದವರಿಗೆ ಪರಿಹಾರದ ಹಣ ಬರುತ್ತದೆ. ಇಲ್ಲಿಯವರೆಗೆ □ 75ಲಕ್ಷ ಹಣ ತರಿಸಿದ್ದೇನೆ. ಎನ್ ಆರ್ ಎಲ್ ಎಂ ನಿಂದ ತರಬೇತಿ ಪಡೆದರೆ ಸ್ವ ಉದ್ಯೋಗ ಮಾಡಬಹುದು. ಉತ್ಪನ್ನಗಳನ್ನು ತಯಾರಿಸಿದರೆ ಸರ್ಕಾರವೇ ಖರೀದಿಸುತ್ತದೆ, ಎಂದರು.

ಲೋಕಸಭೆ ಮಳೆಗಾಲ ಅಧಿವೇಶನದಲ್ಲಿ ಪೆಹಲ್ಗಾಮ್ ಬಗ್ಗೆ ಚರ್ಚಿಸಲು ಒಂದು ದಿನದ ಅವಕಾಶ ಕಲ್ಪಿಸಲಾಗಿದೆ. ಟ್ರಂಪ್ ಅವರ ನೀತಿ ಬಗ್ಗೆ ಚರ್ಚಿಸಬೇಕು. ಗೋವಾ ಟ್ರೈಬಲ್ ಬಿಲ್, ನ್ಯಾಷನಲ್ ಸ್ಪೋರ್ಟ್ಸ್ ಅಕಾಡೆಮಿ ಬಗ್ಗೆ ಚರ್ಚೆಯಿದೆ. ಎಂಪಿಗಳೂ ಮಾತನಾಡಲು ಅವಕಾಶ ಕಲ್ಪಸಲಾಗಿದೆ, ಎಂದುಬಮಾಹಿತಿ ನೀಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಟಿ. ಹನುಮಂತಪ್ಪ, ಸಂಸದರು ಜಿಲ್ಲೆಯಾದ್ಯಂತ ಹಳ್ಳಿಗಳಿಗೆ ಓಡಾಡಿ ಕೆಲಸ ಮಾಡುತ್ತಿದ್ದಾರೆ. ಹಿಂದೆ ಸಂಸದರನ್ನು ಕಾಣುವುದೇ ಕಷ್ಟವಾಗುತ್ತಿತ್ತು. ಬಡವರಿಗೆ ಬಿಪಿಎಲ್ ಕಾರ್ಡ್ ನಿಂದ ಹಲವು ಸೌಲಭ್ಯವಿದ್ದು, ಸಂಸದರು ಇಂಥ ಎಲ್ಲಾ ಸಮಸ್ಯೆ ಪರಿಹರಿಸುತ್ತಾರೆ ಎಂದರು.

ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ವೆಂಕಟೇಶ್, ಕೊಡಗನೂರು ಗ್ರಾ.ಪಂ.ಅಧ್ಯಕ್ಷ ಸಿದ್ದಪ್ಪ, ಮಾಜಿ ಉಪಾಧ್ಯಕ್ಷ ಬಸಣ್ಣ, ಮಾಜಿ ಸದಸ್ಯೆ ನಳಿನಮ್ಮ,

ಬಿ.ಇ.ಓ ಪುಷ್ಪಲತಾ, ಎಸ್.ಡಿ.ಎಮ್ ಸಿ ಅಧ್ಯಕ್ಷ ನಿರಂಜನ, ಮುಖಂಡರಾದ ರುದ್ರೇಶಣ್ಣ, ಮಂಜುನಾಥ ಅಣ್ಣಾಪುರ, ಹುಚ್ಚವನಹಳ್ಳಿ ಮಾಯಕೊಂಡ ಗ್ರಾಮಸ್ಥರು ಇದ್ದರು.

**ಸರ್ಕಾರದ ಗ್ಯಾರಂಟಿ ಯೋಜನೆಗೆ ವಿಶ್ವ ಮನ್ನಣೆ: ಪ್ರಭಾ ಮಲ್ಲಿಕಾರ್ಜುನ್**

**'ಕರ್ನಾಟಕದ ಗ್ಯಾರಂಟಿ ಯೋಜನೆಗಳಿಗೆ ವಿಶ್ವ ಮನ್ನಣೆ ದೊರಯುತ್ತಿದೆ. ಗ್ಯಾರಂಟಿ ಯೋಜನೆಗಳ ಬಗ್ಗೆ ವಿದೇಶದಲ್ಲಿ ಚರ್ಚೆಯಾಗುತ್ತಿದೆ. ಜಾತಿ, ವಯಸ್ಸು ನೋಡದೇ ಮನೆ ಯಜಮಾನಿ ಎಂಬ ಅರ್ಹತೆ ಮಾತ್ರ ಪರಿಗಣಿಸಿ ಗೃಹಲಕ್ಷ್ಮಿ ನೀಡಲಾಗಿದೆ. ವಿದೇಶಿ ವಿಶ್ವ ವಿದ್ಯಾನಿಲಯದಲ್ಲಿ ಗ್ಯಾರಂಟಿಯಿಂದಾದ ಆರ್ಥಿಕ ಸುಧಾರಣೆ ಕುರಿತು ಮಹಾ ಪ್ರಬಂಧಗಳು ಸಲ್ಲಿಕೆಯಾಗಿವೆ. ಐದು ನೂರು ಕೋಟಿ ಮಹಿಳೆಯರು ಉಚಿತ ಬಸ್ ಪ್ರಶಕ್ತಿ ಯೋಜನೆಯಿಂದಲೂ ಮಹಿಳೆಯರಿಗೆ ಸಾಕಷ್ಟು ಅನುಕೂಲವಾಗಿ, ಸ್ವಾವಲಂಬಿಗಳಾಗಿದ್ದಾರೆ. ಎಂದರು.**

# ದಾವಣಗೆರೆಯ ಮೂವರು ಸಾಧಕರಿಗೆ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪ್ರದಾನ



**ದಾವಣಗೆರೆ:** ಕರ್ನಾಟಕ ವಿಡಿಯೋ ಮತ್ತು ಫೋಟೋ ಅಸೋಸಿಯೇಷನ್ ಹಾಗೂ

ಬೈ ಅಂಡ್ ಸೇಲ್ ಇಂಟಕ್ಷನ್ಸ್ ಪ್ರೈವೇಟ್ ಲಿಮಿಟೆಡ್ ಅಂತರಾಷ್ಟ್ರೀಯ ಫೋಟೋಗ್ರಾಫಿ ವಿಡಿಯೋಗ್ರಾಫಿ ಆಲ್ಬಮ್ ಮತ್ತು ಡಿಜಿಟಲ್ ಪ್ರಿಂಟಿಗ್ ಇಮೇಜಿಂಗ್ ಪ್ರದರ್ಶನ ಫೋಟೋ ಟುಡೆ ಎಕ್ಸಿಮಿಷನ್ ಮತ್ತು 25ನೇ ವರ್ಷದ ಬೆಳ್ಳಿಮೋತ್ಸವ ಸಂಭ್ರಮಾಚರಣೆ ಅಂಗವಾಗಿ ಬೆಂಗಳೂರು ಅರಮನೆ ಮೈದಾನ ತ್ರಿಪುರವಾಸಿನಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಛಾಯಾಗ್ರಹಣ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ದಾವಣಗೆರೆಯ ಮೂವರು ಸಾಧಕರಿಗೆ ಕರ್ನಾಟಕ ಛಾಯಾರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು.

ದಾವಣಗೆರೆ ಜಿಲ್ಲಾ ಛಾಯಾಗ್ರಾಹಕರ ಸಂಘದ ನಿರ್ದೇಶಕರು ಹಿರಿಯ ಛಾಯಾಗ್ರಾಹಕರು,ಸಿದ್ಧಿವಿನಾಯಕ ಕಲರ್ ಲ್ಯಾಬ್ ಮತ್ತು ಸ್ಟುಡಿಯೋ ಮಾಲೀಕರಾದ ಬಿ.ಅರುಣ್ ಮುದಳ್ಳಿ ಹಾಗೂ ದಾವಣಗೆರೆ ತಾಲೂಕು ಫೋಟೋ ಮತ್ತು ವಿಡಿಯೋಗ್ರಾಫರ್ ಸಂಘದ ಗೌರವ ಅಧ್ಯಕ್ಷರು ಹಾಗೂ ಹಿರಿಯ ಛಾಯಾಗ್ರಾಹಕರು ಅನು ವಿಡಿಯೋ ಮಾಲೀಕರಾದ ಬಿ. ಮಂಜುನಾಥ್ ಹಾಗೂ ಸುಮಾ ಡಿಜಿಟಲ್ ಫೋಟೋಸ್ ಮಾಲೀಕರು ಆದ ಶ ಎಸ್. ಎ.ಸುಮಾ ಕಲ್ಲೇಶ್ ಇವರುಗಳಿಗೆ ಛಾಯಾಗ್ರಣ ಕ್ಷೇತ್ರ ಹಾಗೂ ಸಮಾಜ ಸೇವೆಯನ್ನು ಗುರುತಿಸಿ ಕಾರ್ಮಿಕ ಸಚಿವರಾದ ಸಂತೋಷ್ ಎಸ್ ಲಾಡ್ ರವರು ಕರ್ನಾಟಕ ಛಾಯಾ ರತ್ನ ಪ್ರಶಸ್ತಿ ಪ್ರದಾನ ಮಾಡಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಅಭಯ ಪ್ರಸಾದ್ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರು ಹಾಗೂ ಹುಬ್ಬಳ್ಳಿ ಧಾರವಾಡ ಶಾಸಕರು ಕಿರಣ್ ಬಂಕಾಳೆ ದೂರದರ್ಶನದ ವರದಿಗಾರರು ಹಾಗೂ ಅಧ್ಯಕ್ಷರು ಹುಬ್ಬಳ್ಳಿ ಫೋಟೋಗ್ರಾಫರ್ಸ್ ಮತ್ತು ವಿಡಿಯೋ ಅಸೋಸಿಯೇಷನ್ ರಿ, ಶರಣ ಬಸಪ್ಪ , ಕರ್ನಾಟಕ ಫೋಟೋ ಪತ್ರಕರ್ತರ ಸಂಘ ಬೆಂಗಳೂರು, ದಿನೇಶ್ ಚಂದ್ರ ವರ್ಮ, ಅಧ್ಯಕ್ಷರು ಉತ್ತರ ಪ್ರದೇಶ ಫೋಟೋಗ್ರಾಫರ್ಸ್ ಅಸೋಸಿಯೇಶನ್, ಹಾಗೂ ಕರ್ನಾಟಕ ವಿಡಿಯೋ ಮತ್ತು ಫೋಟೋ ಅಸೋಸಿಯೇಷನ್ ರಾಜ್ಯ ಪದಾಧಿಕಾರಿಗಳಾದ ಬೆಂಜಿಮನ್, ಜಗದೀಶ್, ಛಾಯಾ ಸುದ್ದಿ ಸಂಪಾದಕ ಖಾಜಪೀರ್ ಹೊಸಪೇಟೆ, ಕೃಷ್ಣಪ್ಪ ಉಪಸ್ಥಿತರಿದ್ದರು.

ಹಾಗೂ ದಾವಣಗೆರೆ ತಾಲ್ಲೂಕು ಫೋಟೋ ಮತ್ತು ವಿಡಿಯೋ ಗ್ರಾಫರ್ ಸಂಘದ ಅಧ್ಯಕ್ಷ ಎಂ ಮನು ಗೌರವ ಸಲಹೆಗಾರರು ಆದ ಸಂತೋಷ್ ದೊಡ್ಮನಿ, ಕೊಂಡಜ್ಜಿ ಎಸ್ ರಾಜಶೇಖರ್ ಅಧ್ಯಕ್ಷರು ಗ್ರಾಮಾಂತರ ವಲಯ ,ಉಪಾಧ್ಯಕ್ಷ ರಮೇಶ್ ಡಿ ಹಿಮಾಲಯ, ಪ್ರಧಾನ ಕಾರ್ಯದರ್ಶಿ ದೇವೇಂದ್ರಪ್ಪ ಕೆ ಕುಮಾರ್ , ಖಜಾಂಚಿ, ರಂಗನಾಥ್ ಡಿ ಸಂಚಾಲಕ ಸಂಜಯ್ ಎಫ್, ಮಲ್ಲೇಶ್ ಎಚ್ ಪಾಟೀಲ್ , ಹಾಗೂ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

# ರಾಜರ ಪರಕ್ರಾಮಗಳ ಬಗ್ಗೆ ಹಾಡಿ ಹೊಗಳಿದ : ಮೋದಿ



**ಹೊನ್ನಾಳಿ :** ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮನ್ ಕಿ ಬಾತ್ ನ 124 ನೇ ಸರಣಿಯಲ್ಲಿ ಮಾತನಾಡಿ, ದೇಶದ ಐತಿಹಾಸಿಕ ಕೋಟೆಗಳ ಬಗ್ಗೆ ಉಲ್ಲೇಖಿಸಿದ ಮೋದಿ ಕರ್ನಾಟಕದ ಚಿತ್ರದುರ್ಗ ಹಾಗೂ ಕಲಬುರುಗಿ ಐತಿಹಾಸಿಕ ಕೋಟೆಗಳ ಬಗ್ಗೆ ಹಾಗೂ ರಾಜರ ಪರಕ್ರಾಮಗಳ ಬಗ್ಗೆ ಹಾಡಿ ಹೊಗಳಿದರು.

ಭಾನುವಾರ ಬೆಳಗ್ಗೆ ಹೊನ್ನಾಳಿ ಪಟ್ಟಣದ ಮೋಹನ್ಎನ್‌ಕ್ಲೇವ್ ನಿಂದ ಇಡೀ ರಾಜ್ಯಕ್ಕೆ ನೇರ ಪ್ರಸಾರದ ಮನ್‌ಕಿ ಬಾತ್ ಕಾರ್ಯಕ್ರಮದಲ್ಲಿ ಅವರು ನಮ್ಮ ಪಕ್ಕದ ಜಿಲ್ಲೆಯ ಚಿತ್ರದುರ್ಗದ ಮದಕರಿ ನಾಯಕರ ಕೋಟೆ ಬಗ್ಗೆ ಉಲ್ಲೇಖಿಸಿದ್ದು ಕೊಂಡಾಡಿದ್ದು ವಿಶೇಷವಾಗಿತ್ತು.

ಹಾಗೆಯೇ ಮಂಗಳೂರಿನಲ್ಲಿ ಸ್ವಚ್ಛತೆ ಕಾಪಾಡಿರುವ ಬಗೆಯೂ ಮೋದಿ ಅವರು ಉಲ್ಲೇಖಿಸಿ ಮಾತನಾಡಿದಾಗ ಬಿಜೆಪಿ ಕಾರ್ಯಕರ್ತರು ಚಪ್ಪಾಳೆ ತಟ್ಟಿ ರಾಜ್ಯದ ಬಗ್ಗೆ ಅವರಿಗಿರುವ ಅಭಿಮಾನದ ಬಗ್ಗೆ ಸ್ವಾಗತಿಸಿದರು.

ಹಾಗೆಯೇ ಅಂತರೀಕ್ಷ ಯಾನದದಲ್ಲಿ ಭಾರತದ ಸಾಧನೆ ಹಾಗೂ ಅಂತರೀಕ್ಷ ಯಾನಿ ಶೂಭಾಶು ಶುಕ್ಲಾ ಅವರ ಮಹತ್ತರ ಸಾಧನೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

## ಮಟ್ಟದಲ್ಲಿ ಹರಿಯುತ್ತಿರುವ ತುಂಗಭದ್ರಾ ನದಿ

# ನದಿಪಾತ್ರದಲ್ಲಿನ ಜನರು ಎಚ್ಚರಿಕೆಯಿಂದಿರಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧಸ್ವಾಮಿ ಸೂಚನೆ

**ದಾವಣಗೆರೆ :** ಶಿವಮೊಗ್ಗ ಮತ್ತು ಚಿಕ್ಕಮಗಳೂರು ಭಾಗದಲ್ಲಿ ಹೆಚ್ಚಿನ ಮಳೆಯಾಗುತ್ತಿರುವುದರಿಂದ ತುಂಗಭದ್ರಾ ನದಿಯಲ್ಲಿ 1,12,170 ಕ್ಯೂಸೆಕ್ಸ್ ನೀರು ಅಪಾಯ ಮಟ್ಟದಲ್ಲಿ ಹರಿಯುತ್ತಿರುವುದರಿಂದ ಜನರು ನದಿಪಾತ್ರದಲ್ಲಿ ಎಚ್ಚರಿಕೆಯಿಂದ ಇರಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ ನೀಡಿದ್ದಾರೆ.

ತುಂಗಾ ಜಲಾಶಯದಿಂದ 68,599 ಕ್ಯೂಸೆಕ್ಸ್ ನೀರನ್ನು ನದಿಗೆ ಬಿಡಲಾಗಿದೆ. ಮತ್ತು ಭದ್ರಾ ಜಲಾಶಯ ಭರ್ತಿಯಾಗುವ ಹಂತದಲ್ಲಿದ್ದು, 39017 ಕ್ಯೂಸೆಕ್ಸ್ ನೀರನ್ನು ನದಿಗೆ ಬಿಡಲಾಗಿರುತ್ತದೆ. ಪ್ರಸ್ತುತ ತುಂಗಭದ್ರ ನದಿಯಲ್ಲಿ ಅಪಾಯ ಮಟ್ಟ ಮೀರಿ 1,12,170 ಕ್ಯೂಸೆಕ್ಸ್ ನೀರು ಹರಿಯುತ್ತಿದ್ದು, ಇದರಿಂದಾಗಿ ಹೊನ್ನಾಳಿ, ನ್ಯಾಮತಿ ಹಾಗೂ ಹರಿಹರ ತಾಲ್ಲೂಕುಗಳ ನದಿ ಪಾತ್ರದಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿರುತ್ತದೆ.

ಮುಂಜಾಗ್ರತಾ ಕ್ರಮವಾಗಿ ಹೊನ್ನಾಳಿ ಪಟ್ಟಣದ ನದಿ ತೀರದ ಬಾಲರಾಘಾಟ್ ಪ್ರದೇಶದ ಬಳಿ ಅಂಬೇಡ್ಕರ್ ಭವನದಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದ್ದು, 8 ಕುಟುಂಬದ 33 ಜನರನ್ನು ಸ್ಥಳಾಂತರ ಮಾಡಿ ಸಂತ್ರಸ್ತರಿಗೆ ಊಟೋಪಚಾರ ಹಾಗೂ ಅಗತ್ಯ ಮೂಲ ಸೌಕರ್ಯ ಹಾಗೂ ವೈದ್ಯಕೀಯ ಸೇವೆಗಳನ್ನು ಒದಗಿಸಲಾಗಿರುತ್ತದೆ. ಹರಿಹರ ಪಟ್ಟಣದ ಗಂಗಾನಗರ ಬಳಿ ಎಪಿಎಂಸಿ ಭವನದಲ್ಲಿ ಹಾಗೂ ನ್ಯಾಮತಿ ತಾಲ್ಲೂಕು ಚೀಲೂರು ಗ್ರಾಮದಲ್ಲಿ ಕಾಳಜಿ ಕೇಂದ್ರ ತೆರೆಯಲು ಸಿದ್ದತೆ ಮಾಡಿಕೊಳ್ಳಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಸುರಕ್ಷತಾ ದೃಷ್ಟಿಯಿಂದ ಜನ ಹಾಗೂ ಜಾನುವಾರುಗಳು ನದಿಗೆ ಇಳಿಯದಂತೆ ತಿಳಿಸಿದೆ ಹಾಗೂ ಸಾರ್ವಜನಿಕರು ಹಾಗೂ ಪ್ರವಾಸಿಗರು ನದಿಯ ಬಳಿ ಸೆಲ್ಫಿ ತೆಗೆದುಕೊಳ್ಳವುದನ್ನು ನಿಷೇದಿಸಿದೆ.

ತುರ್ತು ಸಂದರ್ಭದಲ್ಲಿ ಸಾರ್ವಜನಿಕರ ಸಹಾಯಕ್ಕಾಗಿ ಈ ಕೆಳಕಂಡ ಸಹಾಯವಾಣಿಗಳನ್ನು ತೆರೆಯಲಾಗಿದೆ.

ಜಿಲ್ಲಾಧಿಕಾರಿಗಳ ಕಾರ್ಯಾಲಯ, ದಾವಣಗೆರೆ 08192–234034 ಅಥವಾ 1077 ಎಲ್ ಡಿಆರ್‌ಎಫ್ ಘಟಕ ದೇವರಬೆಳೆಕೆರೆ 7411308591, ಆಗ್ನಿಶಾಮಕ ಇಲಾಖೆ ದಾವಣಗೆರೆ 08192–258101 ಅಥವಾ 112, ಮಹಾನಗರ ಪಾಲಿಕೆ ದಾವಣಗೆರೆ 08192–234444 ಹಾಗೂ 8277234444 (ವಾಟ್ಸ್ ಆಪ್) ಸ್ಮಾರ್ಟ್ ಸಿಟಿ, ದಾವಣಗೆರೆ, 18004256020, ತಾಲ್ಲೂಕು ಕಛೇರಿ, ದಾವಣಗೆರೆ 9036396101, ತಾಲ್ಲೂಕು 8277234444 (ವಾಟ್ಸ್ ಆಪ್) ಸ್ಮಾರ್ಟ್ ಸಿಟಿ, ದಾವಣಗೆರೆ, 18004256020, ತಾಲ್ಲೂಕು ಕಛೇರಿ, ದಾವಣಗೆರೆ 9036396101, ತಾಲ್ಲೂಕು ಕಛೇರಿ, ಹರಿಹರ 08192–272959, ತಾಲ್ಲೂಕು ಕಛೇರಿ, ಜಗಳೂರು 08196–227242, ತಾಲ್ಲೂಕು ಕಛೇರಿ, ಹೊನ್ನಾಳಿ 08188–252108, ತಾಲ್ಲೂಕು ಕಛೇರಿ, ನ್ಯಾಮತಿ 8073951245, ತಾಲ್ಲೂಕು ಕಛೇರಿ, ಚನ್ನಗಿರಿ

08188–295518 ಇಲ್ಲಿ ಸಹಾಯವಾಣಿ ಕೇಂದ್ರಗಳಿಗೆ ಕರೆ ಮಾಡಲು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

## ಸಹಚೇತನ ನಾಟ್ಯಾಲಯದ ಸ್ನೇಹಶ್ರೀ ಎಸ್.ಜಿ. ರಂಗಪ್ರವೇಶ

# ಭರತನಾಟ್ಯ ಸಂಸ್ಕಾರ ಕಲಿಸುವ ಕಲೆ: ಡಾ.ತುಳಸಿ ರಾಮಚಂದ್ರ



**ಶಿವಮೊಗ್ಗ:** ಭರತನಾಟ್ಯ ಭಾರತೀಯ ಪ್ರಾಚೀನ ನೃತ್ಯ ಪ್ರಾಕಾರಗಳಲ್ಲಿ ಒಂದಾಗಿದೆ. ಈ ಪ್ರಾಕಾರ ಕೇವಲ ಕಲಾಭಿವ್ಯಕ್ತಿ ಮತ್ತು ಮನೋರಂಜನೆಗಷ್ಟೇ ಸೀಮಿತವಾಗದೆ ನೃತ್ಯಪಟುಗಳಿಗೆ ಸಂಸ್ಕಾರ ಕಲಿಸುವ ಕಲೆಯಾಗಿದೆ ಎಂದು ಮೈಸೂರಿನ ಹಿರಿಯ ನೃತ್ಯ ವಿದ್ವಾಂಸರು ಹಾಗೂ ನೃತ್ಯಾಲಯ ಟ್ರಸ್ಟ್‌ನ ಸಂಸ್ಥಾಪಕರಾದ ಡಾ. ತುಳಸಿ ರಾಮಚಂದ್ರ ಹೇಳಿದರು.

ಸಹಚೇತನ ನಾಟ್ಯಾಲಯವು 20ನೆಯ ದಶಕಕ್ಕೆ ಕಾಲಿಟ್ಟಿರುವ ಸುಸಂದರ್ಭದಲ್ಲಿ ತಮ್ಮ ಕುಟುಂಬದವರ ಸಹಕಾರ ಹಾಗೂ ಸಹಚೇತನದ ಬಳಗದ ಸಹಯೋಗದಲ್ಲಿ ಜುಲೈ 27ರ ಭಾನುವಾರ ಸಂಜೆ ನಗರದ ಕುವೆಂಪು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಸ್ನೇಹಶ್ರೀ ಎಸ್. ಜಿ. ಇವರ ಭರತನಾಟ್ಯ ರಂಗಪ್ರವೇಶ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತೀಯ ಸಂಸ್ಕೃತಿ, ಸಂಸ್ಕಾರ ಹಾಗೂ ಮಾನವೀಯ ಮೌಲ್ಯವರ್ಧನೆಗೆ ಕಲೆ ಆಧಾರವಾಗಿದೆ. ಆದ್ದರಿಂದ ಭರತನಾಟ್ಯದಂತಹ ಕಲೆಯನ್ನು ಉಳಿಸಿ, ಬೆಳೆಸಲು ಪೋಷಕರು ತಮ್ಮ ಮಕ್ಕಳನ್ನು ನಾಟ್ಯಶಾಲೆಗೆ ಸೇರಿಸಬೇಕೆಂದು ಕರೆ ನೀಡಿದರು.

ಭರತನಾಟ್ಯ ಶ್ರೀಮಂತಿಕೆಯ ಕಲೆಯಾಗಿದ್ದರೂ ಸಹ ಉಳ್ಳವರಿಗಷ್ಟೇ ಸೀಮಿತವಾಗಬಾರದು ಎಂಬ ಕಾರಣಕ್ಕೆ ಸಹನಾ ಚೇತನ್ ಅವರು ಸ್ಲಂನಲ್ಲಿರುವ ಮಕ್ಕಳಿಗೂ ಸಹ ಭರತನಾಟ್ಯ ಕಲಿಸಿ ಅವರು ತಮ್ಮ ಪ್ರತಿಭಾ ಪ್ರದರ್ಶನಕ್ಕೆ ವೇದಿಕೆಯನ್ನೂ ಕಲ್ಪಿಸಿಕೊಡುತ್ತಾ ಬರುತ್ತಿರುವುದು ನೃತ್ಯಗುರುಗಳಿಗೆ ಮಾದರಿಯಾಗಿದೆ. ಇದೊಂದು ರಾಜ್ಯದಲ್ಲಿಯೇ ಅಪರೂಪವಾಗಿದೆ ಪ್ರಯತ್ನವಾಗಿದ್ದು, ಈ ನಿಟ್ಟಿನಲ್ಲಿ ಸಹನಾ ಚೇತನ್‌ರಂತಹ ಗುರುಗಳ ಸಂಖ್ಯೆ ಹೆಚ್ಚಾಗಲಿ ಎಂದು ಆಶಿಸಿದರು.

ನೃತ್ಯಗುರು ಸಹನಾ ಚೇತನ್ ಮಾತನಾಡಿ ಕಲೆಯನ್ನು ಕಲಿಸುವಾಗ ದೊರೆಯುವ ಗುರು ಸ್ಥಾನ ದೈವಕೃಪೆಯಾಗಿದೆ. ಭರತನಾಟ್ಯದಂತಹ ಸಂಸ್ಕಾರಯುತ ದೇಸಿ ಕಲೆಗಳನ್ನು ಪೋಷಕರು ತಮ್ಮ ಮಕ್ಕಳಿಗೆ ಕಲಿಸುವ ಮೂಲಕ ಮಕ್ಕಳ ಭವಿಷ್ಯ ಹಾಗೂ ಭಾರತೀಯ ಸಂಸ್ಕೃತಿಯ ಉತ್ಥಾನಕ್ಕೆ ಕಾರಣರಾಗಬೇಕೆಂದು ಕೋರಿದರು.

ಮಾಜಿ ಉಪಮುಖ್ಯಮಂತ್ರಿ ಕೆ. ಎಸ್. ಈಶ್ವರಪ್ಪ ಮುಖ್ಯ ಅತಿಥಿಯಾಗಿ ಆಗಮಿಸಿದ್ದರು. ಶಾಸಕರು ಹಾಗೂ ಸಹಚೇತನ ನಾಟ್ಯಾಲಯದ ಗೌರವಾಧ್ಯಕ್ಷರಾದ ಎಸ್.ಎನ್. ಚನ್ನಬಸಪ್ಪ(ಚನ್ನಿ) ಅಧ್ಯಕ್ಷತೆ ವಹಿಸಿದ್ದರು. ನೃತ್ಯಗುರು ಸಹನಾ ಚೇತನ್, ವೇದ ವಿದ್ವಾನ್ ರವಿಶಂಕರ್ ಸೋಮಯಾಜಿ, ಚೇತನ್ ಎಸ್., ಗಿರೀಶ್ ಎಸ್.ಜಿ., ಡಾ. ನಾಗಮಣಿ, ಮಾಲಿನಿ, ಶ್ವೇತಾ ಮತ್ತಿತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಹಾಡುಗಾರ ಬೆಂಗಳೂರಿನ ವಿದ್ವಾನ್ ವಿನಯ್ ರಾಜಮಾನ್ಯ, ಮೃದಂಗ ವಾದಕ ಮೈಸೂರಿನ ಹಿರಿಯ ಕಲಾವಿದ ಶಿವಶಂಕರ ಸ್ವಾಮಿ, ಕೊಳಲು ವಾದಕ ಮೈಸೂರಿನ ವಿದ್ವಾನ್ ಸಮೃದ್ಧ್ ಶ್ರೀನಿವಾಸನ್ ಇವರನ್ನು ಸನ್ಮಾನಿಸಲಾಯಿತು.

ಕೀರ್ತನಾ ಪ್ರಾರ್ಥಿಸಿ, ಸಹನಾ ಸ್ವಾಗತಿಸಿ, ಡಾ. ನಾಗಮಣಿ ಆನಂದ್‌ರಾಮ್ ಹಾಗೂ ಡಿ.ಆರ್. ರವೀನಾ ನಿರೂಪಿಸಿ, ಡಾ.ಮೈತ್ರೇಯಿ ವಂದಿಸಿದರು.

# ದೇಶದಲ್ಲೇ ರಾಜ್ಯ ತಲಾ ಆದಾಯದಲ್ಲಿ ಮೊದಲು: ಮುಖ್ಯಮಂತ್ರಿ ಸಿದ್ದರಾಮಯ್ಯ



**ಹಾಸನ :** ಗ್ಯಾರಂಟಿ ಯೋಜನೆಗಳ ಜಾರಿಯಿಂದ ಸಾರ್ವಜನಿಕರು ಕೊಂಡುಕೊಳ್ಳುವ ಸಾಮರ್ಥ್ಯ ಹೆಚ್ಚಾಗಿದ್ದು, ತಲಾ ಆದಾಯ ಏರಿಕೆಯಾಗಿ ಈಡಿ ದೇಶದಲ್ಲಿ ಕರ್ನಾಟಕ ರಾಜ್ಯ ಮೊದಲ ಸ್ಥಾನದಲ್ಲಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇವರ ಸಹಯೋಗದಲ್ಲಿ ಅರಸೀಕೆರೆ ತಾಲ್ಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಅರಸೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಲೋಕಾರ್ಪಣೆ ಹಾಗೂ ಫಲಾನುಭವಿಗಳ ಸಮಾವೇಶ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಜಾರಿಗೊಳಿಸುವುದರ ಜೊತೆಗೆ ಅಭಿವೃದ್ಧಿಯಲ್ಲೂ ರಾಜ್ಯ ಸರ್ಕಾರ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು.

ಬಡವ ಶ್ರೀಮಂತ ಎಂಬ ಅಸಮಾನತೆ ತೊಡೆದು ಹಾಕಿ ಸಮಾಜದಲ್ಲಿ ಪರಿವರ್ತನೆ ತರುವುದರಿಂದ ಸಮ ಸಮಾಜ ನಿರ್ಮಾಣಕ್ಕೆ ಸಹಾಯವಾಗುತ್ತದೆ ಎಂದ ಅವರು ಸರ್ಕಾರ ಈ ನಿಟ್ಟಿನಲ್ಲಿ ಹೆಚ್ಚು ಒತ್ತು ನೀಡಿ ಬಡವರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

52 ಸಾವಿರ ಕೋಟಿ ರೂಗಳನ್ನು ಗ್ಯಾರಂಟಿ ಯೋಜನೆಗಳಿಗೆ ವೆಚ್ಚ ಮಾಡಲಾಗುತ್ತಿದೆ, 1.20 ಲಕ್ಷ ಕೋಟಿ ರೂಗಳನ್ನು ಅಭಿವೃದ್ಧಿಗೆ ವೆಚ್ಚ ಮಾಡಲಾಗುತ್ತಿದೆ, ಎತ್ತಿನಹೊಳೆ ಯೋಜನೆಗೆ ಇನ್ನೂ 6000 ಕೋಟಿ ರೂಗಳು ಬೇಕಾಗುತ್ತದೆ 2 ವರ್ಷದಲ್ಲಿ ಸಂಪೂರ್ಣ ಮುಗಿಸಿ 7 ಜಿಲ್ಲೆಗಳಿಗೆ ಕುಡಿಯುವ ನೀರು ಒದಗಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಸದರಾದ ಶ್ರೇಯಸ್ ಎಂ.ಪಟೇಲ್ ಅವರು ಮಾತನಾಡಿ ಜಿಲ್ಲೆಯ 7 ಕ್ಷೇತ್ರಗಳಲ್ಲಿ ಅರಸೀಕೆರೆ ಕ್ಷೇತ್ರದ ಅಭಿವೃದ್ಧಿ ಹೊಂದಿದ ಕ್ಷೇತ್ರವಾಗಿದೆ ಎಂದರು. ಗ್ಯಾರೆಂಟಿ ಯೋಜನೆಯಿಂದ ಜನ ಸಾಮಾನ್ಯರಿಗೆ ಆರ್ಥಿಕ ಸ್ವಾಲಂಬನೆಯಾಗಿದೆ ಎಂದರು. ಕರ್ನಾಟಕ ರಾಜ್ಯ ಗೃಹ ಮಂಡಳಿಯ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ. ಶಿವಲಿಂಗೇಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಬಡವರ ಪರವಾಗಿ ಸರ್ಕಾರ ಉತ್ತಮವಾಗಿ ಕೆಲಸ ಮಾಡುತ್ತಿದೆ ಎಂದರು. ಇಂಜಿನಿಯರ್ ಕಾಲೇಜ್ ತಾಲ್ಲೂಕು ಕೇಂದ್ರಕ್ಕೆ ನೀಡಿ 240 ಸೀಟ್ ಮಂಜೂರಾಗಿದೆ, ಪಾಲಿಟೆಕ್ನಿಕ್ ಕಾಲೇಜು ವಿದ್ಯಾ ಕ್ಷೇತ್ರಕ್ಕೆ ಆದ್ಯತೆ ನೀಡಲಾಗಿದೆ. ತಾಲ್ಲೂಕಿನಲ್ಲಿ 8 ಮೊರಾರ್ಜಿ ದೇಸಾಯಿ ವಸತಿ ಶಾಲೆ ತೆರೆಯಲಾಗಿದೆ, ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ 36 ಕೋಟಿ ರೂಗಳ ವೆಚ್ಚದಲ್ಲಿ ವಸತಿ ಶಾಲೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಅರಸೀಕೆರೆ ತಾಲ್ಲೂಕಿಗೆ ಕುಡಿಯುವ ನೀರಿಗೆ 370 ಕೋಟಿ ಹಣ ಮಂಜೂರು ಮಾಡಿದರು. ಎತ್ತಿನಹೊಳೆ ಯೋಜನೆಯಿಂದ ಅರಸೀಕೆರೆ ತಾಲ್ಲೂಕಿಗೆ ಕುಡಿಯುವ ನೀರು ಒದಗಿಸಲಾಗಿದೆ.

ಹಾರನಹಳ್ಳಿ ಕಾವೇರಿ ಬೆಸನ್ ನಿಗೆ 50 ಕೋಟಿ ರೂಪಾಯಿ ಮಂಜೂರು ಮಾಡಿದ್ದಾರೆ. ಗಂಡಸಿ, ಬಾಣವಾರ ಕುಡಿಯುವ ನೀರಿಗೆ 100 ಕೋಟಿ

ಮಂಜೂರು ಮಾಡುವಂತೆ ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಿದರು.

ಕಲ್ಪತರು ನಾಡಿನ ತೆಂಗು ಬೆಳೆಗೆ ರೋಗ ರುಜಿನಗಳು ಹೆಚ್ಚಾಗುತ್ತಿದೆ ಇದನ್ನು ತಡೆಗಟ್ಟಲು ಸರ್ಕಾರ ತುರ್ತಾಗಿ ಕ್ರಮಕೈಗೊಳ್ಳುವಂತೆ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು.

ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಅವರು ಸ್ವಾಗತಿಸಿದರು.ತರೀಕೆರೆ ಕ್ಷೇತ್ರದ ಶಾಸಕರಾದ ಶ್ರೀನಿವಾಸ, ಅರಸೀಕೆರೆ ನಗರಸಭೆಯ ಅಧ್ಯಕ್ಷರಾದ ಸಮೀವುಲ್ಲಾ, ಉಪಾಧ್ಯಕ್ಷರಾದ ಮನೋಹರ್ ಅರಸೀಕೆರೆ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್ ತಾಲ್ಲೂಕು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ ಮತ್ತಿತರರು ಉಪಸ್ಥಿತರಿದ್ದರು

**ಮಾನ್ಯ ಗೌರವಾನ್ವಿತ 3 ನೇ ಕಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್ ನಂ:2198/2025**

**ಅರ್ಜಿದಾರರು:1)** ಸಿದ್ದಪ್ಪ ಆರ್.ಹೆಚ್ ಬಿನ್ ಲೇಟ್ ಹನುಮಂತಪ್ಪ ವಯಸ್ಸು ಸುಮಾರು 45 ವರ್ಷ 2.) ಶ್ರೀಮತಿ ಮಂಜಮ್ಮ ಕೊಂ ಆಂಜಿನಪ್ಪ ವಯಸ್ಸು ಸುಮಾರು 48 ವರ್ಷ 3.) ಶ್ರೀ ನಾಗರಾಜ್ ಆರ್. ಹೆಚ್ ಬಿನ್ ಲೇಟ್ ಹನುಮಂತಪ್ಪ ವಯಸ್ಸು ಸುಮಾರು 40 ವರ್ಷ 1 ರಿಂದ 3 ನೇ ಅರ್ಜಿದಾರರ ವಾಸ ಹದಡಿ ಗ್ರಾಮ, ದಾವಣಗೆರೆ ತಾಲ್ಲೂಕು ಮತ್ತು ದಾವಣಗೆರೆ ಜಿಲ್ಲೆ ಎಂದು ಇರುತ್ತದೆ.

4.) ಶ್ರೀಮತಿ ರತ್ನಮ್ಮ ಕೋಂ ನರಸಿಂಹಮೂರ್ತಿ ವಯಸ್ಸು ಸುಮಾರು 43 ವರ್ಷ ವಾಸ: ದೊಡ್ಡಬ್ಬಿಗೆರೆ ಗ್ರಾಮ. ಚನ್ನಗಿರಿ ತಾ ದಾವಣಗೆರೆ ಜಿ

**ವಿರುದ್ಧ**

**ಎದುರುದಾರರು:** 1.ತಹಶೀಲ್ದಾರರವರು ದಾವಣಗೆರೆ ತಾಲ್ಲೂಕು ಮತ್ತು ದಾವಣಗೆರೆ

**ಅರ್ಜಿದಾರರ ಪರ ನೀಡಲಾದ ಪ್ರಕರಣ ನೋಟೀಸ್**

ಈ ಮೇಲ್ಕಂಡ ಕೇಸಿನಲ್ಲಿ ಅರ್ಜಿದಾರರು ಎದುರುದಾರರ ವಿರುದ್ಧ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರ ತಂದೆಯಾದ ಹನುಮಂತಪ್ಪ ತಂದೆ ಸಿದ್ದಪ್ಪ ಇವರು ದಿನಾಂಕ: 20–04–1988 ರಂದು ದಾವಣಗೆರೆ ಜಿಲ್ಲೆ ದಾವಣಗೆರೆ ತಾಲ್ಲೂಕು, ಹದಡಿ ಗ್ರಾಮದ ಸ್ವ–ಗೃಹದಲ್ಲಿ ಮರಣ ಹೊಂದಿದ್ದು, ಇವರ ಮರಣ ಪ್ರಮಾಣಪತ್ರವನ್ನು ಪಡೆಯುವ ಸಲುವಾಗಿ ಅರ್ಜಿದಾರರು ನ್ಯಾಯಾಲಯದ ಮುಂದೆ ಅರ್ಜಿಯನ್ನು ಸಲ್ಲಿಸಿದ್ದು, ಅರ್ಜಿದಾರರಿಗೆ ಸಂಬಂದಪಟ್ಟ ಯಾರದಾದರು ತಕರಾರು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವುದಿದ್ದಲ್ಲಿ ದಿನಾಂಕ: 29/09/2025 ರಂದು ಖುದ್ದು ಹಾಜರಾಗಿ ಆಕ್ಷೇಪಣೆಯನ್ನು ಸಲ್ಲಿಸತಕ್ಕದ್ದು.

ತಪ್ಪಿದ್ದಲ್ಲಿ ತಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮುದ್ರೆ ಹಾಗೂ ಸಹಿಯೊಂದಿಗೆ ದಿನಾಂಕ:25.07.2025 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

**ಸಹಿ/–**
**ಅರ್ಜಿದಾರರ ಪರ ವಕೀಲರು**
**(ಬಿ.ಎಸ್. ನಾಗರಾಜ)**
**ವಕೀಲರು**

**ಸಹಿ/–**
**ಶಿರಸ್ತೇದಾರರು**
**ಮಾನ್ಯ ಪ್ರದಾನ 3ನೇ ಕಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ.ದಾವಣಗೆರೆ**

# ನೀರಿನಲ್ಲಿ ಲಾರ್ವ ಬೆಳೆಯದಂತೆ ಎಚ್ಚರವಹಿಸಿ, ಡೆಂಗ್ಯೂ ಜ್ವರದಿಂದ ಪಾರಾಗಿ

## ಜಾಗೃತಿ ಕಾರ್ಯಕ್ರಮದಲ್ಲಿ ಟಿಹೆಚ್‌ಒ ಡಾ.ಬಿ.ವಿ.ಗಿರೀಶ್ ಸಲಹೆ

**ಚಿತ್ರದುರ್ಗ :** ವಸತಿ ನಿಲಯಗಳಲ್ಲಿ ಇರುವ ವಿದ್ಯಾರ್ಥಿಗಳು ಕೀಟಜನ್ಯ ರೋಗಗಳ ಬಗ್ಗೆ ಮಾಹಿತಿ ತಿಳಿದು ಸೊಳ್ಳೆ ಬೆಳೆಯದಂತೆ ನಿಗಾವಹಿಸಿ ಸೊಳ್ಳೆ ಕಚ್ಚಿಸಿಕೊಳ್ಳದಂತೆ ಮುಂಜಾಗ್ರತ ಕ್ರಮಗಳನ್ನು ಪಾಲಿಸಿ ಡೆಂಗ್ಯೂ ಜ್ವರ ದಿಂದ ಪಾರಾಗಿರಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಅನ್ನೇಹಾಳ್ ಜಂಪಯ್ಯನಹಟ್ಟಿ ಗ್ರಾಮದ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಡೆಂಗ್ಯೂ ಮಾಸಾಚರಣೆ ಪ್ರಯುಕ್ತ ಡೆಂಗ್ಯೂ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶುದ್ಧ ನೀರಲ್ಲಿ ಬೆಳೆದ ಸೊಳ್ಳೆ ಹಗಲು ಹೊತ್ತು ಕಚ್ಚುವುದರಿಂದ ಡೆಂಗ್ಯೂ ಜ್ವರ ಹರಡುತ್ತಿದ್ದು, ಘನತ್ಯಾಜ್ಯ ವಿಲೇವಾರಿ ಮಾಡಿ ಪರಿಸರ ಸ್ವಚ್ಛತೆ ಕಾಪಾಡಿಕೊಂಡು ಡೆಂಗ್ಯೂ ಜ್ವರ ಹರಡದಂತೆ ಜಾಗೃತರಾಗಬೇಕು ಎಂದರು.

ಗೊಡಬನಹಾಳ್ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಅನುಷಾ ಮಾತನಾಡಿ, ಮನೆಯಲ್ಲಿನ ನೀರು ಶೇಖರಣ ತಾಣಗಳನ್ನು ವಾರಕ್ಕೆ ಒಮ್ಮೆ ಸ್ವಚ್ಛಗೊಳಿಸಿರಿ ಮತ್ತು ಮಳೆಗಾಲವಾದ್ದರಿಂದ ಮನೆಯ ಹೊರಗಡೆ ಘನ ತ್ಯಾಜ್ಯ ವಸ್ತುಗಳಲ್ಲಿ ಮಳೆಯ ನೀರು ಸಂಗ್ರಹವಾಗದಂತೆ ನಿಗಾವಹಿಸಿರಿ,



ಶುದ್ಧ ನೀರಲ್ಲಿ ಬೆಳೆದ ಈಡಿಸ್ ಜಾತಿಯ ಸೊಳ್ಳೆ ಹಗಲು ಹೊತ್ತು ಕಚ್ಚುವುದರಿಂದ ರೋಗನಿರೋಧಕ ಶಕ್ತಿ ಕಡಿಮೆ ಇರುವವರಿಗೆ ಡೆಂಗ್ಯೂ ಜ್ವರ ಬರುವ ಸಾಧ್ಯತೆ ಇದ್ದು, ವಿದ್ಯಾರ್ಥಿಗಳು ಸ್ವಯಂರಕ್ಷಣಾ ವಿಧಾನಗಳನ್ನು ಬಳಸಿ ಮಲಗುವಾಗ ಸೊಳ್ಳೆ ಪರದೆ ಬಳಸಿ ಡೆಂಗ್ಯೂ ಜ್ವರದಿಂದ ಪಾರಾಗಿರಿ ಎಂದರು

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ವಿದ್ಯಾರ್ಥಿಗಳಿಗೆ ಕರಪತ್ರ ಹಂಚಿಕೆ ಮಾಡಿ ಮಾತನಾಡಿ, ಇದ್ದಕ್ಕಿದ್ದಂತೆ ಜ್ವರ, ಕಣ್ಣಿನ ಹಿಂಭಾಗ ನೋವು, ಕೀಲು ಕಾಲುಗಳಲ್ಲಿ ಮಾಂಸ ಖಂಡಗಳಲ್ಲಿ ನೋವು, ಇವು ಡೆಂಗ್ಯೂ ಜ್ವರದ ಲಕ್ಷಣಗಳು ಯಾವುದೇ ಜ್ವರವಿರಲಿ ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ರಕ್ತ ಪರೀಕ್ಷೆ ಮಾಡಿಸಿ ಚಿಕಿತ್ಸೆ ಪಡೆಯಿರಿ. ಡೆಂಗ್ಯೂ ಜ್ವರಕ್ಕೆ ನಿಗದಿತವಾದ ಚಿಕಿತ್ಸೆ ಲಭ್ಯವಿಲ್ಲ ರೋಗಲಕ್ಷಣಗಳಿಗನುಸಾರವಾಗಿ ವೈದ್ಯರು ಚಿಕಿತ್ಸೆಯನ್ನು ನೀಡುತ್ತಿದ್ದು ರೋಗಬಾರದಂತೆ ಎಚ್ಚರ ವಹಿಸುವುದು ಬಹು ಮುಖ್ಯ ಎಂದರು.

ಕಾರ್ಯಕ್ರಮದಲ್ಲಿ ಗೊಡಬನಹಾಳ್ ಪ್ರಾಥಮಿಕ ಆರೋಗ್ಯ ಕೇಂದ್ರದ ಸಮುದಾಯ ಆರೋಗ್ಯ ಅಧಿಕಾರಿ ಸುಧಾಕರ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಾದ ನಾಗರತ್ನ, ರಾಜೇಶ್ವರಿ, ಲತಾ, ಆರೋಗ್ಯ ನಿರೀಕ್ಷಣಾಧಿಕಾರಿ ರಂಗನಾಥ, ಆಶಾ ಕಾರ್ಯಕರ್ತೆ ಶಾರದಮ್ಮ, ಅಡುಗೆ ತಯಾರಿಸುವ ಸಿಬ್ಬಂದಿ ಶ್ವೇತಾ, ಗಾಯಿತ್ರಿ, ವಿದ್ಯಾರ್ಥಿನಿಯರು ಹಾಜರಿದ್ದರು.

# ಸದ್ಯ ರನ್ಯಾ ಬಿಡುಗಡೆ ಅಸಾಧ್ಯ


## ಕಾಫಿಪೋಸಾ ಅಡಿ ಬಂಧನ ಕಾಯಂಗೊಳಿಸಿದ ಹೈಕೋರ್ಟ್ ಸಲಹಾ ಮಂಡಳಿ

**ಬೆಂಗಳೂರು:** ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಆರೋಪಿಯಾಗಿರುವ ನಟಿ ರನ್ಯಾ ರಾವ್ ಅವರನ್ನು ವಿದೇಶಿ ವಿನಿಮಯ ನಿಯಂತ್ರಣ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆ ಕಾಯಿದೆ (ಕಾಫಿಪೋಸಾ)ಯಡಿ ಕಂದಾಯ ಗುಪ್ತಚರ ನಿರ್ದೇಶನಾಲಯವು ಬಂಧಿಸಿರುವ ಆದೇಶವನ್ನು ಹೈಕೋರ್ಟ್‌ನ ಸಲಹಾ ಮಂಡಳಿಯು ಕಾಯಂಪಡಿಸಿದೆ. ಹಾಗಾಗಿ, ರನ್ಯಾ ರಾವ್ ಬಿಡುಗಡೆ ಸದ್ಯಕ್ಕೆ ಅಸಾಧ್ಯ ಎನ್ನುವಂತಾಗಿದೆ.

ಕಾಫಿಪೋಸಾ ಕಾಯಿದೆಯಡಿ ರನ್ಯಾ ಬಂಧನ ಪ್ರಶ್ನಿಸಿ ಆಕೆಯ ಮಲತಾಯಿ ಎಚ್.ಪಿ.ರೋಹಿಣಿ ಸಲ್ಲಿಸಿದ್ದ ಹೇಬಿಯಸ್ ಕಾರ್ಪಸ್ ಅರ್ಜಿಯು ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಮತ್ತು ಪಿ.ಮನ್ಮಥ ರಾವ್ ನೇತೃತ್ವದ ವಿಭಾಗೀಯ ಪೀಠದ ಮುಂದೆ ಬುಧವಾರ ವಿಚಾರಣೆಗೆ ಬಂದಿತು.

ಅರ್ಜಿದಾರರ ಪರ ಹಿರಿಯ ವಕೀಲ ಕಿರಣ್ ಜವಳಿ, "ಹೈಕೋರ್ಟ್‌ನ ಸಲಹಾ ಮಂಡಳಿಯು ಕಾಫಿಪೋಸಾದಡಿ ರನ್ಯಾ ಬಂಸಿರುವುದನ್ನು ಖಚಿತಪಡಿಸಿದೆ ಎಂಬ ಮಾಹಿತಿಯನ್ನು ನ್ಯಾಯಪೀಠಕ್ಕೆ ನೀಡಿ, ಅರ್ಜಿಯನ್ನು ಮೆರಿಟ್ ಮೇಲೆ ವಿಚಾರಣೆ ನಡೆಸಬೇಕು," ಎಂದು ಕೋರಿದರು.

ಆಗ ಕೇಂದ್ರ ಸರಕಾರ ಪರ ವಾದ ಮಂಡನೆಗೆ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್



ಕೆ.ಅರವಿಂದ್ ಕಾಮತ್, "ಅರ್ಜಿದಾರರು ಈಗಷ್ಟೇ ಮೆಮೋ ನೀಡಿದ್ದಾರೆ. ಅದಕ್ಕೆ ಆಕ್ಷೇಪಣೆ ಸಲ್ಲಿಸಲು ಸ್ವಲ್ಪ ಸಮಯ ನೀಡಬೇಕು," ಎಂದು ಮನವಿ ಮಾಡಿದರು. ಹಾಗಾಗಿ, ನ್ಯಾಯಾಲಯ ಎರಡೂ ಕಡೆಯ ವಕೀಲರ ವಾದ ದಾಖಲಿಸಿ ವಿಚಾರಣೆಯನ್ನು ಆ.28ಕ್ಕೆ ನಿಗದಿಪಡಿಸಿತು.

ಕಳೆದ ತಿಂಗಳು ವಿಚಾರಣಾ ನ್ಯಾಯಾಲಯ ನಿಗದಿತ ಸಮಯದಲ್ಲಿ ಡಿಆರ್‌ಐ ಆರೋಪ ಪಟ್ಟಿ ಸಲ್ಲಿಸದ ಕಾರಣಕ್ಕೆ ರನ್ಯಾಗೆ ಜಾಮೀನು ಮಂಜೂರು ಮಾಡಿತ್ತು. ಆದರೆ, ಕಾಫಿಪೋಸಾದಡಿ ಬಂಧನವಾಗಿರುವುದರಿಂದ ಅವರು ಬಿಡುಗಡೆಯಾಗಲು ಸಾಧ್ಯವಿಲ್ಲ.

**ಪ್ರಕರಣದ ಹಿನ್ನೆಲೆ :** ಕೇಂದ್ರ ಕಂದಾಯ ಗುಪ್ತಚರ ಅಧಿಕಾರಿಗಳು ಮಾ.3ರ ಸಂಜೆ 6.30ಕ್ಕೆ ದುಬೈನಿಂದ ಬೆಂಗಳೂರಿಗೆ ಎಮಿರೇಟ್ಸ್ ವಿಮಾನದಲ್ಲಿ ಬಂದಿಳಿದಿದ್ದ ರನ್ಯಾರನ್ನು ಪರಿಶೀಲಿಸಿದ್ದರು. ಮೊದಲಿಗೆ ರನ್ಯಾ ಕೈಚೀಲ ಪರಿಶೀಲಿಸಿದಾಗ ಏನೂ ಪತ್ತೆಯಾಗಿರಲಿಲ್ಲ. ನಂತರ ಇಡೀ ದೇಹ ತಪಾಸಣೆ ನಡೆಸಲು ಮಹಿಳಾ ಡಿಆರ್‌ಐ ತನಿಖಾಕಾರಿಗಳು ಲಿಖಿತ ಒಪ್ಪಿಗೆ ಪಡೆದಿದ್ದರು.

ತಪಾಸಣೆ ವೇಳೆ ಆಕೆಯ ನಡುವಿನ ಭಾಗ, ಮಂಡಿಯ ಕೆಳಭಾಗ, ತೊಡೆಗೆ ಚಿನ್ನದ ಬಾರ್‌ಗಳನ್ನು ಮೆಡಿಕಲ್ ಅಡ್ಹೆಸಿವ್ ಬ್ಯಾಂಡೇಜ್ ಬಳಸಿ ಅಂಟಿಸಲಾಗಿತ್ತು. ತಪಾಸಣೆಯ ಸಂದರ್ಭದಲ್ಲಿ ರನ್ಯಾ ಬಳಿ 12,56,43,362 ರೂ. ಮೌಲ್ಯದ ಚಿನ್ನ ಪತ್ತೆಯಾಗಿತ್ತು. ಅದನ್ನು ಆಧರಿಸಿ ಕಸ್ಟಮ್ಸ್ ಕಾಯಿದೆ 1962ರ ಸೆಕ್ಷನ್ 135 (1)(ಎ) ಮತ್ತು 135(1)(ಬಿ) ಅಡಿ ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.

**ಹೈಕೋರ್ಟ್ ಮೊರೆ ಹೋದ ರನ್ಯಾ ತಾಯಿ :** ನಟಿ ರನ್ಯಾ ರಾವ್ ಅವರ ತಾಯಿ ತಮ್ಮ ಮಗಳ ಬಂಧನವನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ವಿದೇಶಿ ವಿನಿಮಯ ಸಂರಕ್ಷಣೆ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆಗಟ್ಟುವಿಕೆ ಕಾಯಿದೆಯ (ಅಔಈಇ-ಕಔಖಂ) ಅಡಿಯಲ್ಲಿ ರನ್ಯಾ ರಾವ್ ಅವರ ಬಂಧನ ಕಾನೂನುಬಾಹಿರ ಎಂದು ಅವರು ವಾದಿಸಿದ್ದಾರೆ. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯವು, ಕೇಂದ್ರ ಸರ್ಕಾರ-ಕ್ಕೆ ಆಕ್ಷೇಪಣೆ ಸಲ್ಲಿಸಲು ನಾಲ್ಕು ವಾರಗಳ ಕಾಲಾವಕಾಶ ನೀಡಿದೆ. ದುಬೈನಿಂದ ಅಕ್ರಮವಾಗಿ ಚಿನ್ನ ಸಾಗಣೆ ಮಾಡುತ್ತಿದ್ದ ಆರೋಪದ ಮೇಲೆ ರನ್ಯಾ ರಾವ್ ಅವರನ್ನು ಬಂಧಿಸಲಾಗಿದ್ದು, ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ.

ರನ್ಯಾ ಕೇಸ್ ನಲ್ಲಿ ಜಾರಿ ನಿರ್ದೇಶನಾಲಯ ಎಂಟ್ರಿ

ಮುಂಬೈನಲ್ಲಿ ನಡೆದ ಚಿನ್ನ ಕಳ್ಳಸಾಗಣೆ ಪ್ರಕರಣಗಳು, ವಿಶೇಷವಾಗಿ ನಟಿ ರನ್ಯಾ ರಾವ್ ಪ್ರಕರಣದ ಹಿಂದೆ ಹವಾಲಾ ಸಿಂಡಿ-ಕೇಟ್ ಪಾತ್ರ ಪತ್ತೆಯಾದ ನಂತರ ಜಾರಿ ನಿರ್ದೇಶನಾಲಯ (ಇ.ಡಿ) ಕಾರ್ಯಾಚರಣೆಯನ್ನು ತೀವ್ರಗೊಳಿಸಿದೆ. ಇದರ ಭಾಗವಾಗಿ, ಇ.ಡಿ ಅಧಿಕಾರಿಗಳು ದೇಶದ 8 ನಗರಗಳಲ್ಲಿ ದಾಳಿ ನಡೆಸಿದ್ದಾರೆ. ಗುರುವಾರ, ಇ.ಡಿ.ಯ ಪ್ರತ್ಯೇಕ ತಂಡಗಳು ಬೆಂಗಳೂರಿನಲ್ಲಿರುವ ನಟಿ ರನ್ಯಾ ರಾವ್ ಅವರ ಲ್ಯಾವೆಲ್ಲೆ ರಸ್ತೆಯ ಅಪಾರ್ಟ್‌ಮೆಂಟ್, ಆಡುಗೋಡಿಯಲ್ಲಿರುವ ಅವರ ಪತಿ ಜತಿನ್ ಅವರ ಫ್ಲಾಟ್, ಹಾಗೂ ತರುಣ್ ರಾಜ್‌ಗೆ ಸೇರಿದ ಎರಡು ಮನೆಗಳು ಸೇರಿದಂತೆ ನಗರದ 8 ಸ್ಥಳಗಳ ಮೇಲೆ ದಾಳಿ ನಡೆಸಿ, ಮಹತ್ವದ ದಾಖಲೆಗಳನ್ನು ಜಪ್ತಿ ಮಾಡಿದ್ದಾರೆ.

# ಭಾರತದೊಂದಿಗೆ 'ಅರ್ಥಪೂರ್ಣ ಮಾತುಕತೆಗೆ' ಪಾಕಿಸ್ತಾನ ಸಿದ್ಧ

## ಪ್ರಧಾನಿ ಶೆಹಬಾಜ್ ಷರೀಫ್



**ಇಸ್ಲಾಮಾಬಾದ್:** ಧೀರ್ಘಕಾಲದಿಂದ ಬಾಕಿ ಇರುವ ಎಲ್ಲಾ ವಿವಾದಗಳನ್ನು ಬಗೆಹರಿಸಿಕೊಳ್ಳಲು ಭಾರತದೊಂದಿಗೆ 'ಅರ್ಥಪೂರ್ಣ ಮಾತುಕತೆ' ಯಲ್ಲಿ ತೊಡಗಿಸಿಕೊಳ್ಳುವ ಪಾಕಿಸ್ತಾನದ ಇಚ್ಛೆಯನ್ನು ಪ್ರಧಾನಿ ಶೆಹಬಾಜ್ ಷರೀಫ್ ಬುಧವಾರ ಪುನರುಚ್ಚರಿಸಿದ್ದಾರೆ.

ಬ್ರಿಟಿಷ್ ಹೈ ಕಮಿಷನರ್ ಜೇನ್ ಮ್ಯಾರಿಯೊಟ್ ಅವರನ್ನು ಪ್ರಧಾನ ಮಂತ್ರಿ ಭವನದಲ್ಲಿ ಭೇಟಿಯಾದ ಸಂದರ್ಭದಲ್ಲಿ ಶೆಹಬಾಜ್ ಷರೀಫ್ ಈ ರೀತಿಯ ಹೇಳಿಕೆ ನೀಡಿದ್ದಾರೆ ಎಂದು ಅಧಿಕೃತ ಹೇಳಿಕೆಯೊಂದು ತಿಳಿಸಿದೆ.

ಉಭಯ ನಾಯಕರು ದಕ್ಷಿಣ ಏಷ್ಯಾ, ಮಧ್ಯಪ್ರಾಚ್ಯದಲ್ಲಿನ ಪ್ರಾದೇಶಿಕ ಬೆಳವಣಿಗೆಗಳು ಮತ್ತು ಪಾಕಿಸ್ತಾನ-ಯುನೈಟೆಡ್ ಕಿಂಗ್‌ಡಮ್ ನಡುವೆ ನಡೆಯುತ್ತಿರುವ ದ್ವಿಪಕ್ಷೀಯ ಸಹಕಾರದ ಕುರಿತು ಚರ್ಚಿಸಿದ್ದಾರೆ.

ಇತ್ತೀಚಿನ ಪಾಕಿಸ್ತಾನ-ಭಾರತ ಬಿಕ್ಕಟ್ಟಿನ ಸಂದರ್ಭದಲ್ಲಿ ಉದ್ವಿಗ್ನತೆ ಕಡಿಮೆ ಮಾಡುವಲ್ಲಿ ಯುಕೆಯ ನೆರವಿಗೆ ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಬಾಕಿ ಇರುವ ಎಲ್ಲಾ ವಿವಾದಗಳನ್ನು ಬಗೆಹರಿಸಿಕೊಳ್ಳಲು ಭಾರತದೊಂದಿಗೆ ಅರ್ಥಪೂರ್ಣ ಮಾತುಕತೆಗೆ ಪಾಕಿಸ್ತಾನ ಸಿದ್ಧವಿರುವುದಾಗಿ ಪುನರುಚ್ಚರಿಸಿದರು ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿ-ಟ್ಟುಕೊಂಡು ಭಾರತ ಮೇ 7 ರಂದು 'ಆಪರೇಷನ್ ಸಿಂಧೂರ್' ಆರಂಭಿಸಿದ ನಂತರ ಉದ್ವಿಗ್ನತೆ ಉಂಟಾಗಿತ್ತು. ನಾಲ್ಕು ದಿನಗಳ ಮಿಲಿಟರಿ ಕಾರ್ಯಾಚರಣೆ ಬಳಿಕ ಮೇ 10 ರಂದು ಕದನ ವಿರಾಮ ಒಪ್ಪಂದಕ್ಕೆ ಉಭಯ ರಾಷ್ಟ್ರಗಳು ಸಮ್ಮತಿ ನೀಡಿದ್ದವು.

ಆದಾಗ್ಯೂ, ಪಾಕಿಸ್ತಾನ ಜೊತೆಗಿನ ಯಾವುದೇ ಮಾತುಕತೆಯು ಭಯೋತ್ಪಾದನೆಯ ವಿಷಯಗಳು ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ವಾಪಸಾತಿಗೆ ಸೀಮಿತವಾಗಿರಬೇಕು ಎಂದು ಭಾರತ ಹೇಳುತ್ತಿದೆ.

ಪಾಕಿಸ್ತಾನ-ಯುಕೆ ದ್ವಿಪಕ್ಷೀಯ ಸಂಬಂಧಗಳಲ್ಲಿ ಬಲವರ್ಧನೆಯಾಗಿರುವುದಾಗಿ ಹೇಳಿದ ಪ್ರಧಾನಿ ಷರೀಫ್, ಉಭಯ ದೇಶಗಳ ಇತ್ತೀಚಿನ ವ್ಯಾಪಾರ ಮಾತುಕತೆಗಳನ್ನು ಸ್ವಾಗತಿಸಿದ್ದಾರೆ. ಇದರಿಂದ ಪರಸ್ಪರ ಪ್ರಯೋಜನವಾಗಲಿದೆ ಎಂದು ಹೇಳಿದ್ದಾರೆ. ಪಾಕಿಸ್ತಾನ ಇಂಟರ್ ನ್ಯಾಷನಲ್ ಏರ್ ಲೈನ್ಸ್ ವಿಮಾನಗಳನ್ನು ಪುನರಾಂಭಿಸುವ ಯುಕೆ ಸರ್ಕಾರದ ನಿರ್ಧಾರವನ್ನು ಶ್ಲಾಘಿಸಿದ್ದಾರೆ. ಇದು ಬ್ರಿಟಿಷ್ ಪಾಕಿಸ್ತಾನಿ ಜನರ ಸುಲಭ ಪ್ರಯಾಣ ಮತ್ತು ಜನರೊಂದಿಗೆ ವಿನಿಮಯ ಹೆಚ್ಚಿಸುವ ಒಂದು ಪ್ರಮುಖ ಹೆಜ್ಜೆಯಾಗಲಿದೆ ಎಂದು ವಿವರಿಸಿದ್ದಾರೆ.

### ಮಹದಾಯಿ ಯೋಜನೆ: ಅನುಮತಿ ನೀಡದಿರಲು ಕೇಂದ್ರದ ನಿರ್ಧಾರ

# ಕರ್ನಾಟಕದ ಜನತೆಗೆ ಬಗೆಯುವ ದ್ರೋಹ-ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ಮಹದಾಯಿ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂಬ ಕೇಂದ್ರ ಸರ್ಕಾರದ ನಿರ್ಧಾರ ಕರ್ನಾಟಕದ ಜನತೆಗೆ ಬಗೆಯುವ ದ್ರೋಹವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಹೇಳಿದ್ದಾರೆ. ಕೇಂದ್ರ ಸರ್ಕಾರದ ನಿರ್ಧಾರವನ್ನು ಕರ್ನಾಟಕ ಸರ್ಕಾರ ಅತ್ಯುಗ್ರವಾಗಿ ಖಂಡಿಸುವುದು ಮಾತ್ರವಲ್ಲ, ಈ ಅನ್ಯಾಯದ ವಿರುದ್ಧ ಸಮಸ್ತ ಕನ್ನಡಿಗರೊಂದಿಗೆ ಹೋರಾಟ ನಡೆಸಲಿದೆ ಎಂದು ಎಚ್ಚರಿಕೆ ನೀಡಿ-ದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ, ಮಹದಾಯಿ ಯೋಜನೆಗೆ ಅನುಮತಿ ನೀಡುವುದಿಲ್ಲ ಎಂದು ಕೇಂದ್ರ ಪರಿಸರ ಮತ್ತು ಅರಣ್ಯ ಖಾತೆ ಸಚಿವ ಭೂಪೇಂದ್ರ ಯಾದವ್ ಅವರೇ ತಿಳಿಸಿರುವುದಾಗಿ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರು ಹೇಳಿದ್ದಾರೆ. ಕೇಂದ್ರ ಸರ್ಕಾರದ ಈ ನಿರ್ಧಾರ ಕರ್ನಾಟಕದ ಹಿತಾಸಕ್ತಿ ಮೇಲಿನ ಇನ್ನೊಂದು ಪ್ರಹಾರವಾಗಿದೆ ಎಂದು ಎಂದು ವಾಗ್ದಾಳಿ ನಡೆಸಿದ್ದಾರೆ.

2018ರಲ್ಲಿ ಮಹದಾಯಿ ಜಲವಿವಾದ ನ್ಯಾಯಮಂಡಳಿ 13.42 ಟಿಎಂಸಿ ನೀರನ್ನು ನಮ್ಮ ರಾಜ್ಯಕ್ಕೆ ನಿಗದಿಪಡಿಸಿ ಐತೀರ್ಪು ನೀಡಿದ್ದರೂ ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯಿಂದಾಗಿ ಯೋಜನೆಯ ಅನುಷ್ಠಾನ ಸಾಧ್ಯವಾಗುತ್ತಿಲ್ಲ.

ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಗದಗ, ಬಾಗಲಕೋಟೆ ಪ್ರದೇಶದ ಜನತೆಯ ಕುಡಿಯುವ ನೀರಿಗಾಗಿ 40 ಟಿಎಂಸಿ ನೀರನ್ನು ಬಳಸಿಕೊಳ್ಳುವ ಕಳಸಾ-ಬಂಡೂರಿ ಯೋಜನೆ ಈಗಾಗಲೇ ಅನುಷ್ಠಾನಕ್ಕೆ ಸಿದ್ಧಗೊಂಡಿದ್ದು, ಗೋವಾದ ಬಿಜೆಪಿ ಸರ್ಕಾರದ ಜೊತೆ ಷಾಮೀಲಾಗಿ ಕೇಂದ್ರ ಸರ್ಕಾರ ನಿರಂತರವಾಗಿ ಅಡ್ಡಗಾಲು ಹಾಕುತ್ತಿದೆ ಎಂದು ಆರೋಪಿಸಿದ್ದಾರೆ.

ರಾಜ್ಯದ ಬಿಜೆಪಿ ನಾಯಕರಾಗಲಿ, ಕನ್ನಡಿಗರಿಂದಲೇ ಆರಿಸಿ ಹೋಗಿರುವ ಬಿಜೆಪಿ ಮತ್ತು ಜೆಡಿಎಸ್ ಸಂಸದರಾಗಲಿ ಈ ಅನ್ಯಾಯದ ವಿರುದ್ಧ ದನಿ ಎತ್ತಲಾಗದಷ್ಟು ನಿರ್ವೀರ್ಯರಾಗಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ತಿರಸ್ಕರಿಸಿದ ಕರ್ನಾಟಕದ ಜನತೆಯ ವಿರುದ್ಧ ಸೇಡು ತೀರಿಸಿಕೊಳ್ಳುವ ದುರುದ್ದೇಶದಿಂದಲೇ ಮಹದಾಯಿ ಯೋಜನೆಗೆ ಪರಿಸರ ಖಾತೆಯ ಅನುಮತಿಯನ್ನು ನಿರಾಕರಿಸಿರುವುದು ಸ್ಪಷ್ಟವಾಗಿದೆ ಎಂದು ಟೀಕಿಸಿದ್ದಾರೆ.

ತೆರಿಗೆ ಹಂಚಿಕೆ, ಕೇಂದ್ರ ಪ್ರಾಯೋಜಿತ ಯೋಜನೆಗಳಲ್ಲಿ ಅನುದಾನ ಕಡಿತವೂ ಸೇರಿದಂತೆ ನೆಲ-ಜಲ-ಭಾಷೆಯ ವಿಚಾರದಲ್ಲಿ ಕೇಂದ್ರ ಸರ್ಕಾರ ಕರ್ನಾಟಕದ ವಿಚಾರದಲ್ಲಿ ನಿರಂತರವಾಗಿ ಅನ್ಯಾಯ ಎಸಗುತ್ತಿದೆ. ಕೇಂದ್ರ ಸರ್ಕಾರದ ಈ ಮಲತಾಯಿ ಧೋರಣೆ ವಿರುದ್ಧ ನಾಡಿನ ಸಮಸ್ತ ಕನ್ನಡಿಗರನ್ನು ಜೊತೆಯಲ್ಲಿ ಕಟ್ಟಿಕೊಂಡು ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿ-ದ್ದಾರೆ.

# ಮಕ್ಕಳಲ್ಲಿ ಪೋಕ್ಸೋ ಮತ್ತು ಬಾಲ್ಯ ವಿವಾಹ ಕಾಯ್ದೆ ಅರಿವು ಅತ್ಯಗತ್ಯ : ನ್ಯಾ.ಸಂತೋಷ್

**ಶಿವಮೊಗ್ಗ:** ಸಾಮಾಜಿಕ ಜಾಲತಾಣದ ಪರಿಣಾಮದಿಂದಾಗಿ ಪ್ರಸ್ತುತ ಮಕ್ಕಳ ಮೇಲಿನ ಅಪರಾಧಗಳು ಹೆಚ್ಚುತ್ತಿರುವುದು ಆತಂಕಕಾರಿಯಾಗಿದ್ದು, ಎಲ್ಲ ಮಕ್ಕಳು ಪೋಕ್ಸೋ ಹಾಗೂ ಬಾಲ್ಯವಿವಾಹದ ಕಾಯ್ದೆ ಬಗ್ಗೆ ತಿಳಿದುಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಸಂತೋಷ್ ಎಂ.ಎಸ್ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಕಾನೂನು ಕೋಶ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಗಳ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ಪ್ರೌಢಶಾಲೆಗಳ ಹೆಣ್ಣು ಮಕ್ಕಳಿಗೆ ಬಾಲ್ಯ ವಿವಾಹ ನಿಷೇಧ ಹಾಗೂ ಲೈಂಗಿಕ ದೌರ್ಜನ್ಯ ತಡೆಗಟ್ಟುವ ಬಗ್ಗೆ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ಜಾಲತಾಣಗಳ ಆಕರ್ಷಣೆಗೆ ಒಳಗಾಗಿ ಇತ್ತೀಚೆಗೆ ಚಿಕ್ಕ ವಯಸ್ಸಿನ ಮಕ್ಕಳು ಮನೆ ಬಿಟ್ಟು ಹೋಗಿ ಮದುವೆಯಾಗುತ್ತಿರುವುದು ಹಾಗೂ ಇತರೆ ಅಪರಾಧಗಳನ್ನು ಕಾಣುತ್ತಿದ್ದೇವೆ. 2023-24ರಲ್ಲಿ ನಮ್ಮ ಜಿಲ್ಲಾ ವ್ಯಾಪ್ತಿಯಲ್ಲೇ 247 ಜನ ಬಾಲ ಗರ್ಭಿಣಿಯರ ಪ್ರಕರಣ ದಾಖಲಾಗಿದ್ದು, ಸಾಮಾಜಿಕ ಜಾಲತಾಣಗಳು ಮಕ್ಕಳ ಮನಸ್ಸಿನ ಮೇಲೆ ದುಷ್ಪರಿಣಾಮಗಳನ್ನು ಬೀರುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಕಾನೂನು ನಮ್ಮೆಲ್ಲರಿಗೆ ಹಲವು ಮೂಲಭೂತ ಹಕ್ಕುಗಳನ್ನು,




ಸ್ವಾತಂತ್ರ್ಯವನ್ನು ನೀಡಿದೆ. ಅದರ ದುರ್ಬಳಕೆ ಆಗಬಾರದು. ದುರ್ಬಳಕೆಯನ್ನು ತಡೆಯಲು ಕಾಯ್ದೆಗಳ ರೂಪದಲ್ಲಿ ಕೆಲವು ನಿರ್ಬಂಧಗಳನ್ನು ಹಾಕಲಾಗಿದೆ.

ಕಾನೂನಿನ ಕಣ್ಣಿನಲ್ಲಿ ನಾವೆಲ್ಲರೂ ಸಮಾನರು. ಇದು ಸಂವಿಧಾನದಲ್ಲೂ ಅಡಕವಾಗಿದೆ. ನಮ್ಮ ನೆಲದ ಕಾನೂನು ಸಂವಿಧಾನ, ಇದೇ ನಮ್ಮ ತಳಹದಿ ಮತ್ತು ಬುನಾದಿ, ನಾವೆಲ್ಲರು ನಮ್ಮ ನೆಲದ ಕಾನೂನನ್ನು ಅನುಸರಿಸಬೇಕು. ಕಾನೂನು ಎಂದರೆ ಒಂದು ಸಾಮಾನ್ಯ ಜ್ಞಾನ. ಅದನ್ನು ನಾವೆಲ್ಲರೂ ಅರಿತಿರಬೇಕು ಎಂದರು.

ಪೋಕ್ಸೊ ಹಾಗೂ ಬಾಲ್ಯವಿವಾಹ ಕಾಯ್ದೆಗಳ ಬಗ್ಗೆ ಎಲ್ಲ ಮಕ್ಕಳಿಗೆ ಅರಿವು ಇರಬೇಕು. ಗುಡ್ ಟಚ್ ಮತ್ತು ಬ್ಯಾಡ್ ಟಚ್ ಬಗ್ಗೆ ಜ್ಞಾನ ಇರಬೇಕು. ಯಾವುದೋ ಉದ್ದೇಶದಿಂದ ಪುರುಷ/ಗಂಡು ಮಕ್ಕಳು ಹೆಣ್ಣು ಮಕ್ಕಳನ್ನು ಮುಟ್ಟುವುದು, ಸ್ಪರ್ಶಿಸುವುದರ ಕುರಿತು ಜಾಗೃತೆಯಿಂದರಬೇಕು.

ಪೋಕ್ಸೋ ಹಾಗೂ ಬಾಲ್ಯ ವಿವಾಹ ಕಾಯ್ದೆಗಳಡಿಯಲ್ಲಿ ಹೆಣ್ಣು ಮಕ್ಕಳಿಗೆ ಎಲ್ಲ ರೀತಿಯಲ್ಲಿ ರಕ್ಷಣೆ ಇದೆ. ಅದನ್ನು ಸರಿಯಾದ ಕ್ರಮದಲ್ಲಿ ಬಳಸಿಕೊಳ್ಳಬೇಕು. ಶಾಲೆ ಹಾಗೂ ತಮ್ಮ ಸುತ್ತಮುತ್ತಲಿನಲ್ಲಿ ಬ್ಯಾಡ್ ಟಚ್‌ನಂತಹ ಪ್ರಕರಣಗಳು ಅಥವಾ ಇಂತಹ ಅನುಭವವಾದರೆ ಶಾಲಾ ಶಿಕ್ಷಕರಿಗೆ ಅಥವಾ ತಂದೆ ತಾಯಿಗೆ ಕೂಡಲೇ ತಿಳಿಸಬೇಕು. ನಿಮ್ಮನ್ನು ರಕ್ಷಣೆ ಮಾಡುವ ಸಂಪೂರ್ಣ ಜವಾಬ್ದಾರಿ ಕಾನೂನು ಕೈಗೊಳುತ್ತದೆ ಎಂದು ಕಿವಿ ಮಾತು ಹೇಳಿದರು.

ಮಾಜಿ ರಾಷ್ಟ್ರಪತಿ ಅಬ್ದುಲ್ ಕಲಾಂ ಅವರ ಮಾತಿನಂತೆ "ದೇವರು ಯಾವಾಗಲು ನಮ್ಮ ಜೊತೆ ಇರುತ್ತಾ-ರೆ. ಇವತ್ತು ನನ್ನ ದಿನ, ನಾನು ಇದನ್ನು ಮಾಡುತ್ತೇನೆ, ನಾನೇ ಉತ್ತಮ, ನಾನೇ ವಿಜಯಶಾಲಿ" ಈ 5 ಸೂತ್ರಗಳು ಮಕ್ಕಳು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ನಮ್ಮ ಜ್ಞಾನದ ಮೇಲೆ ನಂಬಿಕೆ ಮತ್ತು ವಿಶ್ವಾಸ ಬೆಳೆಸಿಕೊಳ್ಳಬೇಕು. ಆ ದಿಸೆಯಲ್ಲಿ ಸಾಗಿದರೆ ಯಶಸ್ಸು ಪಡೆಯಬಹುದು ಎಂದು ಮಕ್ಕಳನ್ನು ಉತ್ತೇಜಿಸಿದರು.

ಶಿವಮೊಗ್ಗ ಕ್ಷೇತ್ರ ಶಿಕ್ಷಣಾಧಿಕಾರಿ ರಮೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಸರ್ಕಾರಿ ಶಾಲೆಯ ಮಕ್ಕಳಿಗೆ ಪೋ-ಕ್ಸೋ ಹಾಗೂ ಬಾಲ್ಯ ವಿವಾಹ ಕಾಯ್ದೆ ಕುರಿತು ಅರಿವು ಅತ್ಯಗತ್ಯ. ಸರ್ಕಾರಿ ಶಾಲೆಯಲ್ಲಿ ಬಡವರು ಹಾಗೂ ಮಧ್ಯವರ್ಗದ ಮಕ್ಕಳೇ ಹೆಚ್ಚಾಗಿ ಓದುವುದರಿಂದ ಆ ಮಕ್ಕಳ ಕುಟುಂಬದ ತಂದೆತಾಯಿಗಳು ಅನಕ್ಷರಸ್ಥರಾಗಿರುತ್ತಾರೆ. ಇದರಿಂದ ಪೋಕ್ಸೋ ಹಾಗೂ ಬಾಲ್ಯ ವಿವಾಹದಂತಹ ಕಾಯ್ದೆಗಳ ಬಗ್ಗೆ ಕುಟುಂಬಕ್ಕೆ ಮತ್ತು ಮಕ್ಕಳಿಗೆ ಸಾಮಾನ್ಯವಾಗಿ ಅರಿವು ಇರುವುದಿಲ್ಲ. ಈ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ನಗರದ 7 ಕರ್ನಾಟಕ ಪಬ್ಲಿಕ್ ಶಾಲೆಗಳ ಮಕ್ಕಳನ್ನು ಒಟ್ಟಾಗಿ ಸೇರಿಸಿ ಈ ಕಾರ್ಯಕ್ರಮವನ್ನು ರೂಪಿಸಲಾಗಿದೆ. ಈ ಮೂಲಕ ಅವರಿಗೆ ಪೋಕ್ಸೋ ಹಾಗೂ ಬಾಲ್ಯವಿವಾಹ ಕಾಯ್ದೆದ ಕುರಿತು ಜಾಗೃತಿ ಮೂಡಿಸಲಾಗುತ್ತಿದ್ದು ಮಕ್ಕಳು ಇದರ ಸದುಪಯೋಗ ಪಡೆಯಬೇಕು ಎಂದರು.

ಈ ವೇಳೆ ಬಾಲ್ಯ ವಿವಾಹ ನಿಷೇಧ ಹಾಗೂ ಪೋಕ್ಸೋ ಕಾಯ್ದೆ ಬಗ್ಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

### ಬಾಳೆಹೊನ್ನೂರಲ್ಲಿ ಇಬ್ಬರು ಮೃತ: ಪುಂಡಾನೆಗಳ ಸೆರೆಗೆ ಆದೇಶ

# ಮಾನವ-ವನ್ಯಜೀವಿ ಸಂಘರ್ಷ-ನಿರಂತರ ನಿಗಾಕ್ಕೆ ಅಧಿಕಾರಿಗಳಿಗೆ ಸೂಚನೆ

**ಚಿಕ್ಕಮಗಳೂರು, ಜು 28:** ಹೊಸ ಪ್ರದೇಶದಲ್ಲಿ ವನ್ಯಜೀವಿಗಳು ಕಾಣಿಸಿಕೊಂಡಾಗ ನೆರೆ ಜಿಲ್ಲೆಯ ಆನೆ ಕ್ಷಿಪ್ರ ಕಾರ್ಯಪಡೆ ಸಿಬ್ಬಂದಿಯ ನೆರವು ಪಡೆದು ಆನೆಗಳನ್ನು ಕಾಡಿಗೆ ಮರಳಿಸಬೇಕು. ಪುಂಡಾನೆ ಇದ್ದರೆ ಸೆರೆ ಹಿಡಿಯಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಆದೇಶ ನೀಡಿದರು.

ಯಾದಗಿರಿಯಲ್ಲಿ ಇಂದು ವರ್ಚುವಲ್ ಸಭೆಯಲ್ಲಿ ಮಾತನಾಡಿದ ಸಚಿವರು, ಚಿಕ್ಕಮಗಳೂರು ಜಿಲ್ಲೆ, ಎನ್.ಆರ್. ಪುರ ತಾಲೂಕು ಬಾಳೆಹೊನ್ನೂರು ಬಳಿ ಕಳೆದ ನಾಲ್ಕು ದಿನಗಳ ಅಂತರದಲ್ಲಿ ಕಾಡಾನೆ ದಾಳಿಯಿಂದ ಇಬ್ಬರು ಮೃತಪಟ್ಟಿರುವ ಬಗ್ಗೆ ತೀವ್ರ ಶೋಕ ವ್ಯಕ್ತಪಡಿಸಿದ ಅವರು, ಮಾನವ-ವನ್ಯಜೀವಿ ಸಂಘರ್ಷ ಇರುವ ವಲಯಗಳ ಮೇಲೆ ಉನ್ನತಾಧಿಕಾರಿಗಳು ಸತತ ನಿಗಾ ಇಟ್ಟು ಜನರ ಅಮೂಲ್ಯ ಜೀವ ಮತ್ತು ರೈತರ ಬೆಳೆ ರಕ್ಷಣೆಗೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಆನೆಗಳು ನಾಡಿನಲ್ಲಿ ಕಾಣಿಸಿಕೊಂಡ ಕೂಡಲೇ ಅರಣ್ಯಾಧಿಕಾರಿಗಳು ಕ್ರಮ ವಹಿಸಬೇಕು. ಸ್ಥಳೀಯರಿಗೆ ಮಾಹಿತಿ ನೀಡಬೇಕು. ಆನೆಗಳನ್ನು ಕಾಡಿಗೆ ಮರಳಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ರಾಜ್ಯದೆಲ್ಲೆಡೆ ಮಳೆಯಾಗುತ್ತಿದೆ. ಕೆರೆ, ಕಟ್ಟೆಗಳು ತುಂಬಿವೆ. ಕಾಡಿನಲ್ಲಿ ಹುಲ್ಲು, ಸೊಪ್ಪು, ತೊಗಟೆ ಇತ್ಯಾದಿ ಆಹಾರ ಲಭ್ಯವಿದ್ದರೂ ಆನೆಗಳು ಏಕೆ ನಾಡಿಗೆ ಬರುತ್ತಿವೆ ಎಂಬ ಬಗ್ಗೆ ಅಧಿಕಾರಿಗಳು ಗಮನ ಹರಿಸಿ, ಮುಂದೆ ಈ ರೀತಿ ಅನಾಹುತ ಸಂಭವಿಸದಂತೆ ಕ್ರಮ ವಹಿಸಬೇಕು. ಆನೆ ಕಂದಕಗಳು ಸತತ ಮಳೆಯಿಂದ ಮುಚ್ಚಿಹೋಗಿವೆ; ಸೌರ ತಂತಿ ಬೇಲಿ, ಟೆಂಟಕಲ್ ಫೆನ್ಸಿಂಗ್ ಮರಬಿದ್ದು ಸಂಪರ್ಕ ಕಡಿದುಕೊಂಡಿದೆ ಎಂಬ ದೂರುಗಳಿವೆ. ಕೂಡಲೇ ಇವುಗಳ ನಿರ್ವಹಣೆ ಮಾಡಬೇಕು. ಅರಣ್ಯ ಗಸ್ತು ಸಿಬ್ಬಂದಿ ಈ ಬಗ್ಗೆ ನಿರಂತರವಾಗಿ ನಿಗಾ ಇಟ್ಟು, ಉನ್ನತಾಧಿಕಾರಿಗಳಿಗೆ ವರದಿ ಮಾಡಿ ದುರಸ್ತಿ ಮಾಡಿಸಬೇಕು ಎಂದರು.

ಆನೆಗಳಿಂದ ಹೆಚ್ಚಿನ ಸಾವು ಸಂಭವಿಸುತ್ತಿದ್ದು, ಹೆಚ್ಚುವರಿ ರೈಲ್ವೆ ಬ್ಯಾರಿಕೇಡ್ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಕೂಡಲೇ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ, ಕಾಮಗಾರಿ ಆರಂಭಿಸಿ, ನಿಗದಿತ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ ಜನರ ಅಮೂಲ್ಯ ಜೀವ ಮತ್ತು ರೈತರ ಬೆಳೆ ರಕ್ಷಣೆಗೆ ಅರಣ್ಯ ಸಿಬ್ಬಂದಿ ಮುಂದಾಗಬೇಕು ಎಂದರು.

ಇಷ್ಟು ವರ್ಷಗಳ ಕಾಲ ಕಾಡಾನೆಗಳ ಹಾವಳಿಯೇ ಇಲ್ಲದಿದ್ದ ಪ್ರದೇಶಗಳಲ್ಲೂ ಈಗ ಆನೆ-ಮಾನವ ಸಂಘರ್ಷ ಹೆಚ್ಚಳವಾಗುತ್ತಿದೆ. ಯಾವ ಕಾರಣದಿಂದ ಸಂಘರ್ಷ ವಿಸ್ತರಣೆ ಆಗುತ್ತಿದೆ ಎಂಬ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಿ ಎಂದ ಸಚಿವರು, ಇತ್ತೀಚೆಗೆ ತಾವು ಸಭೆ ನಡೆಸಿ ವನ್ಯಜೀವಿಗಳ ಸಂರಕ್ಷಣೆ ಹಾಗೂ ವನ್ಯಜೀವಿಗಳಿಂದ ಮಾನವ ಜೀವ ಹಾನಿ, ಬೆಳೆ ಹಾನಿ ಆಗದಂತೆ ನಿಯಂತ್ರಿಸಲು ಅತ್ಯಾಧುನಿಕ ತಂತ್ರಜ್ಞಾನ ಬಳಸಿ, ಕಾವಲು ಕಾಯಲು ಮತ್ತು ಕಾಡಿನಂಚಿನ ಜನರಿಗೆ ಎಚ್ಚರಿಕೆ ಸಂದೇಶ ರವಾನಿಸಲು ಏಕೀಕೃತ ಕಮಾಂಡ್ ಕೇಂದ್ರ ಸ್ಥಾಪಿಸಲು ಸೂಚಿಸಿದ್ದು, ಕೂಡಲೇ ಇದಕ್ಕೆ ರೂಪುರೇಷೆ ಸಿದ್ಧಪಡಿಸಿ ಡಿಪಿಆರ್ ಸಲ್ಲಿಸಲು ತಿಳಿಸಿದರು.

ಮುಖ್ಯ ವನ್ಯಜೀವಿ ಪರಿಪಾಲಕರು, ಮಾನವ-ವನ್ಯಜೀವಿ ಸಂಘರ್ಷ ಇರುವ ಪ್ರತಿ ವೃತ್ತದ, ಸಂಬಂಧಿತ ವಲಯದ ಅಧಿಕಾರಿಗಳೊಂದಿಗೆ ವಾರಕ್ಕೊಮ್ಮೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸಭೆ ನಡೆಸಿ, ಸೂಚನೆ ನೀಡಬೇಕು. ಸಂಘರ್ಷ ನಿಯಂತ್ರಣಕ್ಕೆ ಕ್ರಮ ವಹಿಸಬೇಕು ಎಂದೂ ನಿರ್ದೇಶನ ನೀಡಿದರು.

ಹೊರಗುತ್ತಿಗೆಯ ಮುಂಚೂಣಿ ಸಿಬ್ಬಂದಿಗೆ ಸಕಾಲದಲ್ಲಿ ವೇತನ ಪಾವತಿಸಲು ಮತ್ತು ಅವರೆಲ್ಲರಿಗೂ ಅಪಾಯ ಭತ್ಯೆ, ಆಹಾರ ಭತ್ಯೆ ಸಕಾಲದಲ್ಲಿ ಪಾವತಿ ಆಗುತ್ತಿದೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಲು ಸೂಚಿಸಿದ ಸಚಿವರು ಈ ಬಗ್ಗೆ ಇನ್ನು ಮುಂದೆ ದೂರು ಬಂದರೆ, ಸಂಬಂಧಿತ ವಲಯ ಅರಣ್ಯಾಧಿಕಾರಿ ಮತ್ತು ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಎಂದು ಎಚ್ಚರಿಸಿದರು.

ಅರಣ್ಯ ಪಡೆ ಮುಖ್ಯಸ್ಥೆ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕ ಪಿ.ಸಿ.ರೇ, ಉನ್ನತಾಧಿಕಾರಿಗಳಾದ ಮನೋಜ್ ರಾಜನ್ ಮತ್ತಿತರರು ವರ್ಚುವಲ್ ಸಭೆಯಲ್ಲಿ ಪಾಲ್ಗೊಂಡಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**